ಬೆಂಗಳೂರು ಸಂಪುಟ: 16 ಸಂಚಿಕೆ: 20 ಪುಟ: 06 ಮಂಗಳವಾರ 10-12-2024 Mail: mussanje2010@gmail.com www.mussanjenews.com ₹ 3

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh

## ನಾವೂ ಈಗ ಡಿಜಿಟಲೀಕರಣಗೊಂಡಿದ್ದೇವೆ...

ಪ್ರಿಯ ಓದುಗರೇ.....

ತಮ್ಮೆಲ್ಲರ ಒತ್ತಾಸೆಯ ಮೇರೆಗೆ ನಿಮ್ಮ 'ಮುಸ್ಸಂಜೆ' ಸಂಜೆ ದಿನ ಪತ್ರಿಕೆ ಈಗ ಡಿಜಿಟಲೀಕರಣಗೊಂಡಿದೆ. ಹದಿನೈದು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 16ನೇ ವಸಂತಕ್ಕೆ ಕಾಲಿಟ್ಟ ಈ ಸುಸಂದರ್ಭದಲ್ಲಿ ರಾಜ್ಯದಲ್ಲೇ ಅಲ್ಲದೇ ದೇಶದ ವಿವಿಧೆಡೆಗಳಿಂದ ಸಹಕಾರ ದೊರೆತ ಹಿನ್ನೆಲೆಯಲ್ಲಿ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೂತನ ವೆಬ್‌ಸೈಟ್ ಲಾಂಚ್ ಮಾಡುವ ಮೂಲಕ onlineನಲ್ಲಿ ಪತ್ರಿಕೆ ವೀಕ್ಷಿಸಲು ಅವಕಾಶ ಕಲ್ಪಿಸಿದ್ದೇವೆ. ಈಗ ಪತ್ರಿಕೆಯನ್ನು ನೈಜ ಸುದ್ದಿಯೊಂದಿಗೆ ಹೊಸ ರೂಪದಲ್ಲಿ ನಿಮ್ಮ ಮುಂದಿಡುವ ಪ್ರಯತ್ನ ಮಾಡಿದ್ದೇವೆ. ನಮ್ಮ ಈ ಪ್ರಯತ್ನಕ್ಕೆ ಓದುಗರು, ಚಂದಾದಾರರೂ, ಹಾಗೂ ಜಾಹೀರಾತುದಾರರಾದ ತಮ್ಮ ಪ್ರೋತ್ಸಾಹವನ್ನು ಎಂದಿನಂತೆ ನಿರೀಕ್ಷಿಸುತ್ತೇವೆ...

www.mussanjenews.com

- ಇಂತಿ ಸಂಪಾದಕ

## ರಾಜ್ಯದಲ್ಲಿ ಮೂರು ದಿನ ಶೋಕಾಚರಣೆ; ನಾಳೆ ಶಾಲಾ-ಕಾಲೇಜುಗಳಿಗೆ ರಜೆ

# ಪಯಣ ಮುಗಿಸಿದ ಕೃಷ್ಣ

## ಬುಧವಾರ ಹುಟ್ಟೂರು ಸೋಮನಹಳ್ಳಿಯಲ್ಲಿ ಅಂತ್ಯಕ್ರಿಯೆ



ಜನನ: 01-05-1932
ಮರಣ: 10-12-2024

ಬೆಂಗಳೂರು : ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಕೇಂದ್ರದ ಮಾಜಿ ವಿದೇಶಾಂಗ ಸಚಿವ, ಮಾಜಿ ರಾಜ್ಯಪಾಲರಾಗಿದ್ದ ಎಸ್. ಎಂ. (ಸೋಮನಹಳ್ಳಿ ಮಲ್ಲಯ್ಯ) ಕೃಷ್ಣ ಅವರು ಇಂದು ಬೆಳಗಿನಜಾವ 2.30 ರ ಸುಮಾರಿಗೆ ನಿಧನರಾಗಿದ್ದಾರೆ. ಅವರಿಗೆ 92 ವರ್ಷ ವಯಸ್ಸಾಗಿತ್ತು.

ಮಂಗಳವಾರ ಬೆಳಗಿನಜಾವ ಕೃಷ್ಣ ಅವರ ಆರೋಗ್ಯದಲ್ಲಿ ಏರುಪೇರಾಗಿತ್ತು. ಹಾಗಾಗಿ, ತಕ್ಷಣ ವೈದ್ಯರಿಗೆ ಕುಟುಂಬಸ್ಥರು ಮಾಹಿತಿ ನೀಡಿದ್ದರು. ಕೂಡಲೇ ವೈದ್ಯರು ಮನೆಗೆ ಆಗಮಿಸಿ ತಪಾಸಣೆ ನಡೆಸಿದ್ದರು. ನಂತರ ಎಸ್. ಎಂ. ಕೃಷ್ಣ ಅವರು ಮೃತಪಟ್ಟ ಬಗ್ಗೆ ವೈದ್ಯರು ಮಾಹಿತಿ ನೀಡಿದರು.

ಸದಾಶಿವಗರದ ಕೃಷ್ಣ ಅವರ ನಿವಾಸದ ಆವರಣದಲ್ಲಿ ಅವರ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತಿದೆ. ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಸ್ಥಳಕ್ಕೆ ಆಗಮಿಸಿ ಭದ್ರತೆ ಕುರಿತು ಪರಿಶೀಲನೆ ನಡೆಸಿದರು.

ಇಂದು ಇಡೀ ದಿನ ಸದಾಶಿವನಗರ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ನಾಳೆ ಮಧ್ಯಾಹ್ನ 1 ಗಂಟೆಯ ಬಳಿಕ ಹುಟ್ಟೂರು ಮದ್ದೂರಿಗೆ ಪಾರ್ಥಿವ ಶರೀರವನ್ನು ಶಿಫ್ಟ್ ಮಾಡಲಾಗುತ್ತದೆ. ಪುಟ 2

## ಕಾಫಿ ಡೇಲಿ ಅಂತ್ಯಕ್ರಿಯೆ

ನಾಳೆ ಮದ್ದೂರಿನ ಸೋಮನಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಈಗಾಗಲೇ ಅವರ ತಂದೆ ಎಸ್. ಸಿ. ಮಲ್ಲಯ್ಯ ಮತ್ತು ಸಹೋದರನ ಅಂತ್ಯಕ್ರಿಯೆಯನ್ನು ಅವರ ವಿದ್ಯಾಸಂಸ್ಥೆಯ ಆವರಣದಲ್ಲಿ ನಡೆಸಲಾಗಿತ್ತು. ಅದೇ ಸ್ಥಳದಲ್ಲಿ ಎಸ್. ಎಂ. ಕೃಷ್ಣ ಅವರ ಅಂತ್ಯಕ್ರಿಯೆ ಕೂಡ ನಡೆಸಲಾಗುತ್ತದೆ ಎಂದು ಭಾವಿಸಲಾಗಿತ್ತು. ಆದರೆ, ಅವರ ಕುಟುಂಬದ ನಿರ್ಧಾರದಂತೆ ಎಸ್. ಎಂ. ಕೃಷ್ಣ ಅವರ ತಮ್ಮಿಷ್ಟದ ಕಾಫಿ ಡೇ ಪಕ್ಕದಲ್ಲೇ ಅಂತ್ಯಕ್ರಿಯೆಗೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ.

ಇನ್ನು ವಿದೇಶದಲ್ಲಿರುವ ಸಂಬಂಧಿಕರು ಆಗಮಿಸುವುದು ತಡವಾಗುವ ಹಿನ್ನೆಲೆಯಲ್ಲಿ ಎಸ್. ಕೃಷ್ಣ ಅವರ ಅಂತ್ಯಕ್ರಿಯೆಯನ್ನು ಬುಧವಾರ ನಡೆಸಲು ನಿರ್ಧರಿಸಲಾಗಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

## ರಾಜ್ಯದಲ್ಲಿ ಮೂರು ದಿನ ಶೋಕಾಚರಣೆ



**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರ ನಿಧನದ ಹಿನ್ನೆಲೆ ರಾಜ್ಯದಲ್ಲಿ ಮೂರು ದಿನಗಳ ಶೋಕಾಚರಣೆ ಆಚರಿಸುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಇಂದಿನಿಂದ 3 ದಿನಗಳ ಕಾಲ ಶೋಕಾಚರಣೆ ಘೋಷಣೆ ಮಾಡಿದ್ದು, ಇದೇ ವೇಳೆ ಬುಧವಾರ ರಾಜ್ಯಾದ್ಯಂತ ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ಡಿಸೆಂಬರ್ 10 ರಿಂದ ಡಿಸೆಂಬರ್ 12ರವರೆಗೆ ಶೋಕಾ ಚರಣೆಗೆ ಘೋಷಣೆ ಮಾಡಲಾಗಿದ್ದು, ಮೂರು ದಿನಗಳ ಕಾಲ ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜ ಅರ್ಧಕ್ಕೆ ಹಾರಿಸಿ ಅಗಲಿದ ಹಿರಿಯ ನಾಯಕನಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುವುದು. ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಲಾಗುವುದು ಎಂದು ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ. ಈ ಅವಧಿ ಯಲ್ಲಿ ಯಾವುದೇ ಸಾರ್ವಜನಿಕ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳು ಮೇಲೆ ರಾಷ್ಟ್ರ ಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು ಎಂದು ತಿಳಿಸಲಾಗಿದೆ. ದಿವಂಗತರ ಅಂತ್ಯಕ್ರಿಯೆಯನ್ನು 11 - 12 - 2024ರಂದು ಬುಧವಾರ ಹುಟ್ಟೂರಾದ ಮಂಡ್ಯ ಜಿಲ್ಲೆಯಲ್ಲಿ ಸೋಮನಹಳ್ಳಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗುವುದು ಎಂದು ತಿಳಿಸಿದೆ.



## ಪ್ರಧಾನಿ, ರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಸಂತಾಪ

**ಬೆಂಗಳೂರು:** ಮಾಜಿ ಸಿಎಂ ಎಸ್‌ಎಂ ಕೃಷ್ಣ ನಿಧನಕ್ಕೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದು, ಸಮಾಜದ ಎಲ್ಲಾ ವರ್ಗಗಳ ಮೆಚ್ಚುಗೆಗೆ ಪಾತ್ರರಾದ ನಾಯಕ ಅವರು ಎಂದು ಬಣ್ಣಿಸಿದ್ದಾರೆ.

ಕೆಲ ಕಾಲದಿಂದ ಅನಾರೋಗ್ಯದಿಂದ ಬಳಲುತ್ತಿದ್ದ 92 ವರ್ಷದ ಎಸ್‌ಎಂ ಕೃಷ್ಣ ಇಂದು ಇಹಲೋಕ ತ್ಯಜಿಸಿದ್ದಾರೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಅವರ ಸಾವಿಗೆ ದುಃಖ ವ್ಯಕ್ತಪಡಿಸಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, ಶ್ರೀ ಎಸ್‌ಎಂ ಕೃಷ್ಣ ಅವರು ಯಾವಾಗಲೂ ಇತರರ ಜೀವನವನ್ನು ಸುಧಾರಿಸಲು ದಣಿವರಿಯದಂತೆ ಶ್ರಮಿಸಿದರು. ಕರ್ನಾಟಕದಲ್ಲಿ ಸಿಎಂ ಆಗಿ ಆಡಳಿತ ನಡೆಸಿದ ವೇಳೆಯಲ್ಲಿ ಅವರು ಮೂಲಸೌಕರ್ಯಕ್ಕೆ ಹೆಚ್ಚು ಒತ್ತು ನೀಡಿದ ನಾಯಕ. ಅವರೊಬ್ಬ ಅತ್ಯುತ್ತಮ ಓದುಗ ಮತ್ತು ಚಿಂತಕ ಎಂದಿದ್ದಾರೆ.

ಇದೇ ವೇಳೆ ಎಸ್ ಎಂ ಕೃಷ್ಣ ಜೊತೆಗೆ ಸಂವಹನ ನಡೆಸಲು ಅನೇಕ ಅವಕಾಶಗಳು ಸಿಕ್ಕಿದ್ದವು ಎಂದು ನೆನೆದಿರುವ ಅವರು, ಎಸ್‌ಎಂ ಕೃಷ್ಣ ಇನ್ನಿಲ್ಲ ಎಂಬ ಸುದ್ದಿ ಕೇಳಿ ಅತೀವ ದುಃಖ ಉಂಟಾಯಿತು. ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪಗಳು. ಓಂ ಶಾಂತಿ ಎಂದು ಪೋಸ್ಟ್ ಮಾಡಿದ್ದಾರೆ.

ರಾಷ್ಟ್ರಪತಿಗಳಿಂದ ಸಂತಾಪ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕೂಡ ಕೃಷ್ಣ ಸಾವಿಗೆ ಸಂತಾಪ ವ್ಯಕ್ತಪಡಿಸಿದ್ದು, ವಿಧಾನಸಭೆ ಮತ್ತು ಸಂಸತ್ ಸದಸ್ಯರಿಂದ ಕೇಂದ್ರ ಸಚಿವರು ಮತ್ತು ರಾಜ್ಯಪಾಲರವರೆಗೆ ಸುದೀರ್ಘ ಕಾಲ ಸಾರ್ವಜನಿಕ ಜೀವನದಲ್ಲಿ ವಿವಿಧ ಹುದ್ದೆಗಳನ್ನು ನಿರ್ವಹಿಸಿ, ಸೇವೆ ಸಲ್ಲಿಸಿದ್ದ ಎಸ್. ಎಂ. ಕೃಷ್ಣ ಅವರ ನಿಧನದ ಸುದ್ದಿ ತಿಳಿದು ದುಃಖವಾಯಿತು. ಕರ್ನಾಟಕದ ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದ ಅಭಿವೃದ್ಧಿಯಿಂದಾಗಿ ಜನರ ಪ್ರೀತಿಯನ್ನು ಗಳಿಸಿದರು. ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪ ಎಂದಿದ್ದಾರೆ.

ವಯನಾಡು ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಕೂಡ ಎಸ್‌ಎಂಕೆ ಸಾವಿಗೆ ಸಂತಾಪ ಸೂಚಿಸಿ ಪೋಸ್ಟ್ ಮಾಡಿದ್ದಾರೆ. ಕರ್ನಾಟಕದ ಪ್ರಗತಿ ಮತ್ತು ಜಾಗತಿಕ ಭೂಪಟದಲ್ಲಿ ಬೆಂಗಳೂರಿಗೆ ಸ್ಥಾನ ನೀಡುವಲ್ಲಿ ಅವರ ಕೊಡುಗೆ ಅಪಾರ. ಅವರ ಕುಟುಂಬ ಮತ್ತು ಪ್ರೀತಿಪಾತ್ರರಿಗೆ ನನ್ನ ಸಂತಾಪ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ.

ಆಂಧ್ರ ಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಕೂಡ ಎಸ್ ಎಂ ಕೃಷ್ಣ ಸಾವಿಗೆ ಸಂತಾಪ ಸೂಚಿಸಿ ಪೋಸ್ಟ್ ಮಾಡಿದ್ದಾರೆ. ರಾಜ್ಯಗಳಿಗೆ ಹೂಡಿಕೆ ಆಕರ್ಷಿಸುವಲ್ಲಿ ನಾವು ಸ್ಪರ್ಧಾತ್ಮಕ ಸ್ನೇಹವನ್ನು ಹೊಂದಿದ್ದೆವು. ಜನರ ಕಲ್ಯಾಣಕ್ಕೆ ಆದ್ಯತೆ ನೀಡಿದ ನಾಯಕ ಅವರು. ಅವರ ಕುಟುಂಬ ಮತ್ತು ಸ್ನೇಹಿತರಿಗೆ ನನ್ನ ಸಂತಾಪಗಳು ಎಂದಿದ್ದಾರೆ.

## ವಿದ್ಯಾರ್ಥಿ ಭವನದ ದೋಸೆ ಕೃಷ್ಣ



**ಬೆಂಗಳೂರು** : ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರು ಕರ್ನಾಟಕ ಕಂಡ ಡಿಗ್ನಿಫೈಡ್ ರಾಜಕಾರಣಿ ಎಂಬುದರಲ್ಲಿ ಎರಡು ಮಾತಿಲ್ಲ. ಇದನ್ನು ಪಕ್ಷಾತೀತವಾಗಿ ಎಲ್ಲರೂ ಒಪ್ಪುವಂಥ ಮಾತು. ರಾಜಕಾರಣದಲ್ಲಿ ಎಷ್ಟೇ ಎತ್ತರಕ್ಕೆ ಸಾಗಿದರೂ ಸಾಮಾನ್ಯ ವ್ಯಕ್ತಿಯಲ್ಲಿರುವ ಅಭಿರುಚಿಗಳನ್ನು ಅವರು ಮರೆತಿರಲಿಲ್ಲ. ಹಾಗಾಗಿ, ಎಸ್. ಎಂ. ಕೃಷ್ಣ ಎಂದರೆ ನೆನಪಾಗುವುದು ಈ ವಿಷಯಗಳು.

ಅನುಕರಣೀಯ ವ್ಯಕ್ತಿತ್ವ ಓರ್ವ ಜನನಾಯಕನಾಗಿ ಎಸ್. ಎಂ. ಕೃಷ್ಣ ಅವರದ್ದು ಧೀಮಂತ ನಡೆ. ಉತ್ತಮ ಸಂಘಟನಾ ಚತುರ ಹಾಗೂ ವಾಕ್ಪಟು. ಏನೇ ಮಾತನಾಡಿದರೂ ಅಳೆದು ತೂಗಿ ಮಾತನಾಡುವುದು ಅವರಿಗೆ ಸಿದ್ಧಿಸಿತ್ತು. ಕನ್ನಡ, ಇಂಗ್ಲಿಷ್ ಸೇರಿದಂತೆ ಇತರೆ ಭಾಷೆಗಳ ಮೇಲೆ ಒಳ್ಳೆ ಹಿಡಿತವಿತ್ತು. ನಡೆ, ನುಡಿಗಳೆಲ್ಲದರಲ್ಲಿ ಅವರದ್ದು ಅನುಕರಣೀಯ ವ್ಯಕ್ತಿತ್ವ. ಹೆಚ್ಚು ಇಂಗ್ಲಿಷ್ ಪುಸ್ತಕಗಳನ್ನು ಓದುತ್ತಿದ್ದರು.

ಉತ್ತಮ ಡ್ರೆಸಿಂಗ್ ಸೆನ್ಸ್ ಇರುವ ರಾಜಕಾರಣಿಗಳು ಕಾಣಸಿಗುವುದು ಬಲು ಅಪರೂಪ. ಖಾದಿಯಾಗಲೀ, ಸೂಟ್ ಆಗಲೀ ಅಥವಾ ಪ್ಯಾಂಟು ಶರ್ಟ್ ಆಗಲಿ ತಮಗೆ ತುಂಬಾ ಒಪ್ಪುವ ಬಟ್ಟೆಗಳನ್ನೇ ಧರಿಸುತ್ತಿದ್ದರು ಎಸ್. ಎಂ ಕೃಷ್ಣ. ಬಟ್ಟೆ ವಿಚಾರದಲ್ಲಿ ಅವರು ತುಂಬಾ ಸೂಕ್ಷ್ಮತೆ ಹೊಂದಿದ್ದರು. ತಲೆಗೆ ವಿಗ್ ಸಹ ಅವರಿಗೆ ತುಂಬಾನೇ ಹೊಂದಿಕೊಂಡಿತ್ತು.

**ವಿದ್ಯಾರ್ಥಿ ಭವನದ ದೋಸೆ ಕೃಷ್ಣ:** ಗಾಂಧಿ ಬಜಾರ್‌ನಲ್ಲಿರುವ ವಿದ್ಯಾರ್ಥಿ ಭವನದ ದೋಸೆ ಕೃಷ್ಣ ಅವರಿಗೆ ಅಚ್ಚುಮೆಚ್ಚು. ಅವರಿಗೆ ಊಟದ ವಿಚಾರದಲ್ಲೂ ಒಳ್ಳೆಯ ಟೇಸ್ಟ್ ಇದೆ ಎಂಬುದು ಬಲ್ಲವರ ಮಾತು. ಸಿಎಂ ಆಗಿದ್ದಾಗ ಒಂದೆರಡು ಬಾರಿ ಬೆಂಗಳೂರು ಗಾಂಧಿ ಬಜಾರಿನ ವಿದ್ಯಾರ್ಥಿ ಭವನಕ್ಕೆ ಬಂದು ದೋಸೆ ಸವಿದು ಹಳೆಯ ನೆನಪುಗಳನ್ನು ಮೆಲುಕು ಹಾಕಿ ಹೋಗುತ್ತಿದ್ದರು. ಊಟದ ಅಭಿರುಚಿ ಬಗ್ಗೆ ಕರಾರುವಾಕ್ಕಾಗಿದ್ದ ಅವರು ವಿದ್ಯಾರ್ಥಿ ಭವನದಲ್ಲೊಮ್ಮೆ ದೋಸೆ ತಿಂದ ಮೇಲೆ ಎಣ್ಣೆ ಜಾಸ್ತಿ ಆಯ್ತು ಎಂದಿದ್ದರಂತೆ.

**ಆಸೀಸ್‌ನ ಫ್ರಾಂಕ್ ಅಚ್ಚುಮೆಚ್ಚು:** ಅಂದಹಾಗೆ, ಎಸ್.ಎಂ. ಕೃಷ್ಣ ಅವರು ಟೆನಿಸ್ ಪ್ರಿಯ. ಪ್ರತಿ ವರ್ಷ ಬರುವ ವಿಂಬಲ್ಡನ್ ಟೆನಿಸ್ ಪಂದ್ಯಾವಳಿಯನ್ನು ನೋಡಲು ಹೋಗುತ್ತಿದ್ದರು. ಆಸ್ಟ್ರೇಲಿಯಾದ ಟೆನಿಸ್ ಫ್ರಾಂಕ್ ಸೆಡ್ಮನ್ ಅವರ ನೆಚ್ಚಿನ ಆಟಗಾರ. ಬಿಡುವಿನ ವೇಳೆಯಲ್ಲಿ ಅವರು ಟೆನಿಸ್ ಅಂಗಳದಲ್ಲಿ ತಮ್ಮ ಪ್ರತಿಭೆ ತೋರುತ್ತಿದ್ದರು.

**ಒತ್ತಡದ ನಡುವೆಯೂ ನಸುನಗು:** ರಾಜಕೀಯ ಬದುಕಿನಲ್ಲಿ ಎಷ್ಟೇ ಒತ್ತಡವಿರಲಿ, ಎಷ್ಟೇ ಏರುಪೇರುಗಳಿರಲಿ ನಗುನಗುತ್ತಾ ಎಲ್ಲವನ್ನೂ ಎದುರಿಸುತ್ತಿದ್ದ ಕೃಷ್ಣ ಅವರು, ರಾಜ್ಯದ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಆಗ ಹಾಸ್ಯ ಗೋಷ್ಠಿಗಳು ಜನಪ್ರಿಯತೆ ಗಳಿಸಿದ್ದವು. ಅವನ್ನು ಸವಿಯಲು ಆಸೆ ಪಡುತ್ತಿದ್ದ ಕೃಷ್ಣ ಅವರು ತಮ್ಮ ಪತ್ನಿ ಪ್ರೇಮಾ ಅವರೊಂದಿಗೆ ಹಲವಾರು ಹಾಸ್ಯಗೋಷ್ಠಿಗಳಿಗೆ ಆಕಸ್ಮಿಕವಾಗಿ ಹಾಜರಾಗಿರುವ ಉದಾಹರಣೆಗಳು ಇವೆ.

## ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿ

ಬೆಂಗಳೂರು: ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯ ರಾಜಕಾರಣಿ ಕೃಷ್ಣ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಮುತ್ಸದ್ದಿ ರಾಜಕಾರಣಿಯಾಗಿದ್ದ ಕೃಷ್ಣ ಅವರು ಅಜಾತಶತ್ರುಗಳಾಗಿದ್ದರು. ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್ ಪೋಸ್ಟ್ ಮೂಲಕ ಸಂತಾಪ ಸೂಚಿಸಿದ್ದಾರೆ.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಸಾವಿನಿಂದ ಆಘಾತಕ್ಕೀಡಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಸಲ್ಲಿಸಿರುವ ಸೇವೆ ಅನುಪಮವಾದುದು. ವಿಶೇಷವಾಗಿ ಮುಖ್ಯಮಂತ್ರಿಯಾಗಿ ಐಟಿ-ಬಿಟಿ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ ಕರ್ನಾಟಕ ಸದಾ ಋಣಿಯಾಗಿರುತ್ತದೆ.ಮುತ್ಸದ್ದಿ ರಾಜಕಾರಣಿಯಾಗಿದ್ದ ಕೃಷ್ಣ ಅವರು ಅಜಾತಶತ್ರುಗಳಾಗಿದ್ದರು. ನಾನು ಕಾಂಗ್ರೆಸ್ ಪಕ್ಷಕ್ಕೆ ಸೇರಿದ ಪ್ರಾರಂಭದ ದಿನಗಳಲ್ಲಿ ನನಗೆ ಮಾರ್ಗದರ್ಶಕರಾಗಿದ್ದ ಕೃಷ್ಣ ಅವರು ಸದಾ ನನ್ನ ಹಿತೈಷಿಗಳಾಗಿದ್ದರು. ಕೃಷ್ಣ ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ. ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬವರ್ಗ ಮತ್ತು ಅಭಿಮಾನಿಗಳ ದು:ಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಭಗವಂತನಲ್ಲಿ ಕೋರುತ್ತೇನೆಂದು ಹೇಳಿದ್ದಾರೆ.

## ರಾಜ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ



ಧೀಮಂತ ಮುತ್ಸದ್ದಿ ರಾಜಕಾರಣಿ, ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳು, ಮಾಜಿ ಕೇಂದ್ರ ವಿದೇಶಾಂಗ ಸಚಿವರು, ಪಕ್ಷದ ಹಿರಿಯ ನಾಯಕ, ಪದ್ಮವಿಭೂಷಣ ಶ್ರೀ ಎಸ್.ಎಂ.ಕೃಷ್ಣ ಅವರು ನಮ್ಮನ್ನು ಬಿಟ್ಟು ಅಗಲಿದ ಸುದ್ದಿ ತಿಳಿದು ಅತೀವ ಆಘಾವಾಗಿದೆ ಎಂದು ಮಾಜಿ ಮುಖ್ಯಮಂತ್ರಿ, ರಾಜ್ಯ ಬಿಜೆಪಿ ವರಿಷ್ಠ ಬಿ.ಎಸ್. ಯಡಿಯೂರಪ್ಪ ಅವರು ಪೋಸ್ಟ್ ಮಾಡಿದ್ದಾರೆ. ರಾಷ್ಟ್ರ, ರಾಜ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದ ಶ್ರೀ ಎಸ್.ಎಂ.ಕೃಷ್ಣ ಅವರ ನಿಧನದಿಂದ ನಾಡು ಒಬ್ಬ ಶ್ರೇಷ್ಠ ನಾಯಕನನ್ನು ಕಳೆದುಕೊಂಡಿದೆ. ಅವರ ಅಗಲಿಕೆಯಿಂದ ವೈಯಕ್ತಿಕವಾಗಿ ಒಬ್ಬ ಹಿರಿಯಣ್ಣನನ್ನು ಕಳೆದುಕೊಂಡ ನೋವು ನನಗಾಗಿದೆ. ಶ್ರೀ ಎಸ್.ಎಂ.ಕೃಷ್ಣ ಅವರಿಗೆ ಅಶ್ರುಪೂರ್ಣ ಶ್ರದ್ಧಾಂಜಲಿ ಸಲ್ಲಿಸುತ್ತಾ, ಅಗಲಿದ ಆ ಹಿರಿಯ ಚೇತನಕ್ಕೆ ದೇವರು ಉತ್ತಮ ಸದ್ಗತಿಯನ್ನು ದಯಪಾಲಿಸಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಕುಟುಂಬದ ಸದಸ್ಯರು, ಅಪಾರ ಅಭಿಮಾನಿಗಳಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಕೋರುತ್ತೇನೆ. ಓಂ ಶಾಂತಿ ಎಂದು ತಿಳಿಸಿದ್ದಾರೆ.

## ಚೇತನಕ್ಕೆ ಚಿರಶಾಂತಿ ಸಿಗಲಿ



ರಾಜ್ಯದ ವಿಧಾನಸಭಾಧ್ಯಕ್ಷರು, ಉಪ ಮುಖ್ಯಮಂತ್ರಿಗಳು, ಮುಖ್ಯಮಂತ್ರಿಗಳು, ಕೇಂದ್ರ ಸಚಿವರು, ರಾಜ್ಯಪಾಲರೂ ಸೇರಿದಂತೆ ಅನೇಕ ಉನ್ನತ ಹುದ್ದೆಗಳಲ್ಲಿ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ರಾಜ್ಯಕ್ಕೆ, ದೇಶಕ್ಕೆ ತಮ್ಮದೇ ಆದ ಅನುಪಮ ಕೊಡುಗೆ ನೀಡಿದ್ದ ಹಿರಿಯರು, ಮುತ್ಸದ್ದಿಗಳಾದ ಶ್ರೀ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಬಹಳ ದುಃಖವುಂಟಾಯಿತು ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವ ಹೆಚ್'ಡಿ.ಕುಮಾರಸ್ವಾಮಿಯವರು ಪೋಸ್ಟ್ ಮಾಡಿದ್ದಾರೆ. ವೈಯಕ್ತಿಕವಾಗಿ ನನಗೆ ಅವರ ಅಗಲಿಕೆ ಬಹಳ ದುಃಖ ಉಂಟು ಮಾಡಿದೆ. ಆ ಚೇತನಕ್ಕೆ ಚಿರಶಾಂತಿ ಸಿಗಲಿ ಹಾಗೂ ಈ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ, ಅಭಿಮಾನಿಗಳಿಗೆ, ರಾಜ್ಯದ ಜನತೆಗೆ ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ. ಓಂ ಶಾಂತಿ ಎಂದು ಹೇಳಿದ್ದಾರೆ.

# ಎಸ್.ಎಂ ಕೃಷ್ಣ ಅವರು ನನಗೆ ತಂದೆ ಸಮಾನರು: ಡಿಸಿಎಂ

## ನವ ಕರ್ನಾಟಕ ನಿರ್ಮಾಣಕ್ಕೆ ಅಡಿಪಾಯ ಹಾಕಿದವರು ಎಸ್.ಎಂ ಕೃಷ್ಣ

**ಬೆಂಗಳೂರು:** "ಎಸ್.ಎಂ ಕೃಷ್ಣ ಅವರು ನನಗೆ ತಂದೆ ಸಮಾನರು. ನನ್ನ ಬದುಕಿನಲ್ಲಿ ಆಗಿರುವ ಬದಲಾವಣೆ ಅವರ ಮಾರ್ಗದರ್ಶನಕ್ಕೆ ಸಾಕ್ಷಿ. ನವ ಕರ್ನಾಟಕ ನಿರ್ಮಾಣಕ್ಕೆ ಅಡಿಪಾಯ ಹಾಕಿದವರು ಎಸ್.ಎಂ ಕೃಷ್ಣ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸದಾಶಿವನಗರ ನಿವಾಸ ಹಾಗೂ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಮುಂದೆ ಶಿವಕುಮಾರ್ ಅವರು ಎಸ್.ಎಂ ಕೃಷ್ಣ ಅವರ ಕೊಡುಗೆ ನೆನೆದು ಮಂಗಳವಾರ ಭಾವುಕರಾದರು.

"ಕೆಂಗಲ್ ಹನುಮಂತಯ್ಯ ಅವರು ವಿಧಾನಸೌಧ ಕಟ್ಟಿದರು. ಎಸ್.ಎಂ ಕೃಷ್ಣ ಅವರು ವಿಕಾಸ ಸೌಧ ಕಟ್ಟಿದರು. ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಮೆಟ್ರೋ ರೈಲು ನೀಡಿದರು. ಅವರ ಕಡೆಯ ಬಜೆಟ್ ಗಾತ್ರ 26 ಸಾವಿರ ಕೋಟಿ. ಆದರೆ ಇಂದು ನಮ್ಮ ರಾಜ್ಯದ ಬಜೆಟ್ ಗಾತ್ರ 3.83 ಲಕ್ಷ ಕೋಟಿ. ಆಮೂಲಕ ರಾಜ್ಯಕ್ಕೆ ಆರ್ಥಿಕ ಶಕ್ತಿ ತುಂಬಿದರು.

ರಾಜ್ಯ ವಿಕಾಸವಾಗಲಿ ಎಂದು ವಿಕಾಸಸೌಧ, ಎಲ್ಲರಿಗೂ ಉದ್ಯೋಗ ಸಿಗಲಿ ಎಂದು ಉದ್ಯೋಗ ಸೌಧ ಕಟ್ಟಿದರು. ರಾಜ್ಯದಲ್ಲಿ ಪಾನೀಯ ನಿಗಮ ಸ್ಥಾಪಿಸಿ ರಾಜ್ಯದ ಬೊಕ್ಕಸಕ್ಕೆ ಹಣ ಬರುವಂತೆ ಮಾಡಿದರು.



ಕಾವೇರಿ ನೀರಿಗಾಗಿ ಅಧಿಕಾರ ತ್ಯಜಿಸಲು ಮುಂದಾಗಿದ್ದರು. ರಾಜಕುಮಾರ್ ಅವರು ಅಪಹರಣವಾದಾಗ ಅವರನ್ನು ಕರೆತರಲು ಪರಿಶ್ರಮ ನಮಗೆ ಮಾತ್ರ ಗೊತ್ತು. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಸ್ತ್ರೀಶಕ್ತಿ ಕಾರ್ಯಕ್ರಮ, ಯಶಸ್ವಿನಿ ಕಾರ್ಯಕ್ರಮ, ರೈತರ ಜಮೀನಿಗಾಗಿ ಭೂಮಿ ಆಪ್, ಬೆಂಗಳೂರನ್ನು ಐಟಿ ರಾಜಧಾನಿಯಾಗಿ ಮಾಡಿ ಬೆಂಗಳೂರನ್ನು ಜಾಗತಿಕ ಮಟ್ಟದಲ್ಲಿ ಮಿನುಗುವಂತೆ ಮಾಡಿದರು. ದಕ್ಷ ಆಡಳಿತಕ್ಕೆ ಅವರು ಮಾದರಿಯಾಗಿದ್ದರು. ಬೆಂಗಳೂರು ಅಭಿವೃದ್ಧಿ, ಇಲ್ಲಿನ ಉದ್ಯೋಗ ಸೃಷ್ಟಿ ಸೇರಿದಂತೆ ಅವರ ಸಾಧನೆಗೆ ನಿಮ್ಮ ಕಣ್ಣುಗಳೇ ಸಾಕ್ಷಿ. ಅವರು ನನ್ನ ಸಂಬಂಧಿ, ನನ್ನ ರಾಜಕೀಯ ಮಾರ್ಗದರ್ಶಕರು ಎಂಬುದು ಬೇರೆ ವಿಚಾರ. ಅವರ ಕೊಡುಗೆ ಮರೆಯಲು ಸಾಧ್ಯವಿಲ್ಲ. ಅವರು ನಮಗೆಲ್ಲ ದೊಡ್ಡ ಪರಂಪರೆ ಬಿಟ್ಟುಹೋಗಿದ್ದು, ನಾವು ಅದನ್ನು ಮುಂದುವರಿಸಿಕೊಂಡು ಹೋಗಬೇಕು. ಅವರಿಂದ ಸಾಕಷ್ಟು ವಿಚಾರ ಕಲಿತ ಹೆಮ್ಮೆ ನಮಗಿದೆ. ಅವರ ಮಾರ್ಗದರ್ಶನದಲ್ಲಿ ನಾವು ನಡೆಯುತ್ತೇವೆ. ನನ್ನ ಅವರ ನಡುವಣ ಸಂಬಂಧದ ಬಗ್ಗೆ ಬೇರೆ ದಿನ ಮಾತನಾಡುತ್ತೇನೆ. ಎಸ್.ಎಂ ಕೃಷ್ಣ ಅವರು ದೂರದೃಷ್ಟಿಯುಳ್ಳ ಶ್ರೇಷ್ಠ ವ್ಯಕ್ತಿ. ರಾಜ್ಯಕ್ಕೆ ಅವರ ಕೊಡುಗೆ, ಅವರ ಜತೆಗಿನ ಒಡನಾಟದ ಬಗ್ಗೆ ಹೇಳಲು ಗಂಟೆಗಟ್ಟಲೆ ಸಮಯಬೇಕು" ಎಂದು ತಿಳಿಸಿದರು.

**ಹುಟ್ಟೂರಿನಲ್ಲಿ ಬುಧವಾರ ಅಂತಿಮ ಸಂಸ್ಕಾರ, 3 ದಿನ ಶೋಕಾಚಾರಣೆ:** "ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಪಾರ್ಥಿವ ಶರೀರವನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ಅವರ ಹುಟ್ಟೂರು ಮದ್ದೂರಿನ ಸೋಮನಹಳ್ಳಿಯಲ್ಲಿ ಬುಧವಾರ ಸಂಜೆ 4 ಗಂಟೆಗೆ ಅಂತಿಮ ಸಂಸ್ಕಾರ ನೆರವೇರಿಸಲಾಗುವುದು.


"ಬುಧವಾರ (ನಾಳೆ) ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ರಾಜ್ಯಾದ್ಯಂತ ಮೂರು ದಿನ ಶೋಕಾಚಾರಣೆ ಮಾಡಲಾಗುವುದು. ಬುಧವಾರ ಬೆಳಗ್ಗೆ 8 ಗಂಟೆವರೆಗೂ ಎಸ್.ಎಂ. ಕೃಷ್ಣ ಅವರ ಸದಾಶಿವನಗರ ನಿವಾಸದಲ್ಲಿ ಅವರ ಪಾರ್ಥಿವ ಶರೀರವನ್ನು ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

ನಂತರ ಅವರ ಪಾರ್ಥಿವ ಶರೀರವನ್ನು ಮದ್ದೂರಿನ ಸೋಮನಹಳ್ಳಿಗೆ ಕೊಂಡೊಯ್ಯಲಾಗುವುದು. ಅಲ್ಲಿ ಬೆಳಗ್ಗೆ 10.30ರಿಂದ ಮಧ್ಯಾಹ್ನ 3.00ಗಂಟೆವರೆಗೂ ಮಂಡ್ಯ, ಮೈಸೂರು ಭಾಗದ ಜನರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು.

ಇಂದು ಸಂಜೆ 5 ಗಂಟೆಗೆ ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ಸಂತಾಪ ಸೂಚಕ ಸಭೆ ಏರ್ಪಡಿಸಲಾಗಿದೆ. ಪಕ್ಷದ ಎಲ್ಲಾ ಕಾರ್ಯಕ್ರಮಗಳನ್ನು ರದ್ದು ಮಾಡಲಾಗಿದೆ ಹಾಗೂ ಶಾಸಕಾಂಗ ಸಭೆಯನ್ನು ಮುಂದೂಡಲಾಗಿದೆ. ನಾನು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚೆಲುವರಾಯ ಸ್ವಾಮಿ ಅವರು ಅಂತಿಮ ದರ್ಶನ ಹಾಗೂ ಸಂಸ್ಕಾರಕ್ಕೆ ವ್ಯವಸ್ಥೆ ಮಾಡಲು ಮದ್ದೂರಿಗೆ ತೆರಳುತ್ತಿದ್ದೇವೆ" ಎಂದು ಹೇಳಿದರು.

# ಮಾರ್ಗದರ್ಶಕರನ್ನು ಕಳೆದುಕೊಂಡಂತಾಗಿದೆ

**ದೆಹಲಿ:** ಕರ್ನಾಟಕ ಕಂಡಂತಹ ಅತ್ಯಂತ ಧೀಮಂತ, ಹಿರಿಯ ರಾಜಕಾರಣಿ, ಸ್ವಾತಂತ್ರ್ಯ ಪೂರ್ವದ ತಲೆಮಾರು. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಆಡಳಿತಾತ್ಮಕ ಅನೇಕ ಹುದ್ದೆ ಅಲಂಕರಿಸಿದ್ದ ನಮ್ಮ ಕನ್ನಡದ ಹೆಮ್ಮೆಯ ಎಸ್.ಎಂ.ಕೃಷ್ಣ ಅವರ ನಿಧನದ ಸುದ್ದಿ ಕೇಳಿ ಅತ್ಯಂತ ದುಖ ಹಾಗೂ ದಿಗ್ಭ್ರಮೆ ಆಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತೀವ್ರ ಸಂತಾಪ ಸೂಚಿಸಿದ್ದಾರೆ. ಎಸ್.ಎಂ. ಕೃಷ್ಣ ಅವರ ಅಗಲಿಕೆಯಿಂದ ದೇಶ ಒಬ್ಬ ಹಿರಿಯರು, ಮಾರ್ಗದರ್ಶಕರನ್ನು



ಕಳೆದುಕೊಂಡು ಬಡವಂತಾಗಿದೆ. ಸಾರ್ವಜನಿಕ ಜೀವನದಲ್ಲಿ ಅತ್ಯಂತ ಪರಿಶುದ್ಧವಾದ ಬದುಕು ನಡೆಸಿ, ಆದರ್ಶ ಮಯ ಜೀವನ ನಡೆಸಿ, ಇಡೀ ಭಾರತಕ್ಕೆ ಪ್ರಿಯರಾಗಿರುವಂತಹವರು. ಎಸ್.ಎಂ ಕೃಷ್ಣ, ವಿದೇಶದಲ್ಲಿ ವಿದ್ಯಾಭ್ಯಾಸ ಮುಗಿಸಿ ಬಂದ ನಂತರ ತಮ್ಮ ಸೊಸಿಯಲಿಸ್ ಮನೋಭಾವನೆ ಬಿಟ್ಟುಕೊಡದೇ ಪಥಮ ಬಾರಿಗೆ ಸ್ವತಂತವಾಗಿ ಸ್ಪರ್ಧೆ ಮಾಡಿ ಗೆದ್ದು ಬಂದಿದ್ದರು. ವಿಧಾನಸಭೆ, ವಿಧಾನ ಪರಿಷತ್, ಲೋಕಸಭೆ, ರಾಜ್ಯಸಭೆ ನಾಲ್ಕೂ ಸದನಗಳಲ್ಲಿ ಸೇವೆ ಮಾಡಿದ್ದಾರೆ. ರಾಜ್ಯದ ಮಂತ್ರಿಗಳಾಗಿ, ಮುಖ್ಯಮಂತ್ರಿಗಳಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ, ಕೇಂದ್ರದ ಸಚಿವರಾಗಿ ದೇಶದ ಸೇವೆ ಹಾಗೂ ರಾಜ್ಯದ ಸೇವೆ ಮಾಡಿದ್ದಾರೆ. ರಾಜಕಾರಣಿಗಳಿಗೆ ಆದರ್ಶವಾಗಿರುವ, ಆಡಳಿತಗಾರರಿಗೆ ಮಾರ್ಗದರ್ಶನವಾಗಿರುವ ಅವರ ಭಾಷೆ, ಮಿತವ್ಯಯದ ಮಾತು, ಅವರ ನಡವಳಿಗೆ ನಮ್ಮ ಯುವ ರಾಜಕಾರಣಿಗಳಿಗೆ ಅತ್ಯಂತ ಅವಶ್ಯವಿದೆ. ಅವರು ಕರ್ನಾಟಕದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಬೆಂಗಳೂರಿನ ಬೆಳವಣಿಗೆ, ಐಟಿ ಬಿಟಿ ವಿಚಾರದಲ್ಲಿ ಅವರು ನೀಡಿದ ಕೊಡುಗೆ ಅಪಾರ, ಅವರು ಜಾರಿಗೆ ತಂದಿರುವ ಮಿಡ್ ಡೆ ಮೀಲ್ ಯೋಜನೆ ಯಶಸ್ವಿಯಾಗಿದೆ. ಅವರು ರಾಜಕಾರಣದಲ್ಲಿ ಯಾವುದೇ ಹುದ್ದೆಯಲ್ಲಿದ್ದರೂ ಕೂಡ ತಮ್ಮ ವ್ಯಕ್ತಿತ್ವವನ್ನು ಬಿಟ್ಟುಕೊಡದೇ ಅತ್ಯಂತ ಸ್ವಾಭಿಮಾನದ ಬದುಕು ನಡೆಸಿದರು. ಅವರು ಬಿಜೆಪಿ ಸೇರಿ ನಮ್ಮ ಪಧಾನ ಮಂತ್ರಿಗಳಿಗೆ ಅತ್ಯಂತ ಹತ್ತಿರದ ನಾಯಕರಾಗಿದ್ದರು. ಹಿಂದಿನ ಪೀಳಿಗೆಯ ಮಹತ್ವದ ಘಟ್ಟ ಕಳೆದುಕೊಂಡಂತಾಗಿದೆ. ಬರುವಂತಹ ದಿನಗಳಲ್ಲಿ ಅವರ ಬದುಕು ನಮಗೆ ಆದರ್ಶವಾಗಲಿ, ಎಸ್.ಎಂ. ಕೃಷ್ಣ ಅವರು ನನಗೆ ವಯಕ್ತಿಕವಾಗಿ ಅತ್ಯಂತ ಹತ್ತಿರವಾಗಿದ್ದ ನಾಯಕರು, ನಮ್ಮ ತಂದೆಯ ಜೊತೆ ಒಳ್ಳೆಯ ಒಡನಾಟ ಇಟ್ಟುಕೊಂಡಿದ್ದ ನಾಯಕರಾಗಿದ್ದರು. ಅವರ ಅಗಲಿಗೆ ನನಗೆ ಬಹಳ ನೋವು ತಂದಿದೆ. ಅವರ ಕುಟುಂಬಕ್ಕೆ ಅವರ ಅಗಲಿಕೆಯ ದುಖವನ್ನು ಭರಿಸುವ ಶಕ್ತಿ ಭಗವಂತ ನೀಡಲಿ, ಅವರ ಆತ್ಮಕ್ಕೆ ಶಾಂತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ತಮ್ಮ ಸಂತಾಪದಲ್ಲಿ ತಿಳಿಸಿದ್ದಾರೆ.

# ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ: ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ

**ಬೆಂಗಳೂರು:** ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಹಾಗೂ ಭ್ರಷ್ಟಾಚಾರ ಆರೋಪದ ಹಿನ್ನೆಲೆಯಲ್ಲಿ ಬಿಬಿಎಂಪಿ, ಬೆಸ್ಕಾಂ, ಆರೋಗ್ಯ ಇಲಾಖೆ ಸೇರಿದಂತೆ ರಾಜ್ಯದ ವಿವಿಧ ಇಲಾಖೆಗಳ ಅಧಿಕಾರಿಗಳ ಮನೆ ಹಾಗೂ ಕಚೇರಿಗಳ ಮೇಲೆ ಲೋಕಾಯುಕ್ತ ಪೊಲೀಸರು ಇಂದು ಬೆಳಗ್ಗೆಯಿಂದಲೇ ದಾಳಿ ನಡೆಸಿದ್ದಾರೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ , ಕಲಬುರಗಿ, ರಾಯಚೂರು, ಗದಗ, ಹಾಗೂ ಚಿತ್ರದುರ್ಗದಲ್ಲಿ ದಾಳಿ ನಡೆದಿದೆ. ಬೆಂಗಳೂರಿನ ಬೆಸ್ಕಾಂ ಸೂಪರಿಂಟೆಂಡೆಂಟ್ ಎಂಜಿನಿಯರ್ (ಎಲೆಕ್ಟ್ರಿಕಲ್ ) ಲೋಕೇಶ್ ಬಾಬು, ಬಿಬಿಎಂಪಿ ವಸಂತಪುರ ವಾರ್ಡ್ ಸಂಖ್ಯೆ 197ರ ಕಂದಾಯ ನಿರೀಕ್ಷಕ ಸುರೇಶ್ ಬಾಬು, ಯಲಹಂಕ ವಲಯದ ತೆರಿಗೆ ನಿರೀಕ್ಷಕ ಕೃಷ್ಣಪ್ಪ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಆರೋಗ್ಯಾಧಿಕಾರಿ ಎಂ.ಸಿ. ಸುನೀಲ್ ಕುಮಾರ್ ಅವರ ಮನೆ ಮೇಲೆ ದಾಳಿ ನಡೆಸಲಾಗಿದೆ.ಚನ್ನಪಟ್ಟಣದ ಪೊಲೀಸ್ ತರಬೇತಿ ಶಾಲೆಯ ಡಿಎಫ್ ಪಿ ನಂಜುಂಡಯ್ಯ, ಗದಗ್ ನ ಇಇ ಕಚೇರಿಯ ಎಸ್ ಡಿ ಎ ಲಕ್ಷ್ಮಣ್, ಕಲಬುರಗಿ ಮಹಾನಗರ ಪಾಲಿಕೆ ಸಹಾಯಕ ಆಯುಕ್ತ ರಾಮಪ್ಪ ಅವರ ಮನೆ ಹಾಗೂ ಫಾರ್ಮ್ ಹೌಸ್, ರಾಯಚೂರಿನ ಅಬಕಾರಿ ನಿರೀಕ್ಷಕ ರಮೇಶ್ ಅಗಡಿ, ಚಿತ್ರದುರ್ಗದ ಹಿರಿಯೂರು ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ್ ಮನೆ ಮೇಲೂ ದಾಳಿ ನಡೆದಿದೆ.


# ಸಜ್ಜನಿಕೆ ಹಾಗೂ ಘನತೆಯ ನಡವಳಿಕೆ



ಬೆಂಗಳೂರು: ಕರ್ನಾಟಕ ರಾಜ್ಯ ಕಂಡ ಮುತ್ಸದ್ದಿ ರಾಜಕಾರಣಿ, ಶಿಸ್ತು ಹಾಗೂ ಪ್ರಬುದ್ಧ ಆಡಳಿತಕ್ಕೆ ಮಾದರಿಯಾಗಿದ್ದ ನಾಡಿನ ಇತಿಹಾಸದಲ್ಲಿ ತಮ್ಮ ಸಜ್ಜನಿಕೆ ಹಾಗೂ ಘನತೆಯ ನಡವಳಿಕೆಯಿಂದ ವಿಶೇಷ ಚಾಪು ಮೂಡಿಸಿದ್ದ ಎಸ್.ಎಂ ಕೃಷ್ಣ ಅವರು ಇನ್ನಿಲ್ಲವಾಗಿರುವ ಸುದ್ದಿ ಅತ್ಯಂತ ನೋವು ತಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ.ವಿಜಯೇಂದ್ರ ಅವರು ಹೇಳಿದ್ದಾರೆ.

ಕರ್ನಾಟಕದ ರಾಜಕಾರಣದಲ್ಲಿ ಕೃಷ್ಣರಿಗೆ ಕೃಷ್ಣರೇ ಸಾಟಿ ಅವರಿಲ್ಲದ ಕರುನಾಡು ನೆನೆಸಿಕೊಳ್ಳುವುದು ಅತ್ಯಂತ ಕಷ್ಟಕರ, ನಮ್ಮಂತ ಯುವ ಪೀಳಿಗೆಯ ರಾಜಕಾರಣಿಗಳಿಗೆ ಅವರು ಆದರ್ಶದ ದಾರಿದೀಪ, ಅವರು ಇಹಲೋಕವನ್ನು ತ್ಯಜಿಸಿದರೂ ಅವರ ನಡೆ–ನುಡಿ ನಿತ್ಯವೂ ಜೀವಂತವಾಗಿ ರಾಜಕಾರಣದ ಆಗಸದಲ್ಲಿ ಮಿನುಗುತ್ತಿರುತ್ತದೆ. ಕರ್ನಾಟಕದ ಇತಿಹಾಸ ಇರುವವರೆಗೂ ಎಸ್ ಎಂ ಕೃಷ್ಣರು ಅಜರಾಮರ, ಅವರ ಅಗಲಿಕೆಯ ದುಃಖ ಅವರ ಕುಟುಂಬದಷ್ಟೇ ಲಕ್ಷಾಂತರ ಜನರನ್ನು ಬಾಧಿಸಲಿದೆ ಈ ದುಃಖದೊಂದಿಗೆ ನಾವು ಭಾಗಿಗಳು. ಎ□□□ಂ ಕೃಷ್ಣ ರವರ ರಾಜಕೀಯದ ಕೊನೆಯ ದಿನದ ನಿಲುವುಗಳು ಭಾರತದ ಸುಭದ್ರತೆಗೆ ಪ್ರೇರಣೆಯ ಶಕ್ತಿಯಾಗಿತ್ತು, ಅವರ ಆತ್ಮಕ್ಕೆ ಭಗವಂತ ಚಿರಶಾಂತಿ ಕರುಣಿಸಲಿ. ಅವರ ಆತ್ಮ ಸದಾ ಕರುನಾಡು ಹಾಗೂ ದೇಶಕ್ಕಾಗಿ ಮಿಡಿಯುತ್ತಿರುತ್ತದೆ ಎಂಬ ಭಾವ ನನ್ನದಾಗಿದೆ. ಓಂ ಶಾಂತಿ ಎಂದು ತಿಳಿಸಿದ್ದಾರೆ.

# ಮೌಲ್ಯಾಧಾರಿತ ಸೃಜನಶೀಲ ರಾಜಕಾರಣಿ



ಭಾರತ ದೇಶ ಕಂಡ ಅಪ್ರತಿಮ ರಾಜಕೀಯ ಮುತ್ಸದ್ಧಿ, ನಾಯಕ , ಮೌಲ್ಯಾಧಾರಿತ ಸೃಜನಶೀಲ ರಾಜಕಾರಣಿ, ಕೇಂದ್ರದ ಮಾಜಿ ಸಚಿವ, ಕನ್ನಡ ನಾಡಿನ ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರ ನಿಧನಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ರಾಜ್ಯಸಭೆ, ಲೋಕಸಭೆ, ವಿಧಾನ ಪರಿಷತ್ ಹಾಗೂ ವಿಧಾನ ಸಭೆಯ ಸದಸ್ಯರಾಗಿ, ರಾಜ್ಯಪಾಲರಾಗಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಎಸ್.ಎಂ.ಕೃಷ್ಣ ಅವರು ನಿಧನರಾದ ಸುದ್ದಿ ತಿಳಿದು ಅತೀವ ದುಃಖವಾಗಿದೆ. ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಅದರಲ್ಲೂ ಬೆಂಗಳೂರು ನಗರದ ಅಭಿವೃದ್ಧಿಯ ಹರಿಕಾರರಾಗಿದ್ದ ಎಸ್.ಎಂ.ಕೃಷ್ಣ ಅವರು ಜಗತ್ತಿನ ಭೂಪಟದಲ್ಲಿ ಬೆಂಗಳೂರಿನ ಹೆಸರನ್ನು ಚಿರಸ್ಥಾಯಿಗೊಳಿಸಿ ಬ್ರಾಂಡ್ ಬೆಂಗಳೂರಿನ ಪ್ರವರ್ತಕರಾಗಿ ಅದರ ಬೆಳವಣಿಗೆಗೆ ಶ್ರಮಿಸಿದ ಪರಿ ಅನನ್ಯವಾದುದು. ಕೃಷ್ಣ ಅವರ ಅಭಿವೃದ್ಧಿಪರ ಚಿಂತನೆಗಳು, ದೂರದೃಷ್ಟಿ, ಹಾಗೂ ಅವರು ರಾಜ್ಯದ ಅಭಿವೃದ್ಧಿ ಬಗೆಗೆ ಹೊಂದಿದ್ದ ಕಾಳಜಿಯನ್ನು ಹೊರಟ್ಟಿ ಬಣ್ಣಿಸಿದ್ದಾರೆ.

ಸಂಗೀತ, ಯೋಗ ಹಾಗೂ ಲಾನ್ ಟೆನ್ನಿಸ್ ಆಟದಲ್ಲಿ ವಿಶೇಷವಾದ ಆಸಕ್ತಿಹೊಂದಿದ್ದ ಎಸ್.ಎಂ. ಕೃಷ್ಣ ಅವರು ಮಿತಭಾಷಿ ಹಾಗೂ ಸೌಮ್ಯ ಸ್ವಭಾವದ ಅತ್ಯುತ್ತಮ ಆಡಳಿತಗಾರರಾಗಿದ್ದ ನಾಡು ಕಂಡ ಅಪರೂಪದ ರಾಜಕಾರಣಿಗಳಾಗಿದ್ದರು. ವೈಯಕ್ತಿಕವಾಗಿ ಅತೀವ ಆತ್ಮೀಯತೆ ಹೊಂದಿದ್ದ ತಾವು, ಅವರೊಂದಿಗೆ ರಾಜ್ಯದ ಅಭಿವೃದ್ಧಿಗೆ ಸಂಬಧಿಸಿದಂತೆ, ಉತ್ತರ ಕರ್ನಾಟಕದ ಹಲವು ಯೋಜನೆಗಳ ಕುರಿತಂತೆ ಹಲವು ಬಾರಿ ಚರ್ಚಿಸಿದ್ದನ್ನು ನೆನಪಿಸಿಕೊಂಡರು ಬಸವರಾಜ ಹೊರಟ್ಟಿ. ಕೃಷ್ಣ ಅವರ ಸರಳತೆ, ಸಜ್ಜನಿಕೆ, ದೂರದರ್ಶಿತ್ವ, ಅಭಿವೃದ್ಧಿ ಬಗೆಗಿನ ಚಿಂತನೆಗಳು, ಭಾಷಾ ಬಳಕೆ ಮುಂತಾದ ಉದಾತ್ತ ಗುಣಗಳು ಇಂದಿನ ರಾಜಕಾರಣಿಗಳಿಗೆ ಅನುಕರಣೀಯವಾಗಿವೆ ಎಂದಿದ್ದಾರೆ. ಎಸ್.ಎಂ. ಕೃಷ್ಣ ಅವರ ಅಗಲಿಕೆಯಿಂದ ನಮ್ಮ ರಾಜ್ಯವು ಸೇರಿದಂತೆ ದೇಶವು ಹಿರಿಯ ಮುತ್ಸದ್ಧಿ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ, ಅವರ ಅಗಲಿಕೆಯಿಂದ, ಅವರ ಕುಟುಂಬ ವರ್ಗದವರಿಗೆ ಮತ್ತು ಅಪಾರ ಅಭಿಮಾನಿ ಬಂಧುಗಳಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲೆಂದು ಹಾಗೂ ಅವರ ಆತ್ಮಕ್ಕೆ ಚಿರಶಾಂತಿ ದೊರಕಲೆಂದು ಭಗವಂತನಲ್ಲಿ ಪ್ರಾರ್ಥಿಸುವುದಾಗಿ ಬಸವರಾಜ ಹೊರಟ್ಟಿ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಎಸ್.ಎಂ.ಕೃಷ್ಣ ನಡೆದು ಬಂದ ಹಾದಿ...

ಎಸ್.ಎಂ. ಕೃಷ್ಣ ರಾಜ್ಯ ಕಂಡ ಅಪರೂಪದ ಮುಖ್ಯಮಂತ್ರಿಗಳಲ್ಲಿ ಒಬ್ಬರು. ಬೆಂಗಳೂರನ್ನು ಸಿಂಗಾಪುರ ಮಾಡುವ ಕನಸಿನೊಂದಿಗೆ ಸಿಲಿಕಾನ್ ಸಿಟಿಯಾಗಲು ಪ್ರಮುಖ ಕೊಡುಗೆ ನೀಡಿದ್ದರು. ಭೀಕರ ಬರಗಾಲ, ಡಾ. ರಾಜ್ ಕುಮಾರ್ ಅಪಹರಣದಂತಹ ಸಂದಿಗ್ಧ ಸ್ಥಿತಿಯಲ್ಲಿ ರಾಜ್ಯವನ್ನು ಆಳ್ವಿಕೆ ಮಾಡಿದ್ದ ಹೆಗ್ಗಳಿಕೆ ಅವರದು. ಕಾಂಗ್ರೆಸ್‌ನಿಂದ ಮುಖ್ಯಮಂತ್ರಿ, ಕೇಂದ್ರ ಸಚಿವ, ರಾಜ್ಯಪಾಲರಾಗಿದ್ದ ಕೃಷ್ಣ ಅವರು ಬದಲಾದ ರಾಜಕೀಯ ಸ್ಥಿತ್ಯಂತರದ ನಡುವೆ ಬಿಜೆಪಿ ಸೇರಿ ರಾಜಕೀಯ ನಿವೃತ್ತಿ ಘೋಷಿಸಿದ್ದರು.

1932ರ ಮೇ 1 ರಂದು ಎಸ್.ಸಿ. ಮಲ್ಲಯ್ಯ ಮತ್ತು ತಾಯಮ್ಮ ದಂಪತಿ ಪುತ್ರರಾಗಿ ಸೋಮನಹಳ್ಳಿಯಲ್ಲಿ ಜನಿಸಿದ ಎಸ್.ಎಂ.ಕೃಷ್ಣ ಅವರು ಮೈಸೂರು ಮಹಾರಾಜ ಕಾಲೇಜಿನಲ್ಲಿ ಪದವೀಧರರಾದ ನಂತರ ಬೆಂಗಳೂರಿನ ಸರ್ಕಾರಿ ಕಾನೂನು ಕಾಲೇಜಿನಲ್ಲಿ ಓದಿದರು. ಬಳಿಕ ಅಮೆರಿಕದ ಟೆಕ್ಸಾಸ್ ರಾಜ್ಯದಲ್ಲಿರುವ ಸದರ್ನ್ ಮೆಥಡಿಸ್ಟ್ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡಿದರು. ವಾಷಿಂಗ್ಟನ್‌ನಲ್ಲಿರುವ ಜಾರ್ಜ್ ವಾಷಿಂಗ್ಟನ್ ವಿಶ್ವವಿದ್ಯಾಲಯದಲ್ಲಿ ಪ್ರತಿಷ್ಠಿತ ಪು□□□ಬ್ರೈಟ್ ವಿದ್ಯಾರ್ಥಿವೇತನವನ್ನು ಪಡೆದುಕೊಂಡರು. ಭಾರತಕ್ಕೆ ಮರಳಿದ ನಂತರ ಬೆಂಗಳೂರಿನ ರೇಣುಕಾಚಾರ್ಯ ಲಾ ಕಾಲೇಜಿನಲ್ಲಿ ಕಾನೂನು ಉಪನ್ಯಾಸಕರಾಗಿ ಸೇವೆ ಸಲ್ಲಿಸಿದರು.ಕೃಷ್ಣ ರಾಜಕೀಯ ಹಾದಿ: ವಿಧಾನಸಭೆಗೆ ಮೊದಲ ಬಾರಿ 1962 ರಲ್ಲಿ ಮದ್ದೂರು ಕ್ಷೇತ್ರದಿಂದ ಚುನಾಯಿತರಾದರು. ಆದರೆ 1967 ರಲ್ಲಿ ನಡೆದ ಚುನಾವಣೆಯಲ್ಲಿ ಪ್ರಜಾ ಸೋಷಿಯಲಿಸ್ಟ್ ಪಕ್ಷದಿಂದ ಸ್ಪರ್ಧಿಸಿ ಪರಾಜಿತಗೊಂಡಿದ್ದರು. ಆದರೆ 1968ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಚುನಾಯಿತರಾದರು. 1971ರಲ್ಲಿ ಕಾಂಗ್ರೆಸ್‌ನಿಂದ ಕಣಕ್ಕಿಳಿದು ಮಂಡ್ಯದಿಂದ ಮರು ಚುನಾಯಿತರಾಗಿ, 1972 ರಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ಚುನಾಯಿತರಾದರು. ಇದೇ ಸಮಯದಲ್ಲಿ ವಾಣಿಜ್ಯ, ಉದ್ಯಮ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದರು. 1980 ರಲ್ಲಿ ಮತ್ತೆ ಮಂಡ್ಯ ಸಂಸದರಾದರು. ಆದರೆ 1984 ರಲ್ಲಿ ಮಂಡ್ಯದಲ್ಲಿ ಸೋಲನ್ನನುಭವಿಸಿದರು.



1983ರಲ್ಲಿ ಕೇಂದ್ರ ಉದ್ಯಮ ಖಾತೆ ಮತ್ತು ರಾಜ್ಯ ಸಚಿವರಾಗಿ ಮತ್ತು 1984 ರಲ್ಲಿ ಕೇಂದ್ರ ವಿತ್ತ ಖಾತೆಯ ರಾಜ್ಯ ಸಚಿವರಾದರು.1989 ರಲ್ಲಿ ವಿಧಾನಸಭೆಗೆ ಆಯ್ಕೆಯಾಗಿದ್ದ ಕೃಷ್ಣ 1992ರ ವರೆಗೆ ವಿಧಾನಸಭೆಯ ಸ್ಪೀಕರ್ ಆಗಿ ನೇಮಿತರಾಗಿದ್ದರು. 1993 ರಿಂದ 1994ರ ವರೆಗೆ ಕರ್ನಾಟಕದ ಉಪ–ಮುಖ್ಯಮಂತ್ರಿಗಳಾದರು. 1995ರ ವಿಧಾನಸಭಾ ಚುನಾವಣೆಯಲ್ಲಿ ಮದ್ದೂರು ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದಸ್.ಎಂ. ಕೃಷ್ಣ ಸೋಲು ಅನುಭವಿಸಬೇಕಾಯಿತು. ಆ ವೇಳೆ ರಾಜಕೀಯದಲ್ಲಿ ಉನ್ನತ ಮಟ್ಟದಲ್ಲಿದ್ದ ಕೃಷ್ಣ ಅವರ ಸೋಲು ವ್ಯಾಪಕ ಚರ್ಚೆಗೆ ಸಹ ಕಾರಣವಾಗಿತ್ತು. 1996ರಲ್ಲಿ ರಾಜ್ಯಸಭೆಗೆ ನೇಮಕಗೊಂಡ ಕೃಷ್ಣ, 1999 ರಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿದ್ದರು. 1999 ರಲ್ಲಿ ರಾಜ್ಯದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅನ್ನು ಎಸ್. ಎಂ. ಕೃಷ್ಣ ಮುನ್ನೆಡಸಿದರು. ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 132 ಸೀಟುಗಳನ್ನು ಗೆದ್ದು ಅಧಿಕಾರದ ಗದ್ದುಗೆಗೇರಿತು.

**ಮುಖ್ಯಮಂತ್ರಿಯಾಗಿ ಕೃಷ್ಣ:** ರಾಜ್ಯದಲ್ಲಿ ಸ್.ಎಂ.ಕೃಷ್ಣ ಆಳ್ವಿಕೆ ಇಡೀ ದೇಶದಲ್ಲೇ ಸಾಕಷ್ಟು ಸದ್ದು ಮಾಡಿತ್ತು. ಬೆಂಗಳೂರನ್ನು ಸಿಂಗಾಪುರ ಮಾಡುತ್ತೇನೆ ಎನ್ನುವ ಎಸ್.ಎಂ ಕೃಷ್ಣ ಹೇಳಿಕೆ ಇಡೀ ದೇಶವೇ ರಾಜ್ಯದ ಕಡೆ ತಿರುಗುವಂತೆ ಮಾಡಿತ್ತು. ಬೆಂಗಳೂರು ಸಿಂಗಾಪರ ಆಗದಿದ್ದರೂ ಐಟಿ ಸಿಟಿಯಾಯಿತು. ಐಟಿ ಕ್ಯಾಪಿಟಲ್ ಆಗಿ ದೇಶದ ಗಮನ ಸೆಳೆಯಿತು. ಇದರ ಜೊತೆಗೆ ವಿಧಾನಸೌಧದ ಪಕ್ಕದಲ್ಲಿ ವಿಧಾನಸೌಧದ ಪ್ರತಿಕೃತಿಯಂತೆ ವಿಕಾಸಸೌಧ ನಿರ್ಮಿಸಿದರು. ವಿಕಾಸಸೌಧದ ನಿರ್ಮಾತೃ ಎನ್ನುವ ಹೆಗ್ಗಳಿಕೆ ಪಡೆದುಕೊಂಡರು.

**ನಾಲ್ಕು ಸದನದ ಸದಸ್ಯ:** ಮದ್ದೂರು ಕ್ಷೇತ್ರದಿಂದ 3 ಬಾರಿ ಹಾಗೂ ಚಾಮರಾಜಪೇಟೆಯಿಂದ 1 ಬಾರಿ ಶಾಸಕರಾಗಿದ್ದರು. ಮೂರು ಬಾರಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ, 1 ಬಾರಿ ವಿಧಾನ ಪರಿಷತ್ ಸದಸ್ಯರಾಗಿದ್ದರು. 2 ಬಾರಿ ರಾಜ್ಯಸಭಾ ಸದಸ್ಯರಾಗಿದ್ದರು. ಕರ್ನಾಟಕದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸ್ಪೀಕರ್, ಕೈಗಾರಿಕೆ, ವಾಣಿಜ್ಯ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ವಿಧಾನಸಭೆ, ವಿಧಾನ ಪರಿಷತ್, ಲೋಕಸಭೆ, ರಾಜ್ಯಸಭೆ ಹೀಗೆ ದೇಶದ ನಾಲ್ಕೂ ಸದನಗಳ ಸದಸ್ಯರಾಗಿದ್ದ ಅಪರೂಪದ ರಾಜಕಾರಣಿಗಳಲ್ಲಿ ಕೃಷ್ಣ ಒಬ್ಬರು. ಶಾಸಕ, ಪರಿಷತ್ ಸದಸ್ಯ, ಸಚಿವ, ಸಂಸದ, ರಾಜ್ಯಸಭೆ ಸದಸ್ಯ, ಕೇಂದ್ರ ಸಚಿವ, ರಾಜ್ಯಪಾಲ ಇಷ್ಟು ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ ವಿರಳ ರಾಜಕಾರಣಿಗಳಲ್ಲಿ ಕೃಷ್ಣ ಒಬ್ಬರಾಗಿದ್ದರು.

**ಎಸ್.ಎಂ. ಕೃಷ್ಣ ಅವರಿಗೆ ಎದುರಾದ ಸವಾಲು:** ಎಸ್.ಎಂ. ಕೃಷ್ಣ ಅವರು ರಾಜ್ಯದ ಮುಖ್ಯಮಂತ್ರಿಯಾಗಿದ್ದ ವೇಳೆ ಎರಡು ಘಟನೆಗಳು ನಡೆದು ದೊಡ್ಡ ಸವಾಲು ಎದುರಾಗಿತ್ತು. ಆಗ ತಮ್ಮ ಚಾಕಚಕ್ಯತೆಯಿಂದ ನಿಭಾಯಿಸುವಲ್ಲಿ ಎಸ್.ಎಂ.ಕೃಷ್ಣ ಯಶಸ್ವಿಯಾಗಿದ್ದರು.

ವರನಟ ಡಾ. ರಾಜ್‌ಕುಮಾರ್ ಅವರನ್ನು ಗಾಜನೂರಿನ ನಿವಾಸದಿಂದ ಕಾಡುಗಳ್ಳ ವೀರಪ್ಪನ್ ಅಪಹರಣ ಮಾಡಿ, ಮೂರು ತಿಂಗಳ ಕಾಲ ಒತ್ತೆಯಾಗಿ ಇರಿಸಿಕೊಂಡಿದ್ದ. ಆಗ ರಾಜ್ಯಾದ್ಯಂತ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟಗಳು ನಡೆದವು. ಬಳಿಕ ಕೃಷ್ಣ ಅವರು ಅಂದಿನ ತಮಿಳುನಾಡು ಸಿಎಂ ಜೊತೆಗೆ ಮಾತುಕತೆ ನಡೆಸಿ, ನಂತರ ಸಂಧಾನಕಾರರನ್ನು ಕಾಡಿಗೆ ಕಳುಹಿಸಿ ವೀರಪ್ಪನ್ ನನ್ನು ಸಂಪರ್ಕ ಮಾಡಿ, ಅಂತೂ ಇಂತೂ 108 ದಿನಗಳ ನಂತರ ರಾಜ್‌ಕುಮಾರ್ ಅವರನ್ನು ಕ್ಷೇಮವಾಗಿ ಕರೆತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಇನ್ನೊಂದು ಘಟನೆ ಎಂದರೆ ಕೃಷ್ಣ ಅವರ ಅವಧಿಯಲ್ಲಿ ರಾಜ್ಯದಲ್ಲಿ ಮಳೆ ಕೈಕೊಟ್ಟು ಭೀಕರ ಬರಗಾಲ ಸೃಷ್ಟಿಯಾಗಿತ್ತು. ಕೆರೆ ಕಟ್ಟೆಗಳು, ಜಲಾಶಯಗಳು ನೀರಿಲ್ಲದೆ ಒಣಗಿ ನೀರಿಗಾಗಿ ಹಾಹಾಕಾರವೇ ಎದ್ದಿತ್ತು. ಅನಾವೃಷ್ಟಿಯಿಂದ ಕಂಗೆಟ್ಟಿದ್ದ ಕೃಷ್ಣ ಸರ್ಕಾರ ಜನರ ರಕ್ಷಣೆಗೆ ವೈಜ್ಞಾನಿಕವಾಗಿ ಮೋಡ ಬಿತ್ತನೆಯಂತಹ ಪ್ರಯತ್ನ ನಡೆಸಿ ಮಳೆ ತರಿಸುವ ವಿಫಲ ಪ್ರಯತ್ನ ನಡೆಸಿತ್ತು. ಈ ವೇಳೆ ತಮಿಳುನಾಡು ಕಾವೇರಿ ನೀರಿಗಾಗಿ ಒತ್ತಡ ಹಾಕಿತ್ತು. ಮಂಡ್ಯ ಸೇರಿದಂತೆ ಹಳೆ ಮೈಸೂರು ಭಾಗದಲ್ಲಿ ತೀವ್ರ ಸ್ವರೂಪದ ಹೋರಾಟಗಳು ಕೂಡ ನಡೆದವು. 2004 ರಲ್ಲಿ ಕೃಷ್ಣ ಅವರ ನೇತೃತ್ವದಲ್ಲಿ ಚುನಾವಣೆ ಎದುರಿಸಿದ ಕಾಂಗ್ರೆಸ್ ಹೀನಾಯ ಸೋಲು ಕಂಡಿತು. ಚಾಮರಾಜಪೇಟೆಯಿಂದ ಕೃಷ್ಣ ಗೆದ್ದರೂ ಕಾಂಗ್ರೆಸ್ ಎರಡನೇ ಸ್ಥಾನಕ್ಕೆ ತಳ್ಳಲ್ಪಟ್ಟಿತು. ಯಾವ ಪಕ್ಷಕ್ಕೂ ಬಹುಮತ ಇಲ್ಲದ ಕಾರಣ ರಾಜ್ಯದಲ್ಲಿ ಮೊದಲ ಬಾರಿಗೆ ಮೈತ್ರಿ ಸರ್ಕಾರ ರಚನೆಯಾಯಿತು. ಮತ್ತೊಂದು ಅವಧಿಗೆ ಮುಖ್ಯಮಂತ್ರಿಯಾಗುವ ಪ್ರಯತ್ನ ಸಫಲವಾಗಲ್ಲ. ಹಾಗಾಗಿ ಮೈತ್ರಿ ಸರ್ಕಾರದಿಂದ ಹೊರಗುಳಿದ ಕೃಷ್ಣ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಮಹಾರಾಷ್ಟ್ರ ರಾಜ್ಯಪಾಲರನ್ನಾಗಿ ನೇಮಿಸಿತು.2004– 2008 ರವರೆಗೆ ಮಹಾರಾಷ್ಟ್ರ ರಾಜ್ಯಪಾಲರಾಗಿದ್ದ ಕೃಷ್ಣರನ್ನು ಮನಮೋಹನ್ ಸಿಂಗ್ ಸಂಪುಟದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವರನ್ನಾಗಿ ಮಾಡಿ ರಾಜ್ಯಸಭಾ ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು. 2009– 2012ರ ವರೆಗೆ ವಿದೇಶಾಂಗ ಸಚಿವರಾಗಿ ಕೃಷ್ಣ ಕಾರ್ಯ ನಿರ್ವಹಣೆ ಮಾಡಿದ್ದರು. ಬದಲಾದ ರಾಜಕೀಯ ವಿದ್ಯಮಾನಗಳಲ್ಲಿ ಏಕಾಏಕಿ ಸಂಪುಟದಿಂದ ಕೃಷ್ಣ ಅವರನ್ನು ಕೈಬಿಡಲಾಗಿತ್ತು. ನಂತರ ಕಾಂಗ್ರೆಸ್‌ನಿಂದ ಅಂತರ ಕಾಯ್ದುಕೊಂಡಿದ್ದ ಕೃಷ್ಣ 2017ರ ಜನವರಿ 28 ಬೆಳಗ್ಗೆ 11 ಗಂಟೆಗೆ ಅಧಿಕೃತವಾಗಿ ಕಾಂಗ್ರೆಸ್‌ನ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಘೋಷಣೆ ಮಾಡಿ ಬಿಜೆಪಿ ಸೇರಿದ್ದರು. ಯಾವುದೇ ಹುದ್ದೆಯ ನಿರೀಕ್ಷೆ ಇಲ್ಲದೆ ಬಿಜೆಪಿಯಲ್ಲಿದ್ದು ಮಾರ್ಗದರ್ಶನ ಮಾಡುವುದಕ್ಕೆ ಸೀಮಿತರಾಗಿದ್ದರು.

**ಟೆನಿಸ್ ಚಾಂಪಿಯನ್ ಶಿಪ್ ಆಯೋಜಿಸಿದ ಕೀರ್ತಿ:** 2000ನೇ ಇಸವಿಯಲ್ಲಿ ಅಂದರೆ ಎಸ್‌ಎಂಕೆ ಕಾಲದಲ್ಲಿ ಬೆಂಗಳೂರಿನಲ್ಲಿ ಇಂಟರ್ ನ್ಯಾಷನಲ್ ಗುಣಮಟ್ಟದ ಟೆನಿಸ್ ಕ್ರೀಡಾಂಗಣ ಸಿದ್ಧವಾಯಿತು. ಏಷ್ಯಾ ಖಂಡದಲ್ಲಿಯೇ ಮೊದಲ ಬಾರಿಗೆ ೦ಖಿಕ ಫಊಡಿಟಜ ಆಂಣಭಟಛ ಅಚಿಟರಿಂಂಟಿಘಿಖ–2000ನ್ನು ಬೆಂಗಳೂರಿನಲ್ಲಿ ಆಯೋಜಿಸಲಾಯಿತು. ಏಷ್ಯಾ ಖಂಡದಲ್ಲಿ ಮೊತ್ತ ಮೊದಲ ಬಾರಿಗೆ ದಕ್ಷಿಣ ಭಾರತದಲ್ಲಿ ಈ ಕ್ರೀಡಾಕೂಟ ಆಯೋಜನೆಗೊಂಡಿದ್ದು ಚರಿತ್ರಾರ್ಹ ವಿಷಯವಾಗಿದೆ. ಇದಕ್ಕೆ ಮುಖ್ಯ ಕಾರಣ ಆಗ ಕೆಎಸ್‌ಎಲ್‌ಟಿಎ ಅಧ್ಯಕ್ಷರಾಗಿದ್ದ ಎಸ್.ಎಂ. ಕೃಷ್ಣ ಅವರು. 90 ವರ್ಷಗಳಿಂದ ಆಗದ ಮಹತ್ಕಾರ್ಯವನ್ನು ಎಸ್.ಎಂ. ಕೃಷ್ಣ ಅಧ್ಯಕ್ಷರಾಗಿದ್ದಾಗ ನೆರವೇರಿಸಿದ್ದರು.

**ಎಸ್.ಎಂ.ಕೆ ಸಾಧನೆ:** ಎಸ್.ಎಂ.ಕೃಷ್ಣ ಅವರು ಸಿಎಂ ಆಗಿದ್ದ ವೇಳೆ ಬೆಂಗಳೂರನ್ನು ಸಿಲಿಕಾನ್ ಸಿಟಿಯನ್ನಾಗಿ ಮಾಡಿದ್ದು, ಐಟಿ ಬಿಟಿಯಲ್ಲಿ ಬಹುದೊಡ್ಡ ಕ್ರಾಂತಿ. ಇದರ ಜೊತೆ ನಗರದಲ್ಲಿ ಹೆಬ್ಬಾಳ, ಹೆಚ್.ಎಸ್.ಆರ್. ಲೇಔಟ್, ಸಿಲ್ಕ್ ಬೋರ್ಡ್, ರಿಚ್ಮಂಡ್ ಸರ್ಕಲ್ ಫ್ಲೈಓವರ್‌ಗಳಿಗೆ ಅಡಿಪಾಯ ಹಾಕಿದರು. ಇದರ ಜೊತೆ ಭೂ ದಾಖಲೆಗಳನ್ನು ಡಿಜಿಟಲೀಕರಣಗೊಳಿದರು. ಸರ್ಕಾರಿ ಶಾಲೆ ಮಕ್ಕಳಿಗೆ ಬಿಸಿಯೂಟ, ಯಶಸ್ವಿನಿ ಯೋಜನೆ, ವಿಕಾಸಸೌಧ ನಿರ್ಮಾಣಕ್ಕೆ ಶಂಕುಸ್ಥಾಪನೆ ಆಗಿದ್ದೇ ಎಸ್.ಎಂ.ಕೃಷ್ಣ ಅವರ ಅಧಿಕಾರಾವಧಿಯಲ್ಲಿ. ಅದೇ ರೀತಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಬೆಂಗಳೂರು–ಮೈಸೂರು ಹೆದ್ದಾರಿ ಸೇರಿದಂತೆ ಹಲವಾರು ಅಭಿವೃದ್ಧಿ ಕೊಡುಗೆಗಳನ್ನು ರಾಜ್ಯಕ್ಕೆ ಕೊಟ್ಟಿರುವ ಕೀರ್ತಿ ಎಸ್.ಎಂ.ಕೆ. ಅವರಿಗೆ ಸಲ್ಲುತ್ತದೆ. ಕೃಷ್ಣ ಅವರ ರಾಜಕೀಯ ಮುತ್ಸದ್ಧಿತನಕ್ಕೆ 2023 ರಲ್ಲಿ ಕೇಂದ್ರ ಸರ್ಕಾರ ಪದ್ಮ ವಿಭೂಷಣ ಪ್ರಶಸ್ತಿ ನೀಡಿ ಗೌರವಿಸಿತ್ತು.

**ಖಾಸಗಿ ಬದುಕು:** ಕೃಷ್ಣ ಪ್ರೇಮಾ ಅವರನ್ನು ಮದುವೆಯಾದರು. ಅವರಿಗೆ ಇಬ್ಬರು ಪುತ್ರಿಯರು. ಒಬ್ಬರು ಮಾಳವಿಕ ಮತ್ತೊಬ್ಬರು ಶಾಂಭವಿ. ಮಾಳವಿಕ ಕಾಫಿ ಡೇ ಸಂಸ್ಥಾಪಕ ವಿಜಿ ಸಿದ್ದಾರ್ಥ್ ಅವರನ್ನು ಮದುವೆಯಾಗಿದ್ದರು. ಆದರೆ ಸಿದ್ದಾರ್ಥ್ ಕೆಲ ವರ್ಷಗಳ ಹಿಂದೆ ಆತ್ಮಹತ್ಯೆಗೆ ಶರಣಾಗಿದ್ದು, ಅಳಿಯನ ಅಕಾಲಿಕ ನಿಧನದಿಂದ ಕೃಷ್ಣ ಅವರು ಮಾನಸಿಕವಾಗಿ ಕುಗ್ಗಿ ಹೋಗಿದ್ದರು.

# ಪ್ರತಿನಿತ್ಯ 300ಲೀ ಲೋಕಲ್‌ಸೇಲ್ ಮಾರಾಟ ಡೈರಿ ಕಾರ್ಯದರ್ಶಿ ವಿರುದ್ಧ ಸಿಡಿದೆದ್ದ ರೈತಾಪಿವರ್ಗ

ಕೊರಟಗೆರೆ:. ನಮ್ಮಿಂದ 1ಲೀ ಹಾಲಿಗೆ 26ರೂನಂತೆ ಖರೀದಿಸಿ ನಮ್ಮ ಮುಂದೆಯೇ ನಮ್ಮೂರಿನಗ್ರಾಹಕರಿಗೆ 1ಲೀ ಹಾಲಿಗೆ 44ರೂಗೆ ಮಾರಾಟ ಮಾಡ್ತಾರೆ. ನಾವು ಪ್ರಶ್ನೆ ಮಾಡಿದ್ರೇ ನಿಮ್ಮ ಹಾಲಿನಲ್ಲಿಡಿಗ್ರಿ ಬರುತ್ತಿಲ್ಲ ಪ್ಯಾಟ್‌ಕಡಿಮೆ ಇದೆ ನಿಮ್ಮ ಹಾಲು ಬೇಡಅಂತಾರೇ. ಡೈರಿ ಕಾರ್ಯದರ್ಶಿ ಸ್ವಾರ್ಥದಿಂದ ನಮ್ಮ ಶ್ರಮಕ್ಕೆತಕ್ಕ ಪ್ರತಿಫಲ ನಮಗೇ ಸೀಗುತ್ತಿಲ್ಲ ಎಂದು ಆರೋಪಿಸಿ ಸೋಮವಾರಕಿಡಿಕಾರಿದಘಟನೆ ನಡೆದಿದೆ.

ಕೊರಟಗೆರೆತಾಲೂಕು ಹೊಳವನಹಳ್ಳಿ ಹೋಬಳಿ ಅರಸಾಪುರ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ನಾಗರಾಜು ವಿರುದ್ದ 150ಕ್ಕೂ ಅಧಿಕ ಹಾಲು ಉತ್ಪಾದಕರೈತರು ಹಾಲು ಹಾಕುವುದನ್ನೇ ನಿಲ್ಲಿಸಿ ಡೈರಿಗೆ ಮುತ್ತಿಗೆಹಾಕಿ ಪ್ರತಿಭಟನೆಯ ಮೂಲಕ ಆಕ್ರೋಶ ವ್ಯಕ್ತಪಡಿಸಿ ರೈತರಿಗೆಅನ್ಯಾಯಆಗದಂತೆ ಮೇಲಾಧಿಕಾರಿಗಳು ಕ್ರಮ ವಹಿಸಬೇಕಿದೆಎಂದು ಮನವಿ ಮಾಡಿದರು.

> ಪ್ರತಿನಿತ್ಯದ ಹಾಲಿನ ಚೀಟಿ ಕೇಳಿದ್ರೇ ಡೈರಿ ಕಾರ್ಯದರ್ಶಿ ನೀಡೊದಿಲ್ಲ. ನಾವು 15ದಿನ ಹಾಕಿದ ಹಾಲಿನ ಮಾಹಿತಿ ಕೇಳಿದ್ರೇ ಕೋಡೊದಿಲ್ಲ. 1ಲೀ ಹಾಲಿಗೆ ನಮಗೇ 26ರೂ ನೀಡ್ತಾರೇ ನಮ್ಮ ಮುಂದೆಯೇ 44ರೂಗೆ ಮಾರಾಟ ಮಾಡ್ತಾರೇ.ನಾವು ಪ್ರಶ್ನೆ ಮಾಡಿದ್ರೇ ಹಾಲಿ ಪ್ಯಾಟ್ ಬರ್ತಿಲ್ಲಎಂದು ಹಿಂದಕ್ಕೆ ಕಳಿಸ್ತಾರೇ.ಸೂಪರ್‌ವೈಸರ್ ಮತ್ತು ಮೇಲ್ವಿಚಾರಕಿಗೆಕರೆ ಮಾಡಿದ್ರೇಉಢಾಪೆಉತ್ತರ ನೀಡ್ತಾರೇ.
>
> **- ರಂಜಿತ್.**
>
> **ಹಾಲು ಉತ್ಪಾದಕರೈತ. ಅರಸಾಪುರ.**



ಹಾಲು ಉತ್ಪಾದಕರ ಸಹಕಾರ ಸಂಘದ ಆದೇಶದಂತೆ ಅರಸಾಪುರದಲ್ಲಿ ಕಳೆದ 8ವರ್ಷದ ಹಿಂದೆ ಪ್ರಾರಂಭವಾದ ಡೈರಿಯು ಈಗ ಸಮಸ್ಯೆಯ ಸುಳಿಯಲ್ಲಿ ಸಿಲುಕಿದೆ. ಪರಿಶೀಲನೆ ನಡೆಸಬೇಕಾದ ಮೇಲ್ವಿಚಾರಕಿ ಮತ್ತು ಸೂಪರ್‌ವೈಸರ್‌ಕೇಂದ್ರಸ್ಥಾನದಲ್ಲೇ ವಾಸವಿಲ್ಲ. ಉಸ್ತುವಾರಿ ವಹಿಸಬೇಕಾದ ನಿರ್ದೇಶಕರಿಗೆಇನ್ನೂಅಧಿಕಾರ ಸಿಕ್ಕಿಲ್ಲ. ಹಾಲಿನ ಜೊತೆಚೆಲ್ಲಾಟಆಡೋದು ಎಷ್ಟು ಸರಿಎಂಬುದು ಸ್ಥಳೀಯರ ಆಕ್ರೋಶವಾಗಿದೆ.

**150ಜನ ರೈತರಿಂದ 1200ಲೀ ಹಾಲು..:** ಅರಸಾಪುರ, ಮಾದೇನಹಳ್ಳಿ, ಅಗ್ರಹಾರ, ಅರಸಾಪುರತಾಂಡ, ಮಾದೇನಹಳ್ಳಿ ತಾಂಡ, ಹೊಸಪಾಳ್ಯ ಸೇರಿ 8ಗ್ರಾಮದ 150ಕ್ಕೂ ಅಧಿಕರೈತರಿಂದ ಪ್ರತಿನಿತ್ಯ 1200ಲೀ ಹಾಲು ಶೇಖರಣೆಆಗುತ್ತೇ.ಮುಂಜಾನೆ ಬಂದ್ರು 5ಗಂಟೆಯಿಂದ 7ಗಂಟೆವರೇಗೆ ರೈತರು ಸರತಿ ಸಾಲಿನಲ್ಲಿ ನಿಲ್ಲುವ ದುಸ್ಥಿತಿಯಿದೆ.ಡೈರಿಯ ಸಿಬ್ಬಂಧಿ ಕೊರತೆಯ ಬಗ್ಗೆ ಮೇಲ್ವಿಚಾರಕಿಅಥವಾ ಸೋಪರ್ ವೈಸರ್‌ನಿಂದ ಪರಿಶೀಲನೆ ನಡೆಯದೇ ಲೋಪವಾಗಿದೆ.

**300ಲೀ ಹಾಲು ನಿತ್ಯ ಲೋಕಲ್‌ಸೇಲ್..:** ಅರಸಾಪುರ ಡೈರಿಯಲ್ಲಿ ಪ್ರತಿನಿತ್ಯ 1200ಲೀ ಹಾಲು ಶೇಖರಣೆಆಗುತ್ತೇ. ಅದರಲ್ಲಿ ಬೆಳಿಗ್ಗೆ 150ಲೀ ಮತ್ತು ಸಂಜೆ 150ಲೀ ಹಾಲು ಲೋಕಲ್‌ಸೇಲ್‌ರೂಪದಲ್ಲಿಗ್ರಾಹಕರಿಗೆ ಮಾರಾಟ ಮಾಡ್ತಾರೇ. ಇದರಿಂದಡೈರಿಗೆ ಪ್ರತಿನಿತ್ಯ 8ರಿಂದ 9ಲಕ್ಷ ಆದಾಯ ಬರ್ತಿದೆ.ಲೋಕಲ್‌ಸೇಲ್ ಮಾರಾಟದಿಂದ ಬರುವಆಧಾಯದಲ್ಲಿರೈತರಿಗೆ ನಯಾಪೈಸೆಯು ಬರ್ತಿಲ್ಲಎಂಬುದು ಹಾಲು ಉತ್ಪಾದಕರಆರೋಪ.

> ಡೈರಿಯಲ್ಲಿ ಸ್ಥಳೀಯವಾಗಿ ಹಾಲು ಮಾರಾಟಕ್ಕೆ ಅವಕಾಶ ಇಲ್ಲ. ಅರಸಾಪುರರೈತರ ಹಿತದೃಷ್ಟಿಯಿಂದ ಪ್ರತಿನಿತ್ಯ 150ಲೀ ಲೋಕಲ್‌ಸೇಲ್ ಹೋಗುತ್ತೆ. ಹಾಲಿನ ಪ್ಯಾಟ್‌ನಲ್ಲಿ ವ್ಯತ್ಯಾಸಆದ್ರೇಡೈರಿ ಮತ್ತುರೈತರಿಗೆ ನಷ್ಟ ಆಗುತ್ತೇ. ಹಾಲಿನ ಪ್ಯಾಟ್ ವಿಚಾರದಲ್ಲಿ ಕಾರ್ಯದರ್ಶಿ ಮತ್ತುರೈತರ ನಡುವೆಗಲಾಟೆಆಗಿರೋದು ಸತ್ಯ. ನೂತನಡೈರಿಕಟ್ಟಡದಉದ್ಘಾಟನೆಗೆತಯಾರಿ ನಡೆದಿದೆ.
>
> **- ಪುಷ್ಪಲತಾ,**
>
> **ಮೇಲ್ವಿಚಾರಕಿ.ಕೊರಟಗೆರೆ**

**ಡೈರಿಕಟ್ಟಡಉದ್ಘಾಟನೆಗೆ ಮೀನಾಮೇಷ..:** ತುಮಕೂರು ಹಾಲು ಒಕ್ಕೂಟದಿಂದ 5ಲಕ್ಷ, ಕರ್ನಾಟಕ ಹಾಲು ಮಹಾಮಂಡಳಿಯಿಂದ 5ಲಕ್ಷ, ಧರ್ಮಸ್ಥಳ ಸಂಘದಿಂದ 2ಲಕ್ಷ ಹಾಗೂ ಅರಸಾಪುರ ಹಾಲು ಉತ್ಪಾದಕರ ಸಂಘದಿಂದ 6ಲಕ್ಷ ಸೇರಿ 18ಲಕ್ಷದಲ್ಲಿ ನೂತನಡೈರಿಯಕಟ್ಟಡ ನಿರ್ಮಾಣಆಗಿದೆ. ಡೈರಿಯ ಕಾರ್ಯದರ್ಶಿ ಮತ್ತು ಆಡಳಿತ ಮಂಡಳಿಯ ದಿವ್ಯನಿರ್ಲಕ್ಷದಿಂದಕಾಮಗಾರಿ ಸ್ಥಗೀತವಾಗಿ 2ತಿಂಗಳು ಕಳೆದಿದೆ. 500ರೂ ಬಾಡಿಗೆಕಟ್ಟಡದಲ್ಲಿ ಹಾಲಿನ ವಹಿವಾಟು ನಡೆಯುತ್ತಿದ್ದು ಪ್ರತಿನಿತ್ಯರೈತರಿಗೆ ಸಂಕಟದ ಹಿಂಸೆಯಾಗಿದೆ.

## ರಸ್ತೆಗಳ ಕಾಮಗಾರಿ ಕಾರ್ಯಗತ ಗೊಳಿಸಲು ಅಧಿಕಾರಿಗಳಿಗೆ ಸೂಚನೆ

**ಮಾಲೂರು :** ತಾಲೂಕಿನಲ್ಲಿ ಹದಗೆಟ್ಟ ರಸ್ತೆಗಳ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 26 ಕೋಟಿ ರೂಗಳು ಬಿಡುಗಡೆಯಾಗಿದ್ದು 21 ಕೋಟಿ ಜಿ ಪಂ ನ ಮುಖ್ಯ ರಸ್ತೆಗಳ ಗ್ರಾಮಗಳ ಸಂಪರ್ಕಿಸುವ ರಸ್ತೆಗಳಿಗೆ ಮೀಸಲಿರಿಸಲಾಗಿದೆ ಅಧಿಕಾರಿಗಳು ಯೋಜನೆಯ ಪ್ರಗತಿಯನ್ನು ಕಾರ್ಯಗತಗೊಳಿಸಲು ಮುಂದಾಗುವಂತೆ ಶಾಸಕ ಕೆ ವೈ ನಂಜೇಗೌಡ ಹೇಳಿದರು. ಪಟ್ಟಣದ ತಾಲೂಕು ಕಚೇರಿಯ ಆವರಣದಲ್ಲಿರುವ ಸಾಮರ್ಥ್ಯಸದ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರಸ್ತೆಗಳ ಅಭಿವೃದ್ಧಿಗಾಗಿ ಮುಖ್ಯಮಂತ್ರಿಗಳನ್ನು ಮಾಡಿದ ಮನವಿ ಮೇರೆಗೆ ತಾಲೂಕಿನ ರಸ್ತೆಗಳ ಅಭಿವೃದ್ಧಿಗೆ 26 ಕೋಟಿ ವಿಶೇಷ ಅನುದಾನವನ್ನು ನೀಡಿದ್ದು ಅದರಂತೆ 21 ಕೋಟಿ ರೂಗಳು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಮುಖ್ಯರಸ್ತೆಗಳು ಸಂಪರ್ಕಿಸುವ ಗ್ರಾಮಗಳ ರಸ್ತೆಗಳನ್ನು ಅಭಿವೃದ್ಧಿಪಡಿಸಲು 21 ಕೋಟಿ ರೂಗಳನ್ನು ನೀಡಲಾಗಿದೆ ಉಳಿದ ನಾಲ್ಕು ಕೋಟಿ ರೂಗಳನ್ನು ಲೋಕೋಪಯೋಗಿ ಇಲಾಖೆಯ ರಸ್ತೆಗಳು ಅಭಿವೃದ್ಧಿಗೆ ನೀಡಲಾಗಿದ್ದು ಈಗಾಗಲೇ ಟೆಂಡರ್ ಪ್ರಕ್ರಿಯೆ ಇಲಾಖೆಯ ಮುಖ್ಯಸ್ಥರು ಆದಷ್ಟು ಬೇಗ ವರ್ಕ್ ಆರ್ಡರ್ ನೀಡಿ ಕಾಮಗಾರಿಗಳು ಪ್ರಾರಂಭಿಸಬೇಕು ಎಂದರು.

ಹದಗೆಟ್ಟ ರಸ್ತೆಗಳ ಗುಂಡಿಗಳು ಮುಚ್ಚಿ ಸುಗಮ ವಾಹನ ಸಂಚಾರಕ್ಕೆ ಲೋಕಪಯೋಗಿ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಲು ಸೂಚಿಸಿದರು. ಕುಡಿಯುವ ನೀರುಮಲ್ಯ ಇಲಾಖೆಗೆ ಜೆಜೆಎಂ ಪೈಪ್ ಲೈನ್ ಹಾಗೂ ನಲ್ಲಿ ಸಂಪರ್ಕಕ್ಕೆ ತಾಲೂಕಿನ 321 ಗ್ರಾಮಗಳಿಗೆ 1666 ಕೋಟಿ ರೂಗಳು ಬಿಡುಗಡೆಯಾಗಿದ್ದು ಗ್ರಾಮಗಳಲ್ಲಿ ಪೈಪ್ಲೈನ್ ಕಾಮಗಾರಿ ನಡೆಯುವ ವೇಳೆ ಕಾಂಕ್ರೆಟ್ ರಸ್ತೆ ಒಡೆದು ಹಾಳು ಮಾಡೋದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು ಜೆಜೆ ಎಮ್ ನಲ್ಲಿ ತಾಲೂಕಿನಲ್ಲಿ ಮೊದಲ ಸ್ಥಾನ ದಲ್ಲಿದೆ ಆದರೂ ಗುಣಮಟ್ಟ ಕಾಪಾಡಿಕೊಳ್ಳಬೇಕು ಪಂಚಾಯಿತಿ ವಾರು ಸಭೆ ನಡೆಸಿ ಪರಿಶೀಲನೆ ನಡೆ ಮಾಡಲಾಗುವುದು ಎಂದರು.

ಪಟ್ಟಣದ ಪುರಸಭೆಯನ್ನು ನಗರ ಸಭೆಯನ್ನಾಗಿ ಮಾಡಲು ಪ್ರಸ್ತಾವನೆಯನ್ನು ಈಗಾಗಲೇ ಪುರಸಭಾ ಅಧಿಕಾರಿಗಳು ಸಿದ್ಧಪಡಿಸುತ್ತಿದ್ದು, ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿ ಈಗಿನ ಪುರಸಭೆಯನ್ನು ನಗರಸಭೆಯನ್ನಾಗಿ ಮಾಡಲಾಗುವುದು ಪಟ್ಟಣದ ರಸ್ತೆಗಳ ಅಭಿವೃದ್ಧಿಗೆ ಮಾಲೂರು ಇತಿಹಾಸದಲ್ಲಿಯೇ ಅನುದಾನವನ್ನು ತರಲಾಗಿದೆ ಆದರೆ ಅಧಿಕಾರಿಗಳು ಪ್ರಗತಿಯನ್ನು ಕಾರ್ಯಗತ ಮಾಡಬೇಕು. ರೈತರು ಸರ್ಕಾರಿ ಗೋಮಾಳ ಜಮೀನಿನ ಸ್ವಾಧೀನದಲ್ಲಿರುವವರು ಭೂ ಮಂಜೂರಾತಿಗಾಗಿ ಕಂದಾಯ ಇಲಾಖೆಗೆ ಫಾರಂ ನಂಬರ್ 53 ಮತ್ತು 57 ಸಲ್ಲಿಸಿದ್ದು ಒನ್ ಟು ಫೈವ್ ಸರ್ಕಾರ ರದ್ದುಪಡಿಸಲಿದ್ದು ತಹಶೀಲ್ದಾರ್ ಅವರಿಗೆ ಅಧಿಕಾರ ನೀಡಲಿದೆ 53 ಆನ್ಲೈನ್ ಮೂಲಕ ಆನ್ಲೈನ್ ನಲ್ಲಿ ನೊಂದಣಿ ಮಾಡಲು ಜಿಲ್ಲಾಧಿಕಾರಿಗಳಿಗೆ ಬರೆದು ಜಿಲ್ಲಾಧಿಕಾರಿಗಳಿಂದ ಅನುಮತಿ ನೀಡಿದರೆ ಅಧಿಕಾರಿಗಳು ಹಾಗೂ ಧರ್ಕಾಸ ಸಮಿತಿ ಸದಸ್ಯರು ಪರಿಶೀಲನೆ ನಡೆಸಬೇಕು.

15 ದಿನಗಳಿಗೊಮ್ಮೆ ದರಖಾಸ್ತು ಸಮಿತಿ ಸಭೆ ನಡೆಸಿ ಪ್ರತಿನಿತ್ಯ ಎರಡು ಅರ್ಜಿಗಳು ಗ್ರಾಮಲೆಕ್ಕಿಗರು ಸ್ಥಳ ತನಿಖೆ ನಡೆಸಿ ಹಾಪ್ನಲ್ಲಿ ಅಪ್ಲೋಡ್ ಮಾಡಿ ಅರ್ಜಿಗಳನ್ನು ವಿಲೇ ಮಾಡಬೇಕು ಬಗರ್ ಹುಕುಂ 125 ಆದಷ್ಟು ಬೇಗ ವಿಲೇ ಮಾಡಲು ಸೂಚಿಸಿದರು ಸಭೆಯಲ್ಲಿ ತಹಶೀಲ್ದಾರ್ ಕೆ ರಮೇಶ್ , ತಾ.ಪಂ.ಇಒ ವಿ ಕೃಷ್ಣಪ್ಪ, ಪುರಸಭೆ ಅಧ್ಯಕ್ಷೆ ಕೋಮಲ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಮಹಮ್ಮದ್ ನಯೀಮ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಅಂಜಿನಪ್ಪ ದರ್ಕಾಸ್ಥ ಸಮಿತಿ ಅಧ್ಯಕ್ಷರಾದ ಹನುಮಂತಪ್ಪ ಎಸ್.ಸಿ.ನಾರಾಯಣಸ್ವಾಮಿ, ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ.ವಸಂತ್ ಹಾಜರಿದ್ದರು.

## ಆರೋಗ್ಯ ಕಾಪಾಡಿಕೊಳ್ಳುವುದು ಬಹಳ ಮುಖ್ಯ



ಮಾಲೂರು: ಇತ್ತೀಚಿನ ದಿನಗಳಲ್ಲಿ ಆಹಾರ ಪದ್ಧತಿ, ಮಾನಸಿಕ ಒತ್ತಡಗಳ ನಡುವೆ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಬಹಳ ಮುಖ್ಯವಾಗಿದ್ದು, ದಿನನಿತ್ಯದ ಕೆಲಸದ ಒತ್ತಡಗಳಿಂದ ನಾವು ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳದೆ ನಿರ್ಲಕ್ಷಿಸುತ್ತಿದ್ದು, ಶಿಬಿರವನ್ನು ಆಯೋಜಿಸುವ ಮೂಲಕ ಆರೋಗ್ಯದ ಬಗ್ಗೆ ಗಮನಹರಿಸಲು ಸಹಕಾರಿಯಾಗಿದೆ ಎಂದು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಹೇಳಿದರು, ಪಟ್ಟಣದ ನ್ಯಾಯಾಲಯದ ಸಭಾಗಣದಲ್ಲಿ ಆವರಣದಲ್ಲಿ ತಾಲ್ಲೂಕು ವಕೀಲರ ಸಂಘ ಹಾಗೀ ಶ್ರೀನಿಧಿ ಹೆಲ್ತ್‌ಕೇರ್ ಸಜಯೋಗದಲ್ಲಿ ಆಯೋಜಿಸಿದ್ದ ಆರೋಗ್ಯ ತಪಾಸಣಾ ಶಿಬಿರಕ್ಕೆ ನ್ಯಾಯಾಧೀಶರಾದ ದಯಾನಂದ್, ರಹೀಲಾ ಸಭಾ ಅವರು ಚಾಲನೆ ನೀಡಿದರು,

ಹಿರಿಯ ವಕೀಲರಾದ ಆನಂದ್ ಅವರು ನಿಧನರಾದ ಹಿನ್ನೆಲೆಯಲ್ಲಿ ನ್ಯಾಯಾದೀರು, ವಕೀಲರು ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಈ ವೇಳೆ ತಾಲ್ಲೂಕು ವಕೀಲ ಸಂಘದ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಮಾತನಾಡಿ, ವಕೀಲರು ದಿನನಿತ್ಯದ ಒತ್ತಡದಲ್ಲಿ ಆರೋಗ್ಯದ ಕಾಳಜಿಯ ಬಗ್ಗೆ ಗಮನಹರಿಸುವುದು ಬಹಳ ಮುಖ್ಯವಾಗಿದ್ದು, ಆರೋಗ್ಯ ತಪಾಸಣಾ ಶಿಬಿರದಂತಹ ಒಳ್ಳೆಯ ಕೆಲಸವನ್ನು ನ್ಯಾಯಾಲಯದ ಆವರಣದಲ್ಲಿ ಆಯೋಜಿಸುವ ಮೂಲಕ ಹಾಗೂ ವಕೀಲರು, ನ್ಯಾಯಾಂಗ ಇಲಾಖೆ ನೌಕರರು ಮತ್ತು ಕುಟುಂಬದವರಿಗೆ ವೈದ್ಯಕೀಯ ತಪಾಸಣೆಗೆ ಅವಕಾಶ

ಕಲ್ಪಿಸುವ ಮೂಲಕ ಮಾಲೂರು ವಕೀಲರ ಸಂಘ ಉತ್ತಮ ಕೆಲಸವನ್ನು ಮಾಡಿದೆ, ಇತ್ತೀಚಿನ ಆಹಾರ ಪದ್ಧತಿ, ಮಾನಸಿಕ ಒತ್ತಡಗಳ ನಡುವೆ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಬಹಳ ಮುಖ್ಯ, ದಿನನಿತ್ಯದ ಕೆಲಸದ ಒತ್ತಡಗಳಿಂದ ನಾವು ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳದೆ

ನಿರ್ಲಕ್ಷಿಸುತ್ತಿದ್ದು, ನಾವು ಕೆಲಸ ಮಾಡುವ ಸ್ಥಳಗಳಲ್ಲಿ ಇಂತಹ ಶಿಬಿರವನ್ನು ಆಯೋಜಿಸುವ ಮೂಲಕ ಆರೋಗ್ಯದ ಬಗ್ಗೆ ಗಮನಹರಿಸಲು ಸಹಕಾರವಾಗುತ್ತದೆ. ಇಂತಹ ಸಾಮಾಜಿಕ ಕೆಲಸಗಳ ಮೂಲಕ ಮಾಲೂರು ವಕೀಲರ ಸಂಘ ಮುಂಚೂಣಿಯಲ್ಲಿದ್ದು ವಕೀಲರ ಪರವಾಗಿ ಕೆಲಸ ಮಾಡುತ್ತದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ನ್ಯಾಯಾಧೀಶರಾದ ದಯಾನಂದ್ , ರಹೀಲಾ ಸಭಾ , ಕಾರ್ಯದರ್ಶಿ ಹರೀಶ್, ಉಪಾಧ್ಯಕ್ಷ ಅಮರನಾರಾಯಣ, ಡಿ.ನಾರಾಯಣಸ್ವಾಮಿ, .ನಾರಾಯಣಪ್ಪ, ಜಗನಾಥ್, ಶ್ರೀನಿವಾಸ್ ಕಿರಣ್, ಪಾಂಡುರಂಗ, ನಿಧಿ ಹೆಲ್ತ್ ಕೇರ್ ಡಾ. ಸಿದ್ದು ಸಿಬ್ಬಂದಿ ಗುಣಶ್ರೀ, ಕುಬ್ಜ , ನಿರಂಜನ್ ಸೇರಿದಂತೆ ಇನ್ನಿತರರು ಹಾಜರಿದ್ದರು.

## ರಮೇಶ್ ಅವರಿಗೆ ಗೌರವ ಸಮರ್ಪಣೆ



**ಚಾಮರಾಜನಗರ:** ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಅಧ್ಯಕ್ಷರಾದ ರಮೇಶ್ ರವರನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ಸಂಸ್ಕೃತಿ ಚಿಂತಕರು ಆದ ಸುರೇಶ್ ಎನ್ ಋಗ್ವೇದಿ ರವರು ಜೈಹಿಂದ್ ಕಟ್ಟೆಯ ಋಗ್ವೇದಿ ಕುಟೀರದಲ್ಲಿ ಗೌರವಿಸಿ ಅಭಿನಂದಿಸಿದರು.

ಚಾಮರಾಜನಗರಕ್ಕೆ ಪ್ರಪ್ರಥಮವಾಗಿ ಆಗಮಿಸಿದ್ದ ಕರ್ನಾಟಕ ಶಿಲ್ಪಕಲಾ ಅಕಾಡೆಮಿಯ ಅಧ್ಯಕ್ಷರಾದ ರಮೇಶ್ ರವರನ್ನು ಗೌರವಿಸಿ ಸುರೇಶ್ ಋಗ್ವೇದಿ ಮಾತನಾಡಿ ಕರ್ನಾಟಕ ಶಿಲ್ಪ ಕಲೆಯ ತವರೂರು ಆಗಿದೆ. ಬೇಲೂರು, ಹಳೇಬೀಡು, ಸೋಮನಾಥಪುರ ಮತ್ತು ಪುರಾತನ ದೇವಾಲಯಗಳಲ್ಲಿ ವಿಶೇಷವಾದ ಶಿಲ್ಪ ಕೌಶಲ್ಯವನ್ನು ಕಾಣಬಹುದು.

ಚಾಮರಾಜನಗರ ಜಿಲ್ಲೆಯು ಗಂಗರು, ಹೊಯ್ಸಳರು ವಿಜಯನಗರ ಹಾಗೂ ಮೈಸೂರು ಸಂಸ್ಥಾನದ ಆಡಳಿತದಲ್ಲಿ ಹಲವಾರು ದೇವಾಲಯಗಳಲ್ಲಿ ಅದ್ಭುತವಾದ ಶಿಲ್ಪ ಕಲೆಯ ಕೇಂದ್ರಗಳಿವೆ. ಸರಳ ,ಸಜ್ಜನ ವ್ಯಕ್ತಿಯಾದ ರಮೇಶ್ ರವರು ಅಕಾಡೆಮಿಯ ಕಾರ್ಯ ಯೋಜನೆಯನ್ನು ಗಡಿ ಜಿಲ್ಲೆಯಾದ ಚಾಮರಾಜನಗರದಲ್ಲಿ ರೂಪಿಸಲಿ. ಜಿಲ್ಲೆಯ ಜನ ಸದಾಕಾಲ ಸಂಪೂರ್ಣ ಸಹಕಾರ ನೀಡಲಿದ್ದಾರೆ ಎಂದು ತಿಳಿಸಿ ಅವರನ್ನು ಶಾಲು, ಫಲಪುಷ್ಪ ನೀಡಿ ಗೌರವಿಸಲಾಯಿತು.


ಶಿಲ್ಪಕಲಾ ಅಕಾಡೆಮಿಯ ಅಧ್ಯಕ್ಷರಾದ ರಮೇಶ್ ಮಾತನಾಡಿ ಚಾಮರಾಜನಗರ ಜನತೆಯ ಪ್ರೀತಿ ಮರೆಯಲಾಗದು. ಶಿಲ್ಪಕಲಾ ಅಕಾಡೆಮಿಯ ಕಾರ್ಯ ಯೋಜನೆಗಳನ್ನು ಹಮ್ಮಿಕೊಳ್ಳುವ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಬ್ರಾಹ್ಮಿ ಮಹಿಳಾ ಸಮಾಜದ ವತ್ಸಲಾ ರಾಜಗೋಪಾಲ್, ಹಿರಿಯ ನಾಗರಿಕರಾದ ರಾಜಗೋಪಾಲ್ ಎನ್, ಜೈ ಹಿಂದ್ ಪ್ರತಿಷ್ಠಾನದ ಕುಸುಮ ಋಗ್ವೇದಿ, ರವಿ ಮಾಲ, ತೇಜ, ಶ್ರಾವ್ಯ ಮುಂತಾದವರು ಉಪಸ್ಥಿತರಿದ್ದರು.

## ದಬ್ಬಾಳಿಕೆಯ ಪೊಲೀಸ್ ದೌರ್ಜನ್ಯ ಖಂಡನೀಯ

ಚಾಮರಾಜನಗರ.: ರೈತರ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.ಚಾಮರಾಜನಗರದ ಜಿಲ್ಲಾಡಳಿತ ಭವನದ ಮುಖ್ಯ ಗೇಟ್ ಬಳಿ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆಯಲ್ಲಿ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ರೈತರ ಪರ ಹೋರಾಟ ನಡೆಸುತ್ತಿರುವ ಜಗಜಿನ ಸಿಂಗ್ ದಲೈವಾಲ ಉಪವಾಸ ಸತ್ಯಾಗ್ರಹ 14ನೇ ದಿನಕ್ಕೆ ಮುಂದುವರೆದಿದ್ದು ಅವರ ಆರೋಗ್ಯ ಸ್ಥಿತಿ ಹದಗೆಟ್ಟಿದೆ. ಪಂಜಾಬ್, ಹರಿಯಾಣ ಭಾಗದಲ್ಲಿ ನಿರಂತರವಾಗಿ ಚಳವಳಿ ನಡೆಸುತ್ತಿರುವ ರೈತರು ಎರಡು ದಿನಗಳ ಹಿಂದೆ ದೆಹಲಿಗೆ ಕಾಲ್ನಡಿಗೆ ಮೂಲಕ ಹೋಗಲು ಬರುತ್ತಿದ್ದಾಗ ಪೊಲೀಸರು ತಡೆದು ಆಶ್ರುವಾಯು ಸಿಡಿಸಿ ಜಲ ಪಿರಂಗಿ ಪ್ರಯೋಗ ಮಾಡಿದ್ದಾರೆ. ಇದರಿಂದಾಗಿ ಹಲವು ರೈತರು ಆಸ್ಪತ್ರೆ ಸೇರಿದ್ದಾರೆ. ಇಂತಹ ದಬ್ಬಾಳಿಕೆಯ ಪೊಲೀಸ್ ದೌರ್ಜನ್ಯ ಖಂಡನೀಯ ಎಂದರು.ರೈತ ಮುಖಂಡ ದಲೈವಾಲ ಆರೋಗ್ಯ ಸ್ಥಿತಿ ಹದಗೆಟ್ಟಿದ್ದು ಈ ಸಂಬಂಧ ಅಧಿವೇಶನದಲ್ಲಿ ಯಾವುದೇ ಸಂಸದರು ಧ್ವನಿ ಎತ್ತದಿರುವುದು ವಿಪರ್ಯಾಸ, ಕೇಂದ್ರ ಸರ್ಕಾರವು ಪ್ರತಿಭಟನಾನಿರತರನ್ನು ಮಾತುಕತೆಗೆ ಆಹ್ವಾನಿಸದೆ ನಿರ್ಲಕ್ಷತನ ತೋರುತ್ತಿದೆ. ಕೂಡಲೇ ಸಂಸದರು ಸರ್ಕಾರದ ಗಮನ ಸೆಳೆದು ರೈತರ ಹಿತ ಕಾಪಾಡಬೇಕು ಎಂದು ಆಗ್ರಹಿಸಿದರು.ಎಲ್ಲ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗೆ ತರಬೇಕು. ಡಾ ಸ್ವಾಮಿನಾಥನ್ ವರದಿಯಂತೆ ಕನಿಷ್ಠ ಬೆಂಬಲ ಬೆಲೆ ನಿಗದಿಯಾಗಬೇಕು. ರೈತರ ಸಾಲ ಸಂಪೂರ್ಣ ಮನ್ನಾ ಆಗಬೇಕು. 60 ವರ್ಷ ತುಂಬಿದ ರೈತರಿಗೆ ಪಿಂಚಣಿ ಯೋಜನೆ ಜಾರಿಗೆ ಬರಬೇಕು. ರೈತರಿಗಾಗಿ ಹೋರಾಟ ಮಾಡಿದ ರೈತರ ಮೇಲೆ ಇರುವ ಎಲ್ಲ ಕೇಸುಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಾಪಸ್ ಪಡೆಯಬೇಕು. ಫಸಲ್ ಭೀಮಾ ಬೆಳೆ ವಿಮೆ ಯೋಜನೆ ತಿದ್ದುಪಡಿಯಾಗಬೇಕು ಎಂದು ಒತ್ತಾಯಿಸಿದರು.ಪ್ರತಿಭಟನಾ ಸ್ಥಳಕ್ಕಾಗಮಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಮೂಲಕ ರೈತರ ಸಮಸ್ಯೆಗಳ ಕುರಿತು ಅಧಿವೇ ಶನದಲ್ಲಿ ಚರ್ಚಿಸುವಂತೆ ಸಂಸದ ಸುನೀಲ್ ಬೋಸ್ ಅವರಿಗೆ ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಅಂತ್ಯಗೊಳಿಸಲಾಯಿತು. ಪ್ರತಿಭಟನೆಯಲ್ಲಿ ಒಕ್ಕೂಟದ ಹೊನ್ನೂರು ಪ್ರಕಾಶ್, ಉಡಿಗಾಲ ರೇವಣ್ಣ, ಪಟೇಲ್ ಶಿವಮೂರ್ತಿ, ಮೂಕಹಳ್ಳಿ ಮಹದೇವಸ್ವಾಮಿ, ಸತೀಶ್, ಶಿವಸ್ವಾಮಿ, ನಾಗೇಂದ್ರ, ಮಹೇಶ್, ಮಾದೇಶ್, ರಘು, ಸುಂದ್ರಪ್ಪ, ರಾಜು ಸೇರಿದಂತೆ ಇತರರು ಭಾಗವಹಿಸಿದ್ದರು.



## ಸುದ್ದಿ ಸಂಜೆ

### ಕುಂದುಕೊರತೆ ಸಭೆ

ಚಾಮರಾಜನಗರ: ಜಿಲ್ಲಾ ಮಟ್ಟದ ವಿಕಲಚೇತನರ ಕುಂದುಕೊರತೆ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 11 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆ.ಡಿ.ಪಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ವಿಕಲಚೇತನರು ಸಭೆಯ ಸದುಪಯೋಗಪಡಿಸಿಕೊಳ್ಳಬೇಕು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಚೇರಿ ದೂ.ಸಂ 08226-223688, 224688 ಸಂಪರ್ಕಿಸುವಂತೆ ಜಿಲ್ಲಾ ವಿಕಲಕಚೇತನರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

ಚಾಮರಾಜನಗರ: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಡಿಸೆಂಬರ್ 11 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಉಮ್ಮತ್ತೂರು, ಬಾಗಳಿ, ಲಿಂಗಣಾಪುರ, ಜನ್ನೂರು, ಜನ್ನೂರು ಹೊಸೂರು, ಹಳ್ಳಿಕೆರೆಹುಂಡಿ, ಗಣಗನೂರು, ಗಣಗನೂರುಪುರ, ನವಿಲೂರು, ಆಲ್ದೂರು, ಬಿಎಂಕೆ ಹುಂಡಿ, ಗೊದ್ದಲಹುಂಡಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಉಚಿತ ದೂ.ಸಂ 1912 ಸಂಪರ್ಕಿಸುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಳೆ ದೂರು ಸ್ವೀಕಾರ

ಚಾಮರಾಜನಗರ: ಜಿಲ್ಲಾ ಲೋಕಾಯುಕ್ತ ಅಧಿಕಾರಿಗಳು ಗುಂಡ್ಲುಪೇಟೆ ತಾಲೂಕಿಗೆ ಡಿಸೆಂಬರ್ 11 ರಂದು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅರ್ಜಿ ಸ್ವೀಕರಿಸಿ ವಿಚಾರಣೆ ನಡೆಸಲ್ಲಿದ್ದಾರೆ. ಜಿಲ್ಲಾ ಲೋಕಾಯುಕ್ತ ಅಧಿಕಾರಿಗಳು ಗುಂಡ್ಲುಪೇಟೆ ಪಟ್ಟಣದ ಪ್ರವಾಸಿಮಂದಿರ (ಐ.ಬಿ) ದಲ್ಲಿ ಡಿಸೆಂಬರ್ 11 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಭರ್ತಿಮಾಡಿದ ದೂರು ಅರ್ಜಿಗಳನ್ನು ಸ್ವೀಕರಿಸಿ ವಿಚಾರಣೆ ಮಾಡುವರು ಸರ್ಕಾರಿ ಕಚೇರಿಗಳಲ್ಲಿ ಕೆಲಸದಲ್ಲಿ ಅನಗತ್ಯ ವಿಳಂಬ, ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸಾರ್ವಜನಿಕರು ಮಾಹಿತಿ, ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಡುವರು.

### ಅಭಿನಂದನೆ



**ಶಿಡ್ಲಘಟ್ಟ :** ತಾಲ್ಲೂಕಿನಲ್ಲಿ ಅವಧಿ ಮುಗಿದ ಜಂಗಮಕೋಟೆ ಹೋಬಳಿಯ ನಾಲ್ಕು ಗ್ರಾಮ ಪಂಚಾಯಿತಿಗಳಿಗೆ ಭಾನುವಾರ ಮತದಾನ ನಡೆದಿದ್ದು ಯಾವುದೆ ಅಡ್ಡಿ ಆತಂಕ ಇಲ್ಲದೆ ಶಾಂತಿಯುತವಾಗಿ ಮತದಾನ ನಡೆದಿದ್ದು ಈ ವೇಳೆ ಶಾಸಕರಾದ ಮೇಲೂರು ಬಿ.ಎನ್. ರವಿಕುಮಾರ್ ಮಾತನಾಡಿ ಮಳಮಾಚನಹಳ್ಳಿ,ಭಕ್ತರಹಳ್ಳಿ, ಹೊಸಪೇಟೆ ಹಾಗು ನಾಗಮಂಗಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಶಾಂತಿಯುತವಾಗಿ ಮತದಾನ ನಡೆದಿದೆ, ಶಾಂತಿಯುತ ಮತದಾನ ನಡೆಯಲು ಸಹಕರಿಸಿದ ಎಲ್ಲ ಮತದಾರರು, ಅಧಿಕಾರಿಗಳಿಗು, ಪೊಲೀಸರಿಗು ಅಭಿನಂದನೆಗಳನ್ನು ತಿಳಿಸಿದರು.

### ವಚನ ಸಾಹಿತ್ಯ ಪರಿಷತ್‌ಗೆ ನೇಮಕ



**ಕುಕನೂರು :** ಅಖಿಲಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ ನ ಕುಕನೂರು ತಾಲೂಕಿಗೆ ನೂತನ ಅಧ್ಯಕ್ಷರಾಗಿ ಪತ್ರಕರ್ತ ಈರಯ್ಯ ಕುರ್ತಕೋಟಿ ಅವರನ್ನು ನೇಮಕ ಮಾಡಲಾಗಿದೆ. ಜಿಲ್ಲಾಧ್ಯಕ್ಷ ಜೀ ಎಸ್ ಗೋನಾಳ್ ಅವರು ನೂತನ ಕುಕನೂರು ತಾಲೂಕಿಗೆ ಪತ್ರಕರ್ತ ಈರಯ್ಯ ಕುರ್ತಕೋಟಿ ಅವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಪತ್ರ ನೀಡಿದ್ದಾರೆ. ನೂತನ ಪದಾಧಿಕಾರಿಗಳ ನೇಮಕ ಮತ್ತು ಪರಿಷತ್ ನ ಕಾರ್ಯ ಚಟುವಟಿಕೆಗಳ ಮೂಲಕ ಶರಣರು, ಸಂತರ ವಚನ ಸಾಹಿತ್ಯ ಸಂಭ್ರಮವು ಜನಮಾನಸದಲ್ಲಿ ನೆಲೆಸುವಂತೆ ಮಾಡುವ ಪರಿಷತ್ ನ ಆಶಯವನ್ನು ಸಾಕಾರಗೊಳಿಸಲು ಕಾರ್ಯಪ್ರವೃತ್ತರಾಗುವಂತೆ ನೇಮಕಾತಿ ಪತ್ರದಲ್ಲಿ ತಿಳಿಸಲಾಗಿದೆ.

# ರಾಸಾಯನಶಾಸ್ತ್ರ ನಮ್ಮಗಳ ಉಪಯೋಗಕ್ಕೆ ಅನುಕೂಲವಾಗಿದೆ

**ನಾಗಮಂಗಲ:** . ರಸಾಯನಶಾಸ್ತ್ರವು ನಮ್ಮ ಸುತ್ತಣ ಪರಿಸರದಲ್ಲಿದೆ. ಸಮಸ್ಯೆಗಳ ಪರಿಹಾರಕ್ಕಾಗಿ ಹಲವು ವಿಧಗಳಲ್ಲಿ ಬಳಸಿಕೊಳ್ಳಬಹುದು. ಇದು ಔಷಧಿಗಳ ಅಭಿವೃದ್ಧಿಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದು ಆದಿಚುಂಚನಗಿರಿ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಡಾ. ಎಂ ಎ ಶೇಖರ್ ಅಭಿಪ್ರಾಯ ಪಟ್ಟರು.

ಅವರು ನಾಗಮಂಗಲ ತಾಲ್ಲೂಕಿನ ಬಿ.ಜಿ ನಗರದಲ್ಲಿ ಸರ್ಕಾರಿ ಪ್ರೌಢಶಾಲಾ ಮಕ್ಕಳಿಗಾಗಿ ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿಯ (ಖಖಅ) ಭಾರತ ಘಟಕದ ಸಹಯೋಗದೊಂದಿಗೆ ಆದಿಚುಂಚನಗಿರಿ ವಿಶ್ವವಿದ್ಯಾಲಯವು ಆಯೋಜಿಸಿದ್ದ ಯೂಸೂಫ್ ಹಮೀದ್ ರಸಾಯನಶಾಸ್ತ್ರ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ರಾಸಾಯನಿಕ ಜೀವಶಾಸ್ತ್ರದ ಪ್ರಗತಿಯೊಂದಿಗೆ, ವಿದ್ಯಾರ್ಥಿಗಳು ಮಾಲಿನ್ಯದಂತಹ ಸವಾಲುಗಳನ್ನು ಎದುರಿಸುವ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಬಹುದು ಎಂದು ಹೇಳಿದರು.

ಯೂಸುಫ್ ಹಮೀದ್ 66ನೇ ರಸಾಯನಶಾಸ್ತ್ರ ಶಿಬಿರ ವಾಗಿದ್ದು, ಸ್ಫೂರ್ತಿದಾಯಕ ವಿಜ್ಞಾನ ಕಾರ್ಯಕ್ರಮದ ಭಾಗವಾಗಿ ಆದಿಚುಂಚನಗಿರಿ ವಿಶ್ವವಿದ್ಯಾಲಯದಲ್ಲಿ ಇದೇ ಮೊದಲ ಬಾರಿಗೆ ಈ ಶಿಬಿರ ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಪ್ರಾಯೋಗಿಕವಾಗಿ ರಸಾಯನಶಾಸ್ತ್ರವನ್ನು ಅನ್ವೇಷಿಸಲು ಶಿಬಿರದಲ್ಲಿ ಅವಕಾಶ ಒದಗಿಸಿದೆ. ವಿಶ್ವವಿದ್ಯಾಲಯದ ಮಟ್ಟದಲ್ಲಿ ಮತ್ತು ಅದರಾಚೆಗೂ ರಸಾಯನಶಾಸ್ತ್ರವನ್ನು ಮುಂದುವರಿಸಲು ಮಕ್ಕಳನ್ನು ಪ್ರೇರೇಪಿಸುತ್ತದೆ ಎಂದರು.

ಮಂಡ್ಯ, ಹಾಸನ ಮತ್ತು ತುಮಕೂರು ಜಿಲ್ಲೆಯ ಸರ್ಕಾರಿ ಪ್ರೌಢಶಶಾಲೆಗಳವಿದ್ಯಾರ್ಥಿಗಳು ರಸಾಯನಶಾಸ್ತ್ರದ ಪ್ರಯೋಗಗಳಿಗೆ ತೆರೆದುಕೊಂಡು ಬೆರಗು ಮೂಡಿಸಿದರು. ಮಕ್ಕಳಲ್ಲಿನ ರಸಾಯನಶಾಸ್ತ್ರದ ಕುತೂಹಲ ತಣಿಸಿದ ಶಿಬಿರವು ಅವರಲ್ಲಿನ ವಿಜ್ಞಾನದ ಆಸಕ್ತಿಗೆ ಬೆಳಕಿಂಡಿಯಾಯಿತು. ಶಿಬಿರದಲ್ಲಿ ಮೂರು ಜಿಲ್ಲೆಗಳ 9ನೇ ತರಗತಿಯ 83 ವಿದ್ಯಾರ್ಥಿಗಳುಭಾಗವಹಿಸಿದ್ದರು. ಮಕ್ಕಳಿಗೆ ವಿಷಯದ ಬಗ್ಗೆ ಆಸಕ್ತಿ ಮೂಡಿಸುವುದರ ಜೊತೆಗೆ ರಸಾಯನಶಾಸ್ತ್ರದ ಕಲಿಕೆಯನ್ನು ಆನಂದದಿಂದ ಆಸ್ವಾದಿಸುವುದು ಹೇಗೆಂದು ವಿವಿಧ ಸಂಪನ್ಮೂಲ ವ್ಯಕ್ತಿಗಳು ತಿಳಿಸಿಕೊಟ್ಟರು. ಇಲ್ಲಿ ವಿದ್ಯಾರ್ಥಿಗಳಿಗೆ ಪ್ರಯೋಗಾಲಯದ ಸುರಕ್ಷತಾ ಪರಿಕರಗಳು ಮತ್ತು ಸಲಕರಣೆಗಳನ್ನು ಪರಿಚಯಿಸಲಾಯಿತು. ಬಣ್ಣ ರಚನೆ, ಸ್ಫಟಿಕೀಕರಣ, ಫೋರೆನ್ಸಿಕ್ ಚಾಲೆಂಜ್, ಗಡಿಯಾರ ಪ್ರತಿಕ್ರಿಯೆಗಳು, ಲೋಳೆ ಪ್ರತಿಕ್ರಿಯೆ, ಜಾಗತಿಕ ಕಾಯಿನ್ ಬ್ಯಾಟರಿ ಪ್ರಯೋಗಗಳು ಸೇರಿದಂತೆ ವಿವಿಧ ಕಿರು ಪ್ರಯೋಗಗಳನ್ನು ಮಕ್ಕಳಿಂದ ಮಾಡಿಸಿ, ಹಲವು ಪ್ರಯೋಗಗಳನ್ನು ಹೇಳಿಕೊಡಲಾಯಿತು,



ಎಸಿಯು ಕುಲ ಸಚಿವರಾದ ಪ್ರೊ. ಸಿ. ಕೆ. ಸುಬ್ಬರಾಯ ಮಾತನಾಡಿ, ವಿಶ್ವವಿದ್ಯಾಲಯವು ಆರಂಭದಿಂದಲೂ ನೆರೆಹೊರೆಯ ಶಾಲೆಗಳು ಮತ್ತು ಇತರ ಸಂಸ್ಥೆಗಳೊಂದಿಗೆ ಸಂಪರ್ಕ ಕಾರ್ಯಕ್ರಮಗಳನ್ನು ಆಯೋಜಿಸಿ, ಅಲ್ಲಿನ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಒತ್ತು ನೀಡುತ್ತಾ ಬಂದಿದೆ. ಗ್ರಾಮೀಣ ವಿದ್ಯಾರ್ಥಿಗಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸಿ ಅವರು ವಿಜ್ಞಾನ ಶಿಕ್ಷಣ ಅಧ್ಯಯನಕ್ಕೆ ಪ್ರರೇಪಿಸುವುದು ನಮ್ಮ ಗುರಿಯಾಗಿದೆ ಎಂದರು.

ಶಿಬಿರದ ಮುಖ್ಯ ಸಂಯೋಜಕರಾಗಿ ಹಿರಿಯ ವಿಜ್ಞಾನಿ, ವಿಶ್ವವಿದ್ಯಾಲಯದ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗದ ಡೀನ್ ಡಾ. ಕೆ. ಪ್ರಶಾಂತ ಕಾಳಪ್ಪ ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ.. ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿ ಭಾರದ ಘಟಕದ ಸಹದ್ಯೋಗಿಗಳು ದೇಶದಲ್ಲಿ ರಸಾಯನಶಾಸ್ತ್ರ ಶಿಬಿರಗಳನ್ನು ಆಯೋಜಿಸುವ ಮೂಲಕ ಭಾರತದ ಶಿಕ್ಷಣ ಕ್ಷೇತ್ರದೊಂದಿಗೆ ಕೆಲಸ ಮಾಡುತ್ತ, ಕೆಮಿಸ್ಟ್ರಿಯ ಅಧ್ಯಯನ ಬೆಂಬಲಿಸುತ್ತಿದೆ. ಇದರಿಂದಾಗಿ ಮುಂದಿನ ದಿನಗಳಲ್ಲಿ ಅಂತರರಾಷ್ಟ್ರೀಯ ರಾಸಾಯನಿಕ ವಿಜ್ಞಾನಗಳ ಪ್ರಯೋಜನ ದಕ್ಕಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಪ್ರಾಧ್ಯಾಪಕರುಪ್ರಯೋಗಾಲಯ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಭಾಗವಹಿಸಿದ್ದ ಶಾಲಾ ಮಕ್ಕಳು ಆದಿಚುಂಚನಗಿರಿ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳಿಗೆ ಭೇಟಿ ನೀಡಿದರು.

ಹಿರೀಸಾವೆ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಲಿಖಿತಾ ಅನುಭವ ಹಂಚಿಕೊಳ್ಳುತ್ತಾ ಶಿಬಿರದ ದಿನಕ್ಕಾಗಿ ನಾನು ಕಾತುರಗಳಾಗಿದ್ದೆ, ಇಲ್ಲಿ ನಾವು ರಾಸಾಯನಿಕಗಳ ಬಗ್ಗೆ ಅನೇಕ ಹೊಸ ವಿಷಯಗಳನ್ನು ಕಲಿತೆವು. ವಿವಿಧ ಬಣ್ಣಗಳ ಉತ್ಪಾದನೆ, ಸ್ಫಟಿಕೀಕರಣ ಪ್ರಕ್ರಿಯೆಗಳು ನನ್ನಲ್ಲಿ ಖುಷಿ ತರಿಸಿತು. ಇದೆಲ್ಲವನ್ನು ಹೇಳಿಕೊಳ್ಳಲು ನನ್ನ ಶಾಲೆಗೆ ಯಾವಾಗ ಹೋಗುತ್ತೇನೋ ಎಂದು ಕಾಯುತ್ತಿದ್ದೇನೆ' ಎಂದು ಸಂತಸ ವ್ಯಕ್ತಪಡಿಸಿದರು.

ಕದಬಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಚೈತ್ರ ಮಾತನಾಡಿ, ಇಂಥ ಪ್ರಯೋಗಗಳನ್ನು ನಾವು ಮಾಡಿರಲೇ ಇಲ್ಲ. ಬ್ಯಾಟರಿ ತಂತ್ರಜ್ಞಾನ ನನ್ನಲ್ಲಿ ಅಚ್ಚರಿ ಮೂಡಿಸಿತು. ಇದನ್ನು ನನ್ನ ಶಾಲೆಯ ಗೆಳತಿಯರಿಗೂ ಹೇಳಿಕೊಡುವೆ. ಹತ್ತನೇ ತರಗತಿ ನಂತರ ಕೆಮಿಸ್ಟ್ರಿ ಅಧ್ಯಯನವನ್ನೇ ಮಾಡುವ ಆಕಾಂಕ್ಷೆಯನ್ನು ವ್ಯಕ್ತಪಡಿಸಿದರು.

ಡಾ. ವೈ.ಆರ್.ಗಿರೀಶ್, ಡಾ.ಎಸ್.ಎಂ.ಅನುಷ್, ಡಾ. ಅವಿನಾಶ್, ಡಾ.ಕೆ.ಎನ್.ನಂದೀಶ್ ಸಹ ಸಂಯೋಜಕರಾಗಿದ್ದ ಶಿಬಿರದಲ್ಲಿ ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿಯ ಮೆಲಿಸ್ಸಾ ಮೆಂಡೋಜಾ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಶಿಬಿರದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ವಿತರಿಸಲಾಯಿತು

## ಸುದ್ದಿ ಸಂಜೆ

### 10,651ಕ್ಕೂ ಹೆಚ್ಚು ಬಗರ್ ಹುಕುಂ ಜಮೀನು ಖಾತೆ ಬಾಕಿ

**ಬೆಳಗಾವಿ ಸುವರ್ಣಸೌಧ :** ರಾಜ್ಯದಲ್ಲಿ ಬಗರ್ ಹುಕುಂ ಸಾಗುವಳಿ ಸಮಿತಿಗಳಲ್ಲಿ ನಿರ್ಣಯಿಸಿ ಅರ್ಹ ಫಲಾನುಭವಿಗಳಿಗೆ ಜಮೀನು ಮಂಜೂರು ಮಾಡಿರುವ 10,651 ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಜಮೀನು ಖಾತೆ ಮಾಡುವುದು ಬಾಕಿಯಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದರು. ಬೆಳಗಾವಿ ಸುವರ್ಣ ಸೌಧದಲ್ಲಿ ಸೋಮವಾರ ಆರಂಭವಾದ ಚಳಿಗಾಲದ ಅಧಿವೇಶನದಲ್ಲಿ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಅವರು ಉತ್ತರಿಸಿ ಮಾತನಾಡಿದರು.ಜಮೀನು ಖಾತೆ ಮಾಡದಿರಲು ಸುಮಾರು 20 ಅಂಶಗಳನ್ನು ಗುರುತಿಸಲಾಗಿದೆ. ಯಾವುದೇ ಅಡಚಣೆ ಇರದ ಪ್ರಕರಣಗಳಲ್ಲಿ ಶೀಘ್ರವೇ ಅರ್ಹ ಫಲಾನುಭವಿಗಳಿಗೆ ಖಾತೆ ಮಾಡಿಕೊಡಲಾಗುವುದು.



ಹಲವು ಜಿಲ್ಲಾಧಿಕಾರಿಗಳು ತಮ್ಮ ಜಿಲ್ಲೆಗಳಲ್ಲಿ ಯಾವುದೇ ಖಾತೆ ಮಾಡುವುದು ಬಾಕಿ ಇಲ್ಲ ಎಂದು ವರದಿ ನೀಡಿದ್ದಾರೆ. ಆದರೂ ಈ ವರದಿ ಅಂತಿಮವಲ್ಲ. ಜಮೀನು ಖಾತೆ ಪ್ರಕರಣಗಳ ಸಂಖ್ಯೆ ರಾಜ್ಯಾದ್ಯಂತ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಇರಬಹುದು ಎಂದು ಸಚಿವ ಕೃಷ್ಣಭೈರೇಗೌಡ ಹೇಳಿದರು. ಈ ಸಂದರ್ಭದಲ್ಲಿ ಶಿರಾ ಶಾಸಕ ಟಿ.ಬಿ. ಜಯಚಂದ್ರ, ಶಿರಾ ತಾಲ್ಲೂಕಿನಲ್ಲಿ 2004ರಲ್ಲಿ ಮಂಜೂರು ಮಾಡಿದ ಜಮೀನುಗಳಿಗೂ ಕಂದಾಯ ಅಧಿಕಾರಿಗಳು ಖಾತೆ ಮಾಡಿಕೊಟ್ಟಿಲ್ಲ. ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಸರ್ಕಾರ ಕೂಡಲೇ ವಿಶೇಷ ಅಧಿಕಾರಿಯನ್ನು ನೇಮಿಸಿ, ತನಿಖೆ ನಡೆಸಿ, ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು, ಅಲ್ಲದೆ ರೈತರಿಗೆ ಮಂಜೂರಾದ ಜಮೀನಿನ ಹಕ್ಕು ಲಭಿಸುವಂತೆ ಮಾಡಬೇಕು ಎಂದು ಕಂದಾಯ ಸಚಿವರಲ್ಲಿ ಕೋರಿದರು. ಇದಕ್ಕೆ ಸಕಾರಾತ್ಮವಾಗಿ ಸ್ಪಂದಿಸಿ, ವಿಶೇಷ ಅಧಿಕಾರಿಯನ್ನು ನೇಮಿಸಿ, ಸಮಸ್ಯೆ ಪರಿಹರಿಸುವುದಾಗಿ ಸಚಿವ ಕೃಷ್ಣ ಭೈರೇಗೌಡ ಅವರು ಭರವಸೆ ನೀಡಿದರು. ಸರ್ವೋಚ್ಚ ನ್ಯಾಯಾಲಯ 3 ಪ್ರಕರಣಗಳಲ್ಲಿ ಸ್ಪಷ್ಟವಾಗಿ ಗೋಮಾಳ ಜಮೀನನ್ನು ಇತರೆ ಉದ್ದೇಶಗಳಿಗೆ ಮಂಜೂರು ಮಾಡದಂತೆ ಆದೇಶ ಹೊರಡಿಸಿದೆ. 1991 ಭೂ ಸುಧಾರಣೆ ಕಾಯ್ದೆ ಅನುಸಾರ 100 ಜಾನುವಾರುಗಳಿಗೆ 30 ಎಕರೆ ಗೋಮಾಳ ಜಮೀನು ಕಾಯ್ದಿರಿಸುವ ನಿಯಮ ರೂಪಿಸಲಾಗಿದೆ. ಸದ್ಯ ಇವುಗಳ ಬದಲಾವಣೆ ಸಾಧ್ಯವಿಲ್ಲ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಸ್ಪಷ್ಟ ಪಡಿಸಿದರು. ಶಾಸಕ ಧೀರಜ್ ಮುನಿರಾಜು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು. ಬಗರ್ ಹುಕುಂ ಸಾಗುವಳಿ ಸಕ್ರಮಗೊಳಿಸಲು ನಮೂನೆ 50, 53, 57 ರಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲಾಗುತ್ತಿದೆ. ನಮೂನೆ 57ರ ಅಡಿ ಸಲ್ಲಿಕೆಯಾದ ಒಟ್ಟು 2.23 ಲಕ್ಷಕ್ಕೂ ಅಧಿಕ ಅರ್ಜಿಗಳನ್ನು ರಾಜ್ಯಾದ್ಯಂತ ತಿರಸ್ಕೃತಗೊಳಿಸಲಾಗಿದೆ. ಒಂದು ವೇಳೆ ರೈತರು ಇದರಿಂದ ಬಾಧಿತರಾಗಿದ್ದರೆ, ಉಪವಿಭಾಗಧಿಕಾರಿಗೆ ಮೇಲ್ಮನವಿ ಸಲ್ಲಿಸಬಹುದು. ಪ್ರಕರಣಗಳನ್ನು ಮರು ಪರಿಶೀಲಿಸುವಂತೆ ಉಪವಿಭಾಗಧಿಕಾರಿಗಳು ಸೂಚಿಸಿದರೆ, ಬಗರ್ ಹುಕುಂ ಸಮಿತಿಗಳಲ್ಲಿ ತಿರಸ್ಕೃತಗೊಂಡ ನಮೂನೆ 57ರ ಅರ್ಜಿಗಳನ್ನು ಪುನರ್ ಪರಿಶೀಲನೆಗೆ ಪರಿಗಣಿಸಲಾಗುವುದು ಎಂದು ತಿಳಿಸಿದರು.

# ಜಂತು ಹುಳು ನಿರ್ಮೂಲನೆ; ಮಕ್ಕಳ ದೇಹಕ್ಕೆ ಸರಿಯಾದ ರೀತಿಯಲ್ಲಿ ಆಹಾರ ಲಭ್ಯ



**ಶಿಡ್ಲಘಟ್ಟ :** ಜಂತು ಹುಳು ನಿರ್ಮೂಲನೆಯಿಂದಾಗಿ ಮಕ್ಕಳು ಸೇವನೆ ಮಾಡುವ ಪೌಷ್ಟಿಕ ಆಹಾರ ಮಕ್ಕಳ ದೇಹಕ್ಕೆ ಸರಿಯಾದ ರೀತಿಯಲ್ಲಿ ಲಭ್ಯವಾಗುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶ ಮೂರ್ತಿ ತಿಳಿಸಿದರು.

ತಾಲ್ಲೂಕಿನ ಮೇಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಮೇಲೂರು ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಜಂತುಹುಳು ನಿವಾರಣೆ ದಿನಾಚರಣೆ ಕಾರ್ಯಕ್ರಮದಲ್ಲಿ ಬಾಗವಹಿಸಿ ಅವರು ಮಾತನಾಡಿದರು. ಜಂತುಹುಳು ನಿರ್ಮೂಲನೆಗೆ ಮಾತ್ರೆ ಸೇವಿಸುವುದು ಮಾತ್ರವಲ್ಲದೆ, ಶೌಚಾಲಯಕ್ಕೆ ಹೋಗಿ ಬಂದ ನಂತರ ಹಾಗೂ ಊಟಕ್ಕೆ ಮುನ್ನ ಕೈಗಳನ್ನು ಚೆನ್ನಾಗಿ ತೊಳೆಯುವ ಅಭ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದರು.

ಮಕ್ಕಳು ತಿನ್ನುವ ಆಹಾರದಲ್ಲಿ ಪೌಷ್ಟಿಕಾಂಶದ ಕೊರತೆ ಒಂದೆಡೆಯಾದರೆ ಮಕ್ಕಳ ದೇಹದಲ್ಲಿರುವ ಜಂತುಹುಳುಗಳು ಆಹಾರ ಕಬಳಿಸಿ ಮತ್ತೊಂದೆಡೆ ಮಕ್ಕಳನ್ನು ಅನಾರೋಗ್ಯಕ್ಕೆ ಸಿಲುಕಿಸುತ್ತಿವೆ ಎಂದರು. ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ಕಡಿಮೆಗೊಳಿಸಲು ಹಾಗೂ ಜಂತುಹುಳುಗಳ ಬಾಧೆಯಿಂದ ಮಕ್ಕಳನ್ನು ರಕ್ಷಿಸಲು ಮಕ್ಕಳಿಗೆ ಆಲ್ ಬೆಂಡಾಜೋಲ್ ಎಂಬ ಜಂತುಹುಳು ನಿವಾರಣಾ ಮಾತ್ರೆ ನೀಡುವ ಮೂಲಕ ರಾಷ್ಟ್ರೀಯ ಜಂತು ಹುಳು ನಿರ್ಮೂಲನಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಶಿಕ್ಷಕ ಭಾಸ್ಕರ್, ಮೇಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಎನ್.ರಮೇಶ್, ತಾಲ್ಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ದೇವರಾಜ್, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಬಿ.ಎಂ.ದೇವರಾಜ್,ಆರೋಗ್ಯ ಸುರಕ್ಷಿತಾ ಅಧಿಕಾರಿ ಅಣ್ಣಮ್ಮ, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಶಿಕ್ಷಕರು,ವಿದ್ಯಾರ್ಥಿಗಳು ಹಾಜರಿದ್ದರು.

# ಜಾತಿ ಪದ್ಧತಿ ಮತ್ತು ಮೂಢನಂಬಿಕೆಗಳನ್ನ ತೊಲಗಿಸಿ ಸಹ ಬಾಳ್ವೆಯಿಂದ ಜೀವನ ನಡೆಸಿ

**ಮಾಲೂರು,:** ಜಾತಿ ಪದ್ಧತಿ ಮತ್ತು ಮೂಢನಂಬಿಕೆಗಳ್ಳನ್ನ ತೊಲಗಿಸಿ ಭೇದ ಭಾವ ಮರೆತು ಸಹ ಬಾಳ್ವೆಯಿಂದ ಜೀವನ ನಡೆಸಲು ಅಸ್ಪೃಶ್ಯತೆ ಮುಕ್ತ ಭಾರತದ ಬದಲಾವಣೆಗೆ ನಾವೆಲ್ಲರೂ ಕೈ ಜೋಡಿಬೇಕೆಂದು ದಲಿತಸಿಂಹ ಸೇನೆ ರಾಜ್ಯಾಧ್ಯಕ್ಷ ತಿಪ್ಪಸಂದ್ರ ಶ್ರೀನಿವಾಸ್ ಹೇಳಿದರು,

ಅರಿವು ಭಾರತ ಶಿವಪ್ಪರವರ ಮಾರ್ಗದರ್ಶನದಲ್ಲಿ ತಾಲ್ಲೂಕಿನ ಕಾಟೇರಿ ಗ್ರಾಮದ ಗ್ರಾ.ಪಂ. ಅಧ್ಯಕ್ಷ ಎಂ.ಮಂಜುನಾಥ್ ಅವರ ಮನೆಯಲ್ಲಿ ಸಮಾನತೆಗಾಗಿ ಗೃಹ ಪ್ರವೇಶ ಮತ್ತು ಸಹಭೋಜನ ಕಾರ್ಯಕ್ರಮಕ್ಕೆ ಹಿರಿಯ ಮುಖಂಡರಾದ ಪಂಡಿತ್ ಮುನಿ ವೆಂಕಟಪ್ಪ, ರೈತ ಮುಖಂಡ ಅಬ್ಬಣಿ ಶಿವಪ್ಪ ರವರು ಚಾಲನೆ ನೀಡಿದರು,

ಈ ವೇಳೆ ಅಸ್ಪೃಶ್ಯತೆ ಮುಕ್ತಗೊಳಿಸುವ ನಿಟ್ಟಿನಲ್ಲಿ ಕಳೆದ ಹತ್ತು ವರ್ಷಗಳಿಂದ ಅರಿವು ಭಾರತ ವತಿಯಿಂದ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದು, ಪ್ರತಿ ಹಳ್ಳಿಗಳಲ್ಲಿ ಅಸ್ಪೃಶ್ಯತೆ ಮುಕ್ತಮನೆಯನ್ನಾಗಿ ಮಾಡಲು ಪ್ರತಿಜ್ಞೆಯನ್ನು ಘೋಷಿಸಲಾಗುತ್ತಿದೆ, ಅಲ್ಲದೆ ದಲಿತರ ಮೇಲೆ ಅನೇಕ ದೌರ್ಜನ್ಯ ದಬ್ಬಾಳಿಕೆಗಳನ್ನು ತಡೆಗಟ್ಟಲು ಹಾಗೂ ಅಸ್ಪೃಶ್ಯತೆ ಮುಕ್ತ ಗೊಳಿಸಲು ಅರಿವು ಭಾರತ ಶಿವಪ್ಪರವರು ಪಣ ತೊಟ್ಟಿದ್ದು ಡಾ ಬಿ ಅಂಬೇಡ್ಕರ್ ಅವರು ರೂಪಿಸಿದ ಸಂವಿಧಾನದ ಬಗ್ಗೆ ಅರಿವು ಮೂಡಿಸಿ ದಲಿತರಿಗೆ ದೇವಾಲಯ ಪ್ರವೇಶ ಮತ್ತು ಮೂಢನಂಬಿಕೆ ಬಗ್ಗೆ ಜಾಗೃತಿ ಮೂಡಿಸಿಲಾಗುತ್ತಿದೆ ಎಂದರು.



ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಜಿಲ್ಲಾ ಸಂಚಾಲಕ ಲಕ್ಕೂರು ವೆಂಕಟೇಶ್ ಮಾತನಾಡಿ, ಜಾತಿ ಪದ್ಧತಿಯನ್ನು ತೊಲಗಿಸಿ ಭೇದ ಭಾವ ಮರೆತು ಎಲ್ಲರೂ ಸಹ ಸಹಬಾಳ್ವೆಯಿಂದ ಜೀವನ ನಡೆಸಿ ಅಸ್ಪೃಶ್ಯತೆ ಮುಕ್ತ ಭಾರತದ ಬದಲಾವಣೆಗೆ ನಾವೆಲ್ಲರೂ ಸಾಗುತ್ತಿದ್ದೇವೆ ಎಂದು ಹೇಳಿದರು,

ಅರವು ಭಾರತ ವತಿಯಿಂದ ನಮ್ಮ ನಡೆ ಅಸ್ಪೃಶ್ಯತೆ ಮುಕ್ತ ಭಾರತದೆಡೆಗೆ ಎಂಬ ವ್ಯಾಕ್ಯದೊಂದಿಗೆ ದೊಡ್ಡಶಿವಾರ ಗ್ರಾ.ಪಂ.ಅಧ್ಯಕ್ಷ ಮಂಜುನಾಥ್ ಅವರ ನಿವಾಸ ಕಾಟೇರಿ ಗ್ರಾಮದಲ್ಲಿ ಗೃಹ ಪ್ರವೇಶ, ದೇವಾಲಯ ಪ್ರವೇಶ, ಸಹಭೋಜನ, ಸವರ್ಣಿಯರಾದ ಶ್ರೀನಿವಾಸ್, ಆನಂದ್ , ಮುರಳಿ ಅವರ ಮನೆಯಲ್ಲಿ ಸಮಾನತೆಯ ಟೀ, ಪ್ರತಿಜ್ಞಾವಿಧಿ ಭೋಧನೆಯ ಕಾರ್ಯಕ್ರಮವನ್ನು ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲಾ ರೈತ ಮುಖಂಡ ಅಬ್ಬಣಿ ಶಿವಪ್ಪ, ಅರಿವು ಡಾ.ಶಿವಪ್ಪ, ದಲಿತ ಮುಖಂಡ ಪಂಡಿತ್ ಮುನಿವೆಂಕಟಪ್ಪ, ಬಹುಜನ ಚಳುವಳಿ ತಾಲ್ಲೂಕು ಅಧ್ಯಕ್ಷ ವಡಗನಹಳ್ಳಿ ರಮೇಶ್,ಗ್ರಾ.ಪಂ.ಸದಸ್ಯ. ಲೋಕೇಶ್, ರೈತ ಮುಖಂಡ ಆನಂದ್, ಮಡಿವಾಳ ಶ್ರೀನಿವಾಸ್ , ಗ್ರಾಮಸ್ಥ ಕೃಷ್ಣಪ್ಪ, ಲೋಕೇಶ್ , ಶ್ರೀನಿವಾಸ್, ಬಿಲ್ ಕಲೇಕ್ಟರ್ ಗಣೇಶ್ , ಅಂಬಿಕಾ ಮಂಜುನಾಥ್, ತಾಲ್ಲೂಕು ಸಂಚಾಲಕಿ ಚಂದ್ರಕಲಾ, ಅಪ್ಪಿ ಮಂಜು ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ; ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಿ







**ಮುಳಬಾಗಿಲು :** ನಗರದ ಆನಂದ ವಿದ್ಯಾ ವಿಹಾರ್ ಶಾಲೆಯಲ್ಲಿ ರೋಟರಿ ಮುಳಬಾಗಿಲು ಸೆಂಟ್ರಲ್ ಮತ್ತು ಮುಳಬಾಗಿಲು ಫುಡ್ ಬ್ಯಾಂಕ್ ಸಂಯೋಗದಲ್ಲಿ ಅರ್ ಎಲ್ ಜಾಲಪ್ಪ ಆಸ್ಪತ್ರೆ ವತಿಯಿಂದ ಆರೋಗ್ಯ ಶಿಬಿರ ನಡೆಸಲಾಯಿತು.

ರೋಟರಿ ಮುಳಬಾಗಿಲು ಸೆಂಟ್ರಲ್ ಅಧ್ಯಕ್ಷರಾದ

ನಗವಾರ ಸತ್ಯಣ್ಣ ಅವರು ಶಿಬಿರದ ಕುರಿತು ಮಾತನಾಡುತ್ತಾ, ಆರೋಗ್ಯ ಜಾಗೃತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮಗಳು, ಹಾಗೂ ಕ್ಯಾನ್ಸರ್ ಸ್ಕಿನಿಂಗ್ ನಂತಹ ಉಚಿತ ಶಿಬಿರಗಳನ್ನು ಆಯೋಜಿಸುತಿದೆ. ಶೀಬಿರದಲ್ಲಿ ಪಾಲ್ಗೊಂಡಂತ ಜನರಿಗೆ ಕ್ಯಾನ್ಸರನ ಸ್ಕಿನಿಂಗ ಮಾಡುವ ಮೂಲಕ ಪತ್ತೆ ಹಚ್ಚು ಸಹಾಯ ಮಾಡುತ್ತದೆ. ಈ ಸಂಸ್ಥೆಯ ಉದ್ದೇಶ ಕ್ಯಾನ್ಸರ್ ನಂತಹ ಮಹಾ ಮಾರಿ ರೋಗವನ್ನು ಹಂತದಲ್ಲಿ ಪತ್ತೆ ಹಚ್ಚಿ ಜನರ ಜೀವವನ್ನು ಉಳಿಸುವುದು ಆಗಿದೆ ಎಂದು ತಿಳಿಸಿದರು.

ಈ ಆರೋಗ್ಯ ಶಿಬಿರದಲ್ಲಿ ಮಾಜಿ ರೋಟರಿ ಅಧ್ಯಕ್ಷರಾದ ಉತ್ತನೂರ್ ಅರುಣ್ ಕುಮಾರ್ , ರವರು ಮಾತನಾಡುತ್ತಾ. ಮಹಿಳೆಯರಿಗೊಸ್ಕರ, ರೈತರಿಗೊಸ್ಕರ, ಮಕ್ಕಳಿಗೊಸ್ಕರ, ಮತ್ತು ವಿಕಲ ಚೇತನರಿಗೊಸ್ಕರ, ಕಾರ್ಯ ನಿರ್ವಹಿಸುತ್ತಾ ಬಂದಿದೆ. ಅದೆ ರೀತಿಯಾಗಿ ಈ ಕ್ಯಾನ್ಸರ್ ಎನ್ನುವ ರೋಗವು ಇತ್ತಿಚಿನ ದಿನಗಳಲ್ಲಿ ಹೆಚ್ಚುತ್ತಿದೆ. ಆದ ಕಾರಣ ಉಚಿತ ಆರೋಗ್ಯ ತಪಾಸಣ ಶಿಬಿರ ಹಮ್ಮಿಕೊಳ್ಳಲಾಗಿದೆ, ಈ ಶಿಬಿರ ಸದುಪಯೋಗವನ್ನು ಜನರು ಹೆಚ್ಚಿನ ಪ್ರಮಾಣದಲ್ಲಿ ಬಂದು ಈ ಶೀಬಿರದ ಸದುಪಯೋಗವನ್ನು ಪಡೆಯಿರಿ ಎಂದು ತಿಳಿಸಿದರು.

ಆನಂದ ವಿದ್ಯಾ ವಿಹಾರ್ ಶಾಲೆಯ ಮುಖ್ಯಸ್ಥರು ಶ್ರೀಮತಿ ಉಮಾ ಕುಮಾರಿ ರವರು ಆರೋಗ್ಯ ಶಿಬಿರವನ್ನು ಉದ್ದೇಶಿಸಿ ಮಾತನಾಡುತ್ತಾ ಈ ಆರೋಗ್ಯ ತಪಾಸಣ ಶಿಬಿರವು ಜನರೆಲ್ಲರು ಪ್ರಯೋಜನವನ್ನು ಪಡೆದುಕೊಳ್ಳಬೇಕು. ಈ ಶಿಬಿರದಲ್ಲಿ ವಿಶೇಷವಾಗಿ ಕಣ್ಣು ಮೂಗು ಕಿವಿ ಬಾಯಿ. ತಪಾಸಣೆ ಮಾಡಿ ಉಚಿತ ಹೆಲ್ತ್ ಕಾರ್ಡ್ ನೋಂದಣಿ ಮಾಡಲಾಯಿತು. ಆದ್ದರಿಂದ ಎಲ್ಲಾ ಮಕ್ಕಳು ಪೋಷಕರು ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗವನ್ನು ಪಡೆಯಬಹುದು ಎಂದು ತಿಳಿಸಿದರು. ಈ ಶೀಬಿರದಲ್ಲಿ ಒಟ್ಟು 400 ಮಕ್ಕಳು ಪೋಷಕರು ಭಾಗವಹಿಸಿ ಶಿಬಿರದ ಸದುಪಯೋಗ ಪಡೆದು ಕೊಂಡರು. ಗ್ರಾಮ ಭಾರತಿ ಟ್ರಸ್ಟ್ ಮತ್ತು ಮುಳಬಾಗಿಲು ಫುಡ್ ಬ್ಯಾಂಕ್ ಸಂಸ್ಥಾಪಕರು ಎಂ ಬಿ ಕೃಷ್ಣಮೂರ್ತಿ ಮನು ಶಾಲೆಯ ಸಿಬ್ಬಂದಿ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಇದ್ದರು

# ರೈತರಿಂದ ಬೃಹತ್ ಪ್ರತಿಭಟನೆ ಮೆರವಣಿಗೆ

**ಚೇಳೂರು:** ಐದುವರೇ ವರ್ಷಗಳಾದರೂ ಚೇಳೂರು ತಾಲ್ಲೂಕಿಗೆ ಅಧಿಕಾರಿಳಿಲ್ಲ ಯಾವುದೇ ಇಲಾಖೆಗಳ ಕಛೇರಿಗಳಿಲ್ಲ ಭೂಮಿ ಶಾಖೆ ಮುಚ್ಚಿ ಐದುವರೆ ತಿಂಗಳಾಗಿ ವಿಳಂಭ ಮಾಡುತ್ತಿದ್ದಾರೆ ಚೇಳೂರು ತಾಲ್ಲೂಕಿಗೆ ಬರುವ 17 ಕಂದಾಯ ವೃತ್ತಗಳ ಹಳೇ ಮೂಲ ದಾಖಲಾತಿಗಳು ಬಂದಿರುವುದಿಲ್ಲ ಚೇಳೂರು ಸರಕಾರಿ ಆಸ್ತಿಗಳು ಕಬಳಿಸಿ ಭೂ-ಕಳ್ಳರು ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕಾಗಿದೆ ಸರಕಾರಿ ಆಸ್ಪತ್ರೆ ಮೇಲ್ದರ್ಜಗೆ ಏರಿಸಬೇಕಾಗಿದೆ ಜನ ಜಾನುವಾರುಗಳು ಕುಡಿಯವ ನೀರಿಗೆ ಚೇಳೂರು ಪಾಪಾಗ್ನಿ ನದಿಗೆ ಅಡ್ಡವಾಗಿ ಸೇತುವೆ ಸಾರಿಗೆ ತರಕಾರಿ ಸಂತೆ ಇತರೆ 40 ಬೇಡಿಕೆಗಳು ಈಡೇರಿಸಲು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಚೇಳೂರು ತಾ ಘಟಕದಿಂದ ತಹಸೀಲ್ದಾರ್ ಶ್ರೀನಿವಾಸನಾಯುಡುಗೆ ಮನವಿ ಪತ್ರಗಳು ನೀಡಿದರು.

ಈ ಸಂಧರ್ಭದಲ್ಲಿ ರಾಜ್ಯಾದ್ಯಕ್ಷ ವಿ.ಆರ್.ನಾರಾಯಣರೆಡ್ಡಿ ಮಾತನಾಡಿ 2019 ರಲ್ಲಿ ತಾಲ್ಲೂಕು ಆಗಿದ್ದು 2022 ರಲ್ಲಿ ಗೆಜೆಟ್ ಆಗಿದ್ದರೂ ಸರಕಾರಿ ಕಛೇರಿಗಳು ಪ್ರಾರಂಭವಿಲ್ಲ ರೈತರ ಕೆಲಸಗಲೂ ನಿಂತು ಹೋಗಿವೆ ಮುಂದಿನ ತಿಂಗಳ 10 ರೊಳಗೆ ಬಗೆಹರಿಸಿದಿದ್ದರೆ ಮತ್ತೆ ಕಛೇರಿಗೆ ಘೇರಾವ್ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತ ಸಂಘದ ಅಧ್ಯಕ್ಷ ಹೆಚ್.ಎನ್. ಗೋವಿಂದರೆಡ್ಡಿ ಚೇಳೂರು ತಾ. ಹಿರಿಯ ಮುಖಮಡರಾದ ಎಸ್.ವೈ.ವೆಂಕಟರಮಣಾರೆಡ್ಡಿ ಸಮಸ್ಯೆಗಳ ಕುರಿತು ಧರಣಿ ನಿರತ ರೈತರೊಂದಿಗೆ ಪ್ರತಿಭಟನೆಯಲ್ಲಿ ಮಾತನಾಡಿದರು.

ಧರಣಿ ನಿರತ ಪ್ರತಿಭಟನಾಕಾರರಿಂದ ಮನವಿ ಪತ್ರ ಸ್ವೀಕರಿಸಿದ ತಹಸೀಲ್ದಾರ್ ಅನೇಕ ದಿನಗಳ ಜನರ ಕನಸು ನನಸಾಗಿದೆ ಚೇಳೂರು ತಾಲ್ಲೂಕಿಗೆ ಮುಂದಿನ ದಿನಗಳಲ್ಲಿ ಭೂಮಿ ಶಾಖೆ ಪ್ರಾರಂಭವಾಗುತ್ತೆ ಹಂತ ಹಂತವಾಗಿ ಕಛೇರಿಗಳು ಪ್ರಾರಂಭ ಆಗುತ್ತವೆ ಹಳೇ ದಾಖಲೆಗಳ ಬರಲು ಡಿಸಿ ರವರಿಗೆ ಮನವಿ ನೀಡಿದ್ದೇನೆ ಎಂದರು.

ರೈತ ಸಂಘದ ನೂರಾರು ರೈತರು ಪ್ರವಾಸಿ ಮಂದಿರದಿಂದ ಹೊರಟು ಎಂ.ಜಿ.ಸರಕಲ್ ನಿಂದ ಚೇಳೂರು ತಾಲ್ಲೂಕು ಕಚೇರಿ ಬಳಿ ಪಾದಯಾತ್ರೆ ಮಾಡಿದಂತೆ ಭಾರೀ ಮೆರವಣಿಗೆಯೊಂದಿಗೆ ಬಂದು ತಾ ಕಚೇರಿ ಬಳಿ ಬಂದು ಧರಣಿ ಕುಳಿತರು. ರೈತ ಸಂಘದ ಬೃಹತ್ ಪ್ರತಿಭಟನಾ ಮೆರವಣಿಗೆಗೆ ಚೇಳೂರು ತಾ. ಅಭಿವೃದ್ದಿ ಹೋರಾಟ ಸಮಿತಿ ಬೆಂಬಲ ನೀಡಿತು.

ಪ್ರತಿಭಟನೆಯ ಮೆರವಣಿಗೆಯಲ್ಲಿ ಕಾರ್ಯಾದ್ಯಕ್ಷ ಶ್ರೀಕಾಂತರೆಡ್ಡಿ ತಾ ಅಧ್ಯಕ್ಷ ಬೈರಪ್ಪನಪಲ್ಲಿ ಆರ್. ಶಿವಾರೆಡ್ಡಿ ಪೆದ್ದೂರು ವೆಂಕಟರವಣ ಪಟೇಲ್ ಕೃಷ್ಣಾರೆಡ್ಡಿ ಎಸ್. ವೆಂಕಟರವಣ ಹೊಸಹುಡ್ಯ ಕೆ.ವಿ.ವೆಂಕಟರವಣಪ್ಪ ಗುಮ್ಮಿಶೆಟ್ಟಿ ರವಿ ಪಾಳ್ಯಕೆರೆ ರಾಜಾರೆಡ್ಡಿ ನರಸಿಂಹಪ್ಪ ಗೊಲ್ಲಪಲ್ಲಿ ಜಿ.ವಿವೆಂಕಟೇಶ್ ಮ್ಯಾಕಲಪಲ್ಲಿ ನಂಜುಂಡಪ್ಪ ಬಾಗೇಪಲ್ಲಿ ತಾ ಅಧ್ಯಕ್ಷ ವೆಂಕಟಶಿವಾರೆಡ್ಡಿ ಗೌರವಾದುಕ್ಷ ಲಕ್ಷಿ ನರಸಪ್ಪ.ಚೇಳೂರು ತಾಲ್ಲೂಕು ಹೋರಾಟ ಸಮಿತಿಯ ಪೇಪರ್ ಚಲಪತಿ ಜಿ.ಪಾಪಿರೆಡ್ಡಿ ಕೆವಿ.ಶ್ರೀನಿವಾಸರೆಡ್ಡಿ ವೈ.ಶಂಕರಪ್ಪ ಇತರರು ಭಾಗವಹಿಸಿದ್ದರು.

ಚೇಳೂರು ಸರಕಲ್ ಇನ್ ಸ್ಪೇಕ್ಟರ್ ಜನಾರ್ದನ ಪಿಎಸೈ ಸಯ್ಯದ್ ಅನ್ಸರ್ ನೇತೃತ್ವದಲ್ಲಿ ಪೋಲೀಸ್ ತುಕಡಿ ಬಂದೋಬಸ್ತು ಮಾಡಿದ್ದರು




# ಸ್ವಾತಂತ್ರ್ಯ ಹೋರಾಟಗಾರನೆಂಬ ನಕಲಿ ದಾಖಲೆ: ದಂಡನೆಗೆ ಆದೇಶ ಹೊರಡಿಸಿದ: ಹೈಕೋರ್ಟ್

ಮುಳಬಾಗಿಲು : ಭಾರತ ಸ್ವಾತಂತ್ರ್ಯ ಹೋರಾಟಗಾರರ ಹೆಸರಿನಲ್ಲಿ ಸರ್ಕಾರದಿಂದ ಗೌರವಧನ ಪಡೆಯಲು ಯತ್ನಿಸುವ ನಕಲಿ ವ್ಯಕ್ತಿಗಳನ್ನು ಕಠಿಣ ರೀತಿಯಲ್ಲಿ ದಂಡಿಸಿ' ಎಂದು ಆದೇಶ ಹೊರಡಿಸಿರುವ ಹೈಕೋರ್ಟ್, 'ನಿಜವಾದ ಸ್ವಾತಂತ್ರ್ಯ ಹೋರಾಟಗಾರರಿಗೆ ಯಾವುದೇ ತೊಂದರೆ ಆಗಬಾರದು. ಆದರೆ, ಕೆಲವರು ನಕಲಿ ದಾಖಲೆ ಒದಗಿಸಿ ಗೌರವಧನಕ್ಕೆ ಹಕ್ಕು ಮಂಡಿಸುತ್ತಾರೆ. ಅಂತಹ ಪ್ರಕರಣಗಳನ್ನು ಸರ್ಕಾರ ನಿರ್ದಾಕ್ಷಿಣ್ಯವಾಗಿ ಹತ್ತಿಕ್ಕಬೇಕು' ಎಂದು ಆದೇಶಿಸಿದೆ.

'ಸ್ವಾತಂತ್ರ್ಯ ಹೋರಾಟಗಾರ ಎಂದು ಹಲವು ವರ್ಷ ರಾಜ್ಯ ಸರ್ಕಾರದಿಂದ ಗೌರವಧನ ಪಡೆದ ಮುಳಬಾಗಿಲು ತಾಲ್ಲೂಕಿನ ಮಂಡಿಕಲ್ ಗ್ರಾಮದ 85 ವರ್ಷದ ಎಂ.ವಿ.ಶ್ರೀನಿವಾಸ ಗೌಡ ಅವರಿಂದ ಪುನಃ ಹಣ ವಸೂಲು ಮಾಡಬೇಕು' ಎಂದು ಕೋಲಾರ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದರು. ಈ ಆದೇಶವನ್ನು ಪ್ರಶ್ನಿಸಿ ಶ್ರೀನಿವಾಸ ಗೌಡ ಹೈಕೋರ್ಟ್ ಮೆಟ್ಟಿಲೇರಿದ್ದರು.

ಶ್ರೀನಿವಾಸ ಗೌಡ ಅವರ ರಿಟ್ (ಡಬ್ಲ್ಯು.ಪಿ 27154/2019) ಅರ್ಜಿ ವಜಾಗೊಳಿಸಿರುವ ನ್ಯಾಯಮೂರ್ತಿ ಎಸ್.ಜಿ.ಪಂಡಿತ್ ಮತ್ತು ನ್ಯಾಯಮೂರ್ತಿ ರಾಮಚಂದ್ರ ಡಿ.ಹುದ್ದಾರ ಅವರಿದ್ದ ವಿಭಾಗೀಯ ನ್ಯಾಯಪೀಠ, 'ಅರ್ಜಿದಾರರು ಸ್ವಾತಂತ್ರ್ಯ ಹೋರಾಟದ ವೇಳೆ ಜೈಲು ಸೇರಿದ್ದಕ್ಕೆ, ಮನೆಯಿಂದ ಹೊರ– ಗುಳಿದಿದ್ದಕ್ಕೆ ಹಾಗೂ ಆ ಸಮಯದಲ್ಲಿ ಶಿಕ್ಷಣದಿಂದ ವಂಚಿತರಾಗಿದ್ದಕ್ಕೆ ಯಾವುದೇ ದಾಖಲೆಗಳನ್ನು ಒದಗಿಸಿಲ್ಲ. ಹಾಗಾಗಿ, ಸರ್ಕಾರದ ನಿಯಮಗಳ ಅನುಸಾರ ಅವರು ರಾಜ್ಯ ಸರ್ಕಾರದಿಂದ ಕೊಡಮಾಡುವ ಗೌರವ ಧನ ಪಡೆಯಲು ವಿಫಲವಾಗಿರುವುದು ದೃಢಪಟ್ಟಿದೆ' ಎಂದು ಅಭಿಪ್ರಾಯಪಟ್ಟಿದೆ.

**ಅರ್ಜಿಯಲ್ಲಿ ಏನಿತ್ತು?: 'ನಾನು ಸ್ವಾತಂತ್ರ್ಯ ಹೋರಾಟಗಾರನಾಗಿದ್ದು, ರಾಜುಪೇಟೆ**



ಸತ್ಯಾಗ್ರಹ ಹಾಗೂ ಮೈಸೂರು ಚಲೋ ಚಳವಳಿಗಳಲ್ಲಿ ಭಾಗಿಯಾಗಿ ಸೆರೆವಾಸ ಅನುಭವಿಸಿದ್ದೇನೆ. ಸರ್ಕಾರದ ಆದೇಶದಂತೆ ದಾಖಲೆಗಳನ್ನು ಸಲ್ಲಿಸಿ 1981ರಿಂದ ಪ್ರತಿ ತಿಂಗಳೂ ರಾಜ್ಯ ಸರ್ಕಾರದ ಗೌರವ ಧನ ಪಡೆಯುತ್ತಿದ್ದೇನೆ. ಆದರೆ, ನನ್ನ ವಿರುದ್ಧ ಲೋಕಾಯುಕ್ತಕ್ಕೆ ನೀಡಲಾಗಿದ್ದ ಸುಳ್ಳು ದೂರು ಆಧರಿಸಿ ಗೌರವಧನ ವಾಪಸು ಪಡೆಯುವಂತೆ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ. ಇದು ಕಾನೂನು ಬಾಹಿರ' ಎಂದು ಎಂ. ವಿ.ಶ್ರೀನಿವಾಸ ಗೌಡ ಆಕ್ಷೇಪಿಸಿದ್ದರು.

**ಪ್ರಕರಣವೇನು?:** 'ಎಂ.ವಿ.ಶ್ರೀನಿವಾಸ ಗೌಡ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸ್ವಾತಂತ್ರ್ಯ ಹೋರಾಟಗಾರ ಎಂದು ಹಕ್ಕು ಮಂಡಿಸಿ ಗೌರವಧನ ಪಡೆಯುತ್ತಿದ್ದಾರೆ. ಈ ಬಗ್ಗೆ ತನಿಖೆ ನಡೆಸಬೇಕು' ಎಂದು ಕೋರಿ ಮಂಡಿಕಲ್ ನಿವಾಸಿ ನಾಗರಾಜ್ 2015ರ ಆಗಸ್ಟ್ 1ರಂದು ಲೋಕಾಯುಕ್ತಕ್ಕೆ ದೂರು ನೀಡಿದ್ದರು.

'ಲೋಕಾಯುಕ್ತ ತನಿಖೆ ದೃಢಪಟ್ಟಿದೆ' ಎಂಬ ಆಧಾರದಲ್ಲಿ ಕೋಲಾರ ಜಿಲ್ಲಾಧಿಕಾರಿ 2018ರ ನವೆಂಬರ್ 14ರಂದು ಆದೇಶವೊಂದನ್ನು ಹೊರಡಿಸಿ, 'ಎಂ.ವಿ.ಶ್ರೀನಿವಾಸ ಗೌಡ ಅವರಿಗೆ ಈತನಕ ನೀಡಲಾಗಿರುವ ಗೌರವಧನ ವಾಪಸು ಪಡೆಯುವ ಪ್ರಕ್ರಿಯೆ ಆರಂಭಿಸಿ' ಎಂದು ಮುಳಬಾಗಿಲು ತಹಶೀಲ್ದಾರ್ ಅವರಿಗೆ ಆದೇಶಿಸಿದ್ದರು. ಇದರ ಅನುಸಾರ ತಹಶೀಲ್ದಾರ್ 2019ರ ಮೇ 20ರಂದು ಅರ್ಜಿದಾರರಿಗೆ ನೋಟಿಸ್ ನೀಡಿ 2019ರ ಮೇ 30ರೊಳಗೆ □9,08,661 ಗೌರವ ಧನವನ್ನು ವಾಪಸು ನೀಡಬೇಕು. ಇಲ್ಲವಾದಲ್ಲಿ ಕಾನೂನು ಕ್ರಮ ಎದುರಿಸಬೇಕಾಗುತ್ತದೆ' ಎಂದು ಎಚ್ಚರಿಸಿದ್ದರು.

## ಅಕ್ಕ ಅಂಗಾರ, ತಂಗಿ ಬಂಗಾರ ನಾಟಕ




**ಕುಕನೂರು** : ನಾಟಕ ಅಕಾಡೆಮಿ ಸದಸ್ಯ ಜೇವರ್ಗಿ ರಾಜಣ್ಣ ಒಡೆತನದ ಗುಬ್ಬಿಯ ಬಿ ಎಸ್ ಆರ್ ನಾಟಕ ಸಂಘದಿಂದ ಅಕ್ಕ ಅಂಗಾರ ತಂಗಿ ಬಂಗಾರ ಪ್ರದರ್ಶನದೊಂದಿಗೆ ಇಂದಿನಿಂದ ಗುದ್ನೇಶ್ವರ ಜಾತ್ರೆಯಲ್ಲಿ ರಂಗಭೂಮಿಯ ಕಲಾ ನಾಟಕ ಪ್ರಾರಂಭವಾಗಲಿದೆ.

ನಾಟಕ ಪ್ರಚಾರಾರ್ಥವಾಗಿ ಸುದ್ದಿಗೋಷ್ಠಿ ಕರೆದು ಮಾತನಾಡಿದ ಗುಬ್ಬಿ ಬಿ ಎಸ್ ಆರ್ ಕಂಪನಿಯ ಮುಖ್ಯಸ್ಥ ಜೇವರ್ಗಿ ರಾಜಣ್ಣ, ಕುಕನೂರು ತಾಲೂಕಿನ ಜನತೆ ಯಾವಾಗಲೂ ರಂಗಭೂಮಿ ಕಲೆಯ ನಿಜವಾದ ಪ್ರೋತ್ಸಾಹಕರು. ಪ್ರತಿ ಬಾರಿಯೂ ಇಲ್ಲಿ ನಾಟಕ ಪ್ರದರ್ಶನ ಮಾಡಲಾಗಿದೆ. ಎಲ್ಲ ಸಂದರ್ಭದಲ್ಲಿ ಇಲ್ಲಿಯ ಜನತೆ ತಮ್ಮನ್ನು, ನಾಟಕ ಕಂಪನಿಯನ್ನು ಕೈ ಹಿಡಿದು ಬೆಳೆಸಿದ್ದಾರೆ. ಹರಸಿ ಹಾರೈಸಿದ್ದಾರೆ. ನಮ್ಮ ಕಂಪನಿ ಪ್ರದರ್ಶನ ಮಾಡುವ ಯಾವುದೇ ನಾಟಕದಲ್ಲಿ ಅಶ್ಲೀಲ ಸಂಭಾಷಣೆಯಾಗಲಿ, ನೃತ್ಯವಾಗಲಿ ಇರುವುದಿಲ್ಲ, ಕುಟುಂಬ ಸಮೇತ, ಹೆಚ್ಚಾಗಿ ಹೆಣ್ಣುಮಕ್ಕಳು ನೋಡುವಂತಹ ಸಾಂಸಾರಿಕ, ಸಾಮಾಜಿಕ ಕಥೆಗಳನ್ನು ನಾಟಕದಲ್ಲಿ ಅಭಿನಯಿಸಲಾಗುತ್ತದೆ. ನುರಿತ, ಅನುಭವಿ ಕಲಾವಿದರ ದಂಡೇ ನಮ್ಮಲ್ಲಿದ್ದು ಮನರಂಜನೆ ಅರಸಿ ಬರುವ ರಂಗಭೂಮಿಯ ಕಲಾ ಪ್ರೇಮಿಗಳಿಗೆ ನಿರಾಶೆ ಆಗುವುದಿಲ್ಲ, ಜೀ ಕನ್ನಡದ ಸುಜಾತಾ ಗುಬ್ಬಿ, ಮಜಾ ಭಾರತ ಕಾರ್ಯಕ್ರಮದ ನೀಲಾ ಜೇವರ್ಗಿ, ಸಿಂಧೂ ಬೀಳಗಿ, ಮಾರುತಿ ಶೆಟ್ಟಿ ಪ್ರಮುಖ ಪಾತ್ರದಲ್ಲಿ ಇರುವರು. ಪ್ರತಿದಿನ ಸಂಜೆ ಮತ್ತು ರಾತ್ರಿ ಎರಡು ಆಟಗಳ ಪ್ರದರ್ಶನ ನಡೆಯಲಿದೆ ಎಂದು ಜೇವರ್ಗಿ ರಾಜಣ್ಣ ಹೇಳಿದರು.

## ಸರ್ಕಾರದ ಆದೇಶದಂತೆ ಸಾರ್ವಜನಿಕರಿಗೆ ಕೆಲಸ ಕಾರ್ಯಗಳನ್ನು ಮಾಡಿಕೊಡಬೇಕು



**ಮುಳಬಾಗಿಲು:** ತಾಲೂಕಿನ ತಹಸೀಲ್ದಾರ್ ಕಚೇರಿಯಲ್ಲಿ ಅಧಿಕಾರಿಗಳ ಸಭೆಯನ್ನು ತಹಸಿಲ್ದಾರ್ ವಿ ಗೀತಾ ರವರು ನಡೆಸಿದರು.

ಮಾತನಾಡಿ ಸರ್ಕಾರದ ಆದೇಶದಂತೆ ಅವಧಿ ಒಳಗಡೆ ಸಾರ್ವಜನಿಕರ ಕೆಲಸಗಳನ್ನು ವಿಳಂಬ ಮಾಡದೆ ಸಕಾಲಕ್ಕೆ ಕೆಲಸ ಕಾರ್ಯಗಳನ್ನು ಮಾಡಿಕೊಡಬೇಕೆಂದು ಅಧಿಕಾರಿಗಳಿಗೆ ಆದೇಶಿಸಿದರು.

ಖಾತೆ ಬದಲಾವಣೆ ದುರಸ್ತಿ ತಿದ್ದುಪಡಿ ಪಿಂಚಣಿ ಜಾತಿ ಆದಾಯ ಪ್ರಮಾಣ ಪತ್ರ ವಂಶವೃಕ್ಷ ಪ್ರಮಾಣ ಪತ್ರ ಇಸಿ ಮೂಟೇಶನ್ ಹಾಗೂ ಇನ್ನೂ ಮುಂತಾದ ರೈತರ ಮತ್ತು ಸಾರ್ವಜನಿಕರಿಗೆ ಅತಿ ಜರೂರಾಗಿ ಕೆಲಸ ಕಾರ್ಯಗಳನ್ನು ಮಾಡಿಕೊಡಬೇಕೆಂದು ತಿಳಿಸಿದರು

ರೈತರು ಮತ್ತು ಸಾರ್ವಜನಿಕರು ನಿಮ್ಮಗಳ ಮೇಲೆ ದೂರುಗಳನ್ನು ಬರೆದಂತೆ ನೋಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು

ಈ ಕುರಿತು 15 ದಿನಗಳ ಒಳಗಡೆ ಪ್ರಗತಿ ತೋರಿಸಬೇಕೆಂದರು ತಿಳಿಸಿದರು ಈ ಸಂದರ್ಭದಲ್ಲಿ ರಾಜ್ಯ ಸ್ವ ನಿರೀಕ್ಷಕರು ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು

## ನೂರು ದಿನ ಕ್ಷಯ ರೋಗಿ ಪತ್ತೆ ಮತ್ತು ಚಿಕಿತ್ಸೆ ಆಂದೋಲನಕ್ಕೆ ಚಾಲನೆ ಡಾ. ಚೇತನ್




**ನಾಗಮಂಗಲ:** ಪ್ರತಿಯೊಬ್ಬರು ಆರೋಗ್ಯದ ಗಮನ ಕೊಟ್ಟು ಸಾಂಕ್ರಾಮಿಕ ಆಡುವ ರೋಗಗಳನ್ನು ತಡೆಯುವ ನಿಟ್ಟಿನಲ್ಲಿ ಆರಂಭಿಕ ಲಕ್ಷಣಗಳಿದ್ದರೆ ಸ್ಥಳೀಯ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಡಾ. ವೈದ್ಯಾಧಿಕಾರಿಗಳಾದ ಚೇತನ್ ತಿಳಿಸಿದರು.

ಅವರು ಇಂದು ನಾಗಮಂಗಲ ತಾಲೂಕು ದೇವಲಾಪುರ ಹೋಬಳಿ ಕೇಂದ್ರದ ಪ್ರಾಥಮಿಕ ಆರೋಗ್ಯ ಕೇಂದ್ರ ನೂರು ದಿನದ ಕ್ಷಯರೋಗಿ ಪತ್ತೆ ಮತ್ತು ಚಿಕಿತ್ಸೆ ಆಂದೋಲನ ಕ್ಷಯರೋಗ (ಟಿಬಿ) ಮುಕ್ತ ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡಿರುವ 'ನೂರು ದಿನಗಳ ಜಾಗೃತಿ ಅಭಿಯಾನ'ಕ್ಕೆ ಚಾಲನೆ ನೀಡಲಾಯಿತು.

'ಆರೋಗ್ಯದ ಬಗ್ಗೆ ಇರಲಿ ಗಮನ– ಟಿಬಿ ಮುಕ್ತ ಭಾರತ ಅಭಿಯಾನ'ದ ಕಾರ್ಯಕ್ರಮದಲ್ಲಿ ಟಿಬಿಯ ಪರಿಣಾಮ, ತಡೆಗಟ್ಟುವುದು, ಲಭ್ಯವಿರುವ ಚಿಕಿತ್ಸೆ ಮೊದಲಾದವುಗಳನ್ನು ತಿಳಿಸಿಕೊಡಲಾಯಿತು. ಮುಂದಿನ 100 ದಿನಗಳಲ್ಲಿ ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳುವ ಜಾಗೃತಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಮನೆ ಮನೆ ಭೇಟಿಯ ಮೂಲಕ ಕ್ಷಯರೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಚಿಕಿತ್ಸೆ ನೀಡಲಾಗುತ್ತದೆ. ರೋಗ ಲಕ್ಷಣಗಳಿರುವವರು ಚಿಕಿತ್ಸೆಗಾಗಿ ಸೇವಾ ಸೌಲಭ್ಯಕ್ಕೆ ಬರುವ ಬದಲು ಆರೋಗ್ಯ ಇಲಾಖೆಯೇ ರೋಗಲಕ್ಷಣಗಳಿರುವವರ ಹುಡುಕಾಟ,

ರೋಗ ಪತ್ತೆಮಾಡಿ ಸೂಕ್ತ ಚಿಕಿತ್ಸೆ ನೀಡಿ ಗುಣಮುಖಗೊಳಿಸುವುದು ಈ ಆಂದೋಲನದ ವಿಶೇಷವಾಗಿದೆ. ನಿಮ್ಮ ಮನೆ ಬಾಗಿಲಿಗೆ ಬರುವ ಆಶಾ, ಆರೋಗ್ಯ ಕಾರ್ಯಕರ್ತರಿಗೆ ಸಹಕರಿಸಿ ಕ್ಷಯರೋಗ ಮುಕ್ತ ವಾಗಿಸಲು ಕೈಜೋಡಿಸಿ ಎಂದು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಈಶ್ವರ್ ಹೇಳಿದರು.

'ಒಬ್ಬರಿಂದ ಒಬ್ಬರಿಗೆ ಹರಡುವ ಕಾಯಿಲೆ ಇದಾಗಿರುವುದರಿಂದ ಚಿಕಿತ್ಸೆ ನೀಡಿ ಹರಡದಂತೆ ನೋಡಿಕೊಳ್ಳಬೇಕು. 3–4 ವಾರಗಳಿಗೂ ಹೆಚ್ಚು ಕಾಲದಿಂದ ಕೆಮ್ಮು ಇದ್ದರೆ ಅದು ಕ್ಷಯ ಆಗಿರಬಹುದು. ಆದ್ದರಿಂದ ಆರಂಭಿಕ ಹಂತದಲ್ಲೇ ಪರೀಕ್ಷೆ ಮಾಡಿಸಿಕೊಳ್ಳಬೇಕು.

ಕಾಯಿಲೆ ಇದ್ದವರಿಗೆ ಸರ್ಕಾರದಿಂದ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು. ಸಾರ್ವಜನಿಕರು ಇದರ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳ ಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಪಿಎಸ್ ಇ ಒ ಈಶ್ವರರವರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಆಶಾ ಕಾರ್ಯಕರ್ತೆಯರು ಸಾರ್ವ ಜನಿಕರು ಹಾಗೂ ಕ್ಷಯ ರೋಗಿಗಳು ಭಾಗವಹಿಸಿದ್ದರು

## ಸುದ್ದಿ ಸಂಜೆ

### ಸತ್ತೇಗಾಲ ಪಟ್ಟಣ ಪಂಚಾಯಿತಿ ರಚನೆಗೆ ಮುಖ್ಯಮಂತ್ರಿಗಳ ಭರವಸೆ

ಚಾಮರಾಜನಗರ: ವಿದ್ಯಾರ್ಥಿಗಳ ಪ್ರತಿಭೆಯನ್ನು ವಿಕಸನಗೊಳಿಸುವುದೇ ಶಿಕ್ಷಣ. ಜಾತಿಯಿಂದ ಯಾರೂ ಪ್ರತಿಭಾವಂತರಾಗುವುದಿಲ್ಲ. ಎಲ್ಲರಲ್ಲಿಯೂ ಪ್ರತಿಭೆಯಿದ್ದು ಅದು ಹೊರಬರಲು ಅವಕಾಶಗಳು ಸಿಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸತ್ತೇಗಾಲದಲ್ಲಿ ನೂತನವಾಗಿ ನಿರ್ಮಿಸಿರುವ ಲಕ್ಷ □□ಮ್ಮ ಸೋಸಯ್ಯನ ಸಿದ್ದಯ್ಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದರು. ಎರಡು ಕೋಟಿ ರೂ.ಗಳನ್ನು ವೆಚ್ಚ ಮಾಡಿ ನಿರ್ಮಾಣವಾಗಿರುವ ಶಾಲೆಯಲ್ಲಿ ಸುಸಜ್ಜಿತ ಪ್ರಯೋಗಾಲಯ, ಗ್ರಂಥಾಲಯಗಳನ್ನು ನಿರ್ಮಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಸಿಎಂ ಮರಿಸ್ವಾಮಿ ಸ್ವಂತ ಶ್ರಮದಿಂದ ಐಪಿಎಸ್ ಆಗಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳು ದೊರಕುವಂತೆ ಮಾಡಿದ್ದಾರೆ. ಸ್ವಾತಂತ್ರ್ಯಕ್ಕೂ ಮುನ್ನ ಶೂದ್ರರು, ದಲಿತರಿಗೆ ಅವಕಾಶಗಳೇ ಇರಲಿಲ್ಲ. ಅಂಬೇಡ್ಕರ್ ಅವರು ಕಷ್ಟಪಟ್ಟು ವಿದ್ಯಾವಂತರಾದರು. ಶಿಕ್ಷಣ ಪ್ರಬಲವಾದ ಅಸ್ತ್ರ. ಶಿಕ್ಷಣದಿಂದ ವಂಚಿತರಾದವರು ಸ್ವಾಭಿಮಾನದಿಂದ, ಗೌರವದಿಂದ ಬದುಕುವುದು ಕಷ್ಟವಾಗುತ್ತದೆ. ಅದಕ್ಕಾಗಿ ಎಲ್ಲರೂ ವಿದ್ಯಾವಂತರಾಗಲೇಬೇಕು ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.ಶಾಲಾ ನಿರ್ಮಾಣ ಕಾರ್ಯದಲ್ಲಿ ತೊಡಗಿದವರನ್ನು ಅಭಿನಂದಿಸಿದ ಸಿಎಂ ಮರಿಸ್ವಾಮಿಯವರು ಈ ಊರಿನಲ್ಲಿ ಹುಟ್ಟಿ ಐಪಿಎಸ್ ಅಧಿಕಾರಿಯಾಗಿ, ಪೊಲೀಸ್ ಮಹಾನಿರ್ದೇಶಕರಾಗಿ ಈ ಊರಿಗೆ ಹಾಗೂ ಈ ಶಾಲೆಗೆ ಕೀರ್ತಿಯನ್ನು ತಂದಿದ್ದಾರೆ. ಈ ಊರಿನ ಜನ ಹೆಮ್ಮೆ ಪಡುವಂತೆ ಸರ್ಕಾರಿ ಅಧಿಕಾರಿಯಾಗಿ ಕೆಲಸ ಮಾಡಿದ್ದಾರೆ. ಅವರು ಸತ್ತೇಗಾಲ ಗ್ರಾಮದ ಗ್ರಾಮಭಿವೃದ್ಧಿ ಸಂಘದ ಅಧ್ಯಕ್ಷರಾಗಿ ಈ ಶಾಲೆಯ ನಿರ್ಮಾಣಕ್ಕೆ ಆಸಕ್ತಿ ತಳೆದು ಇತರರ ಸಹಾಯವನ್ನು ಪಡೆದು ಶಾಲೆಯನ್ನು ನಿರ್ಮಾಣ ಮಾಡಿರುವುದನ್ನು ಮುಖ್ಯಮಂತ್ರಿಗಳೂ ಮೆಚ್ಚಿದರು. ಚಾಮರಾಜನಗರದಲ್ಲಿ ಒಟ್ಟು ಪ್ರಾಥಮಿಕ ಶಾಲೆಗಳು 1102 ಶಾಲೆಗಳಿದ್ದು ಪೈಕಿ 805 ಸರ್ಕಾರಿ ಶಾಲೆಗಳಿವೆ. ಸರ್ಕಾರವೇ ಎಲ್ಲವನ್ನೂ ಅಭಿವೃದ್ಧಿ ಪಡೆಸುವುದು ಕಷ್ಟವಾಗುತ್ತದೆ. ಇದರಲ್ಲಿ ಸಾರ್ವಜನಿಕರ ಜವಾಬ್ದಾರಿಯೂ ಇದೆ. ನಾವು ಓದಿದ ಶಾಲೆ ಹೊಸದಾಗಿ ನಿರ್ಮಾಣವಾಗಿ ಉದ್ಘಾಟನೆಯಾಗುತ್ತಿರುವಾಗ ಈ ಕೆಲಸ ಮಾಡಿದವರಿಗೆ ಆಗುವ ಖುಷಿ, ಸಮಾಧಾನ ಬೇರೆಯಾರಿಗೂ ಆಗಲು ಸಾಧ್ಯವಿಲ್ಲ. ಮರಿಸ್ವಾಮಿ ಹಾಗೂ ಅವರ ಕುಟುಂಬದವರಲ್ಲದೇ ಶಾಲಾ ನಿರ್ಮಾಣ ಕಾರ್ಯದಲ್ಲಿ ಸಹಕಾರ ನೀಡಿದ 63 ಜನರನ್ನು ಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ಅಭಿನಂದಿಸಿದರು. ನಾವು ವಿದ್ಯಾರ್ಥಿಗಳಾಗಿದ್ದಾಗ ಬರಿಗಾಲಿನಲ್ಲಿ ಶಾಲೆಗೆ ತರಳುತ್ತಿದ್ದೆವು. ಹಿಂದೆ ನಾನು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಪ್ರತಿ ವಿದ್ಯಾರ್ಥಿಯೂ ಶೂ, ಸಾಕ್ಸ್ ಹಾಗೂ ಸಮವಸ್ತ್ರವನ್ನು ಹಾಕಿಕೊಳ್ಳಬೇಕೆಂದು ಶೂಭಾಗ್ಯ ಕಾರ್ಯಕ್ರಮವನ್ನು ಜಾರಿ ಮಾಡಿದ್ದೆ. ಈಗ ಹಾಲು, ರಾಗಿ ಮಾಲ್ಟ್, ಮೊಟ್ಟೆ, ಚಿಕ್ಕಿ, ಬಾಳೆಹಣ್ಣು, ಸಮವಸ್ತ್ರ, ಪುಸ್ತಕವನ್ನು ಕೊಡುತ್ತಿದ್ದೇವೆ. ಹಾಗಾಗಿ ಮಕ್ಕಳು ಓದಬೇಕು. ವಿದ್ಯೆಯಿಂದ ವಂಚಿತರಾಗಬಾರದು ಎಂದರು. ಮಕ್ಕಳಿಗೆ ಆರ್ಥಿಕವಾಗಿ ತೊಂದರೆಯಾಗಬಾರದು ಎಂದು ಗೃಹಲಕ್ಷ್ಮಿ □□ೀ ಕಾರ್ಯಕ್ರಮವನ್ನು ಜಾರಿ ಮಾಡಿದ್ದೇವೆ. ಜನರಲ್ಲಿ ಆರ್ಥಿಕ, ಸಾಮಾಜಿಕ ಶಕ್ತಿ ಬರಬೇಕು ಎಂದು 30 ಸಾವಿರ ಕೋಟಿ ರೂ. ಗಳಿಗೂ ಹೆಚ್ಚು ಹಣವನ್ನು ವೆಚ್ಚ ಮಾಡುತ್ತಿದೆ. ಗ್ಯಾರಂಟಿಗಳಿಗೆ 56 ಸಾವಿರ ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುತ್ತಿದೆ ಎಂದರು.

# ಸಾಗುವಳಿ ಚೀಟಿ, ಪಹಣಿ, ಪೋಡಿ ದಾಖಲೆ ಡಿಜಿಟಲೀಕರಣ ಚಾಮರಾಜನಗರ ಜಿಲ್ಲೆ ಉತ್ತಮ ಹೆಜ್ಜೆ



ಚಾಮರಾಜನಗರ: ನೂತನ ತಂತ್ರಜ್ಞಾನದಡಿ ಸಾಗುವಳಿ ಚೀಟಿ, ಪಹಣಿ ಪತ್ರ, ಪೋಡಿ ದಾಖಲೆ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಅನುಷ್ಠಾನದಲ್ಲಿ ಚಾಮರಾಜನಗರ ಜಿಲ್ಲೆ ಉತ್ತಮ ಹೆಜ್ಜೆ ಇಟ್ಟಿದೆ ಎಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಗುಂಡ್ಲುಪೇಟೆಯ ಶಿಕ್ಷಕರ ಭವನದಲ್ಲಿಂದು ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬಗರ್ ಹುಕುಂ ಸಾಗುವಳಿ ಚೀಟಿ, ಪಹಣಿ ಪತ್ರಿಕೆ, ಪೋಡಿ ದಾಖಲೆ ಹಾಗೂ ಕಂದಾಯ ಗ್ರಾಮಗಳ ಹಕ್ಕುಪತ್ರ ವಿತರಣಾ ಕಾರ್ಯಕ್ರಮದಲ್ಲಿ ಈಗಾಗಲೇ ಡಿಜಿಟಲೀಕರಣಗೊಳಿಸಿರುವ ಸಾಗುವಳಿ ಚೀಟಿ, ಹಾಗೂ ಇತರೆ ದಾಖಲೆಗಳನ್ನು ರೈತರಿಗೆ ವಿತರಿಸಿ ಅವರು ಮಾತನಾಡಿದರು. ಉಳುವವನೇ ಭೂಮಿ ಒಡೆಯ, ಭೂ ಸುಧಾರಣೆ ಯೋಜನೆ ಸೇರಿದಂತೆ ಹಲವು ವಿಷಯಗಳಡಿ 30–40 ವರ್ಷಗಳ ಹಿಂದೆ ಹಲವರಿಗೆ ಭೂಮಿ ಮಂಜೂರಾಗಿದೆ. ಇಂತಹ ಜಮೀನುಗಳು ಇದುವರೆಗೂ ದುರಸ್ತಿಯಾಗಿಲ್ಲ. ರೈತರು ಸಾಗುವಳಿ ಮಾಡುತ್ತಿದ್ದರೂ ಜಮೀನು ಸರ್ಕಾರಿ ಹೆಸರಿನಲ್ಲಿರುತ್ತದೆ. ಜಮೀನಿನ ಮೇಲೆ ಸಂಪೂರ್ಣ ಹಕ್ಕು, ಮಾಲೀಕತ್ವ ರೈತರಿಗೆ ಇಲ್ಲವಾಗಿದೆ. ಜಮೀನು ದುರಸ್ತಿಯಾಗದಿದ್ದರೆ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಕಾನೂನುಬದ್ಧವಾಗಿ ದಾಖಲೆಗಳ ಡಿಜಿಟಲೀಕರಣ ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು. ದುರಸ್ತಿ ಸಂಬಂಧ ರೈತರು ಅವಶ್ಯ ದಾಖಲೆಗಳನ್ನು ಒದಗಿಸುವುದು ಸಾಧ್ಯವಾಗದಿರಬಹುದು. ಇದನ್ನು ಮನಗಂಡಿರುವ ಸಿದ್ದರಾಮಯ್ಯ ನೇತೃತ್ವದ ರಾಜ್ಯಸರ್ಕಾರ ಸಾಗುವಳಿ ಚೀಟಿ, ಪಹಣಿ ಪತ್ರಿಕೆ, ಪೋಡಿ ದಾಖಲೆ ಹಾಗೂ ಕಂದಾಯ ಗ್ರಾಮಗಳ ಹಕ್ಕುಪತ್ರಗಳನ್ನು ನೂತನ ತಂತ್ರಜ್ಞಾನದಡಿ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸುವ ಮಹತ್ತರ ಕಾರ್ಯವನ್ನು ರಾಜ್ಯಾದ್ಯಂತ ಆರಂಭಿಸಿದೆ. ಎಲ್ಲಾ ಕಾನೂನುಗಳನ್ನು ಸುಲಭೀಕರಣಗೊಳಿಸಿ ಒಂದೇ ಸುತ್ತೋಲೆಯಲ್ಲಿ ಅಳವಡಿಸಲಾಗಿದೆ. ಇಂತಹ ಜನಪರ ಕೆಲಸಗಳಿಂದ ಜನರಿಗೆ ಸರ್ಕಾರದ ಬಗ್ಗೆ ಉತ್ತಮ ಅಭಿಪ್ರಾಯ ಮೂಡಲಿದೆ ಎಂದರು.

ಹಿಂದೆ ಸಾಗುವಳಿ ಮಾಡದಿರುವವರು, ಇತರರು ಬಗರ್‌ಹುಕುಂ ಅಡಿಯಲ್ಲಿ ಜಮೀನು ಸಕ್ರಮಗೊಳಿಸಲು ಅರ್ಜಿ ಸಲ್ಲಿಸಿರುವುದು ಕಂಡುಬಂದಿದೆ. ಇದಕ್ಕಾಗಿ ಸರ್ಕಾರ ನೂತನ ತಂತ್ರಜ್ಞಾನವನ್ನು ಸಿದ್ದಪಡಿಸಿದ್ದು, ಈಗ ಇದಕ್ಕೆಲ್ಲಾ ಅವಕಾಶವಿಲ್ಲದಂತಾಗಿದೆ. ಎಲ್ಲವೂ ಆನ್‌ಲೈನ್‌ನಲ್ಲಿ ನಮೂದಾಗುವುದರಿಂದ ದಾಖಲೆಗಳು ಕಳೆದುಹೋಗುವ ಸಂಭವವಿರದೇ ಶಾಶ್ವತವಾಗಿ ಸಾಕಷ್ಟು ವರ್ಷಗಳವರೆಗೆ ಇರಲಿದೆ. ಅಲ್ಲದೆ ಯಾವುದೇ ನಕಲಿ ದಾಖಲೆಗೆ, ಪೋರ್ಜರಿಗೆ, ತಿದ್ದುಪಡಿಗೆ ಅವಕಾಶವಿಲ್ಲದಂತಾಗಿದೆ. ಇದರಿಂದ ರೈತರು ನೆಮ್ಮದಿ ಜೀವನ ನಡೆಸುವಂತಾಗಲಿದೆ ಎಂದು ಸಚಿವರು ಹೇಳಿದರು. ಪ್ರಸ್ತುತ ಬಗರ್‌ಹುಕುಂ ಅಡಿ ಜಮೀನು ಸಕ್ರಮಗೊಳಿಸಲು ರಾಜ್ಯಾದ್ಯಂತ 1 ಲಕ್ಷದ 58 ಸಾವಿರ ಅರ್ಜಿಗಳು ಬಂದಿವೆ. ಸಕ್ರಮಿಕರಣಗೊಳಿಸಲು ಯಾರು ಅರ್ಜಿ ಹಾಕಿದ್ದಾರೋ ಅವರಿಗೆ ಅವಶ್ಯ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅರ್ಹರಿಗೆ ನಿಯಾಮಾನುಸಾರ ಮಂಜೂರು ಮಾಡಲಾಗುತ್ತದೆ. ಕೆಲವೆಡೆ ಗ್ರಾಮ, ತಾಂಡಾ, ಕ್ಯಾಂಪ್‌ಗಳಿದ್ದು, 50–100 ವರ್ಷಗಳಿಂದ ಕಂದಾಯ ಗ್ರಾಮಗಳಾಗಿ ಘೋಷಣೆಯಾಗಿರುವುದಿಲ್ಲ. ಇದರಿಂದ ಜನವಸತಿ ಸೌಲಭ್ಯಗಳನ್ನು ಒದಗಿಸಲು ತೊಂದರೆಯಾಗುತ್ತಿದೆ. ಇದನ್ನು ಪರಿಹರಿಸಲು ಸರ್ಕಾರ ಮುಂದಾಗಿದ್ದು, ಜಮೀನಿನ ನಕ್ಷೆ, ಆಕಾರ್ ಬಂದ್, ಹೊಸ ಸರ್ವೆ ನಂಬರ್ ಹಾಗೂ ಪ್ರತ್ಯೇಕ ಆರ್.ಟಿ.ಸಿ ಯೊಂದಿಗೆ ಸಾಗುವಳಿ ಚೀಟಿಯನ್ನು ಸರ್ಕಾರದ ವತಿಯಿಂದಲೇ ನೊಂದಣಿ ಮಾಡಿಸಿ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸಲಾಗುತ್ತಿದೆ ಎಂದರು.


ಜಿಲ್ಲೆಯಲ್ಲಿ 68 ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಗುರುತಿಸಲಾಗಿದ್ದು, ಡಿಜಿಟಲೀಕರಣಗೊಂಡಿರುವ ಕಂದಾಯ ಗ್ರಾಮಗಳ 10 ಹಕ್ಕುಪತ್ರಗಳನ್ನು ಸಾಂಕೇತಿಕವಾಗಿ ಇಂದು ವಿತರಿಸಲಾಗುತ್ತಿದೆ. ಮುಂದಿನ 4 ತಿಂಗಳೊಳಗೆ ಎಲ್ಲಾ ಅರ್ಜಿಗಳನ್ನು ವಿಲೇವಾರಿ ಮಾಡಿ ಅರ್ಹ ರೈತರೆಲ್ಲರಿಗೂ ಸಾಗುವಳಿ ಚೀಟಿ ವಿತರಿಸುವ ಕಾರ್ಯ ಪೂರ್ಣಗೊಳಿಸುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ. ಡಿಜಿಟಲೀಕರಣ ಪ್ರಕ್ರಿಯೆಯ ಯಶಸ್ವಿಗೆ ಗುಂಡ್ಲುಪೇಟೆ ಶಾಸಕರಾದ ಎಚ್. ಎಂ. ಗಣೇಶ್ ಪ್ರಸಾದ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ತಹಶೀಲ್ದಾರ್ ರಮೇಶ್ ಬಾಬು ಅವರ ಸತತ ಪರಿಶ್ರಮದಿಂದ ಇಂದು ಸಾಗುವಳಿ, ಪಹಣಿ, ಪೋಡಿ ದಾಖಲೆಗಳ ವಿತರಣೆ ಗುಂಡ್ಲುಪೇಟೆಯಲ್ಲಿ ಸಾಧ್ಯವಾಗಿದೆ ಎಂದು ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಹಿಂದೆ ತಮ್ಮ ತಂದೆ ಬಿ. ರಾಚಯ್ಯ ಅವರು ಸಚಿವರಾಗಿದ್ದ ಅವಧಿಯಲ್ಲಿ ಬಡವರಿಗೆ ಅರಣ್ಯ ಜಾಗವನ್ನು ಕಂದಾಯ ಭೂಮಿಯಾಗಿ ಪರಿವರ್ತಿಸಿ ಸಾಗುವಳಿ ಚೀಟಿ ನೀಡಿದ್ದರು. ಅವು ಇನ್ನೂ ದುರಸ್ತಿಯಾಗಿಲ್ಲ. ಕಾನೂನಿನಡಿ ಈ ಸಮಸ್ಯೆಯನ್ನು ಪರಿಹರಿಸಬೇಕು ಎಂದು ಮನವಿ ಮಾಡಿದರು. ಈ ಸಂಬಂಧ ಪ್ರತಿಕ್ರಿಯಿಸಿದ ಸಚಿವರು ಈ ಪ್ರಕರಣದಲ್ಲಿ ಮರುಸಮೀಕ್ಷೆ ನಡೆದಿದ್ದು, ಅರಣ್ಯ ಇಲಾಖೆಯೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಸಮಸ್ಯೆ ಪರಿಹರಿಸಲಾಗುವುದು ಎಂದರು.

ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್ ಅಧ್ಯಕ್ಷತೆ ವಹಿಸಿ ಮಾತನಾಡಿ ಸಾಗುವಳಿ ಚೀಟಿ ಸಮಸ್ಯೆ ಪ್ರತಿ ಸಭೆಯಲ್ಲಿಯೂ ಪ್ರತಿಧ್ವನಿಸುತ್ತಿದೆ. ಕಾನೂನುಗಳು ಬಿಗಿಯಾಗಿರುವುದರಿಂದ ಅರಣ್ಯಭೂಮಿಗೆ ಸಾಗುವಳಿ ಚೀಟಿ ನೀಡುವುದು ಕಷ್ಟಸಾಧ್ಯವಾಗಿದೆ. ಅರಣ್ಯ ಇಲಾಖೆ ನಮ್ಮ ಭೂಮಿ ಕಿತ್ತುಕೊಳ್ಳಲಿದೆ ಎಂಬ ಭಯ ಜನರಲ್ಲಿದೆ. ಇದನ್ನು ಹೋಗಲಾಡಿಸಲು ಶಾಶ್ವತ ಪರಿಹಾರ ಕಂಡುಹಿಡಿಯಬೇಕಾಗಿದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಜಿಲ್ಲೆಯಲ್ಲಿ 5 ತಾಲೂಕುಗಳು, 16 ಹೋಬಳಿಗಳಿವೆ. 6,60,696 ಭೂ ಮಾಲೀಕರಿದ್ದಾರೆ. 4,11,580 ಆರ್.ಟಿ.ಸಿ ಗಳಿವೆ. 5,75,745 ಆರ್.ಟಿ.ಸಿ ಗಳು ಆಶಧಾರ್ ಸೀಡಿಂಗ್ ಆಗಿದ್ದು, ಶೇ. 82.81ರಷ್ಟು ಪ್ರಗತಿ ಸಾಧಿಸಲಾಗಿದೆ. 4 ಬಗರ್‌ಹುಕುಂ ಸಮಿತಿ ರಚನೆಯಾಗಿವೆ. 3239 ದರಖಾಸ್ತು ಭೂಮಿ ಪೋಡಿಯಾಗಿದ್ದು, ಮೂರು ತಿಂಗಳೊಳಗೆ ಸಾಗುವಳಿ ಪತ್ರ ವಿತರಿಸಲಾಗುವುದು. ಭೂ ಸುರಕ್ಷಾ ಯೋಜನೆಯಡಿ ಎಲ್ಲಾ ದಾಖಲಾತಿಗಳು ಡಿಜಿಟಲೀಕರಣಗೊಂಡಿದ್ದು, ಯಳಂದೂರು ತಾಲೂಕನ್ನು ಪೈಲಟ್ ಯೋಜನೆಯಾಗಿ ತೆಗೆದುಕೊಂಡಿದ್ದು 18,71,799 ಪುಟಗಳನ್ನು ಡಿಜಿಟಲೀಕರಣ ಆಗಿದೆ. ಎ.ಸಿ. ಹಾಗೂ ಡಿಸಿ ಕೋರ್ಟ್‌ನಲ್ಲಿ 90 ದಿನದೊಳಗೆ ಇತ್ಯರ್ಥಪಡಿಸುವ ಬಾಕಿ ಪ್ರಕರಣಗಳು ಕಡಿಮೆ ಇವೆ. ಕಂದಾಯ ಇಲಾಖೆಯ ಎಲ್ಲಾ ಅಧೀನ ಕಚೇರಿಗಳು ಇ–ಆಫೀಸ್ ಆಗಿದ್ದು, ಇ–ಆಫೀಸ್ ಪ್ರಕ್ರಿಯೆಯಲ್ಲಿ ಜಿಲ್ಲೆ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಪುರಸಭಾ ಅಧ್ಯಕ್ಷರಾದ ಜಿ.ಎಸ್. ಕಿರಣ್, ಉಪಾಧ್ಯಕ್ಷರಾದ ಹೀನಾ ಕೌಸರ್, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಎಲ್ಲಾ ತಾಲೂಕುಗಳ ತಹಶೀಲ್ದಾರರು, ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಪುನೀತ್ ಹುಟ್ಟೋ ಮೊದಲೇ ಹೇಳಿದ್ರಂತೆ



ಕನ್ನಡದ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರು ಮಾಡಿರುವ ಸಾಧನೆ ಬಗ್ಗೆ ಹೊಸದಾಗಿ ಏನೂ ಹೇಳಬೇಕಿಲ್ಲ. ಆ ಬಗ್ಗೆ ಗೊತ್ತಿರುವವರಿಗೆ ಗೊತ್ತು, ಗೊತ್ತಿಲ್ಲದವರಿಗೂ ಏನು ಹೇಳೋದು? ಆದ್ರೆ, ತಮ್ಮ 47ನೇ ವಯಸ್ಸಿಗೇ ಇಹಲೋಕ ತ್ಯಜಿಸಿದ ನಟ ಪುನೀತ್ ಬಗ್ಗೆ ಹತ್ತು ಹಲವು ಸಂಗತಿಗಳು ಈಗ ಸೋಷಿಯಲ್ ಮೀಡಿಯಾ ಹಾಗೂ ಯೂಟ್ಯೂಬ್ ಚಾನಲ್‌ಗಳ ಮೂಲಕ ಬಹಿರಂಗ ಆಗ್ತಿವೆ. ಇದೀಗ, ಹಿರಿಯ ನಟಿ ಬಿ ಸರೋಜಾದೇವಿ ಅವರು ಪಾರ್ವತಮ್ಮನವರಿಗೆ ಪವರ್ ಸ್ಟಾರ್ ಹುಟ್ಟೋ ಬಗ್ಗೆ ಮೊದಲೇ ಹೇಳಿದ್ದರು ಎಂಬ ಮಾತು ಬಹಿರಂಗವಾಗಿದೆ.

ಹಾಗಿದ್ದರೆ ವಿಷಯವೇನು? ಹೌದು, ಡಾ ರಾಜ್‌ಕುಮಾರ್ ಹಾಗೂ ಪಾರ್ವತಮ್ಮ ದಂಪತಿಗಳಿಗೆ ಎರಡು ಹೆಣ್ಣು ಹಾಗು 3 ಗಂಡು ಮಕ್ಕಳು ಎಂಬುದು ಎಲ್ಲರಿಗೂ ಗೊತ್ತು. ಅದರಲ್ಲಿ ಪಾರ್ವತಮ್ಮನವರು ಮೂರನೇ ಗಂಡು ಮಗುವಿಗೆ ಬಸುರಿ ಆಗಿದ್ದರು ಆಗ. ಅಂದರೆ, ಪುನೀತ್ ರಾಜ್‌ಕುಮಾರ್ ಹುಟ್ಟುವ ಸಮಯದ ಕಥೆ ಇದು. ಬಸುರಿ ಪಾರ್ವತಮ್ಮನವರು ಅಂದು ಸಿನಿಮಾ ಶೂಟಿಂಗ್ ಸೆಟ್‌ಗೆ ಬಂದಿದ್ದರಂತೆ. ಸೀದಾಸಾದಾ ಬಂದಿರುವುದಲ್ಲ, ಆ ವೇಳೆ ಭಾರವನ್ನು ಹೊತ್ತು ತಂದು ಸುಸ್ತಾಗಿದ್ದರಂತೆ.

ಡಾ ರಾಜ್‌ಕುಮಾರ್ ಅವರ ಯಾವುದೋ ಒಂದು ಚಿತ್ರದ ಶೂಟಿಂಗ್ ಸೆಟ್‌ಗೆ ನಿರ್ಮಾಪಕಿಯಾಗಿ ಬಂದಿದ್ದಾರೆ ಪಾರ್ವತಮ್ಮ. ಆದರೆ, ಬರುವಾಗ ಅವರು ಶೂಟಿಂಗ್ ಸೆಟ್‌ನಲ್ಲಿ ಇರೋರಿಗೆ ಊಟ ಹೊತ್ತು ತಂದಿದ್ದರು. ಅದೂ ಕೂಡ ಅಲ್ಪಸ್ವಲ್ಪವಲ್ಲ, ಜಾಸ್ತಿನೇ ಭಾರ ಹೊತ್ತು ತಂದಿದ್ದರು. ತಂದಿಟ್ಟವರೇ ಸುಸ್ತಾಗಿ ಒಂದು ಕಡೆ ಕುಳಿತುಬಿಟ್ಟರಂತೆ. ಆ ವೇಳೆ ಅಲ್ಲಿದ್ದ ಹಿರಿಯ ನಟಿ ಸರೋಜಾದೇವಿಯವರು ಅದನ್ನು ಗಮನಿಸಿದರಂತೆ. ಆಗ ಪಾರ್ವತಮ್ಮನವರು 'ನಾನು ಗರ್ಭಿಣಿ ಆಗಿರುವೆ. ಅದಕ್ಕೇ ಸುಸ್ತಾಗಿದೆ' ಎಂದರಂತೆ.

ಆ ಮಾತು ಕೇಳಿದ ನಟಿ ಸರೋಜಾದೇವಿಯವರು 'ಹೌದಾ ಅಮ್ಮಾ? ಈ ಪರಿಸ್ಥಿತಿಯಲ್ಲೂ ನೀವು ಇಷ್ಟೊಂದು ಕಷ್ಟಪಟ್ಟು ಊಟ ತಂದಿದ್ದೀರ. ನಿಮಗೆ ದೊಡ್ಡ ಸ್ಟಾರ್ ಆಗುವಂಥ ಸಂತಾನವೇ ಆಗುತ್ತೆ ನೋಡಿ..' ಎಂದಿದ್ದಾರೆ. ಅದರಂತೆ ಹುಟ್ಟಿದವರು ಪುನೀತ್ ರಾಜ್‌ಕುಮಾರ್. ಬಾಲನಟರಾಗಿಯೇ ಬಣ್ಣಹಚ್ಚಿದ್ದ ಪುನೀತ್ ಅದೆಷ್ಟು ಬೆಳೆದರು, ಕನ್ನಡದ ಸ್ಟಾರ್ ನಟರಾಗಿ ಮೆರೆದರು ಎಂಬುದು ಈಗ ಇತಿಹಾಸ. ಆದರೆ, ಅಂದೇ ಆ ಬಗ್ಗೆ ಭವಿಷ್ಯ ನುಡಿದಿದ್ದರು ಬಿ ಸರೋಜಾದೇವಿ. ಅವರ ಬಾಯಿಂದ ಮಾತು ನಿಜವಾಗಿದೆ.

'ವಜ್ರೇಶ್ವರಿ ಕಂಬೈನ್ಸ್' ಎಂಬ ನಿರ್ಮಾಣ ಸಂಸ್ಥೆಯನ್ನು ಹುಟ್ಟುಹಾಕಿ, 80ಕ್ಕೂ ಹೆಚ್ಚು ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ ಪಾರ್ವತಮ್ಮ ರಾಜ್‌ಕುಮಾರ್. ಡಾ ರಾಜ್‌ಕುಮಾರ್ ಸೇರಿದಂತೆ, ಅವರ ಮಕ್ಕಳಾದ ಶಿವರಾಜ್‌ಕುಮಾರ್, ರಾಘವೇಂದ್ರ ರಾಜ್‌ಕುಮಾರ್ ಹಾಗೂ ಪುನೀತ್ ರಾಜ್‌ಕುಮಾರ್ ಸಿನಿಮಾಗಳನ್ನು ನಿರ್ಮಿಸಿದ್ದಾರೆ. ಹಲವು ನಟನಟಿಯರು, ತಂತ್ರಜ್ಞರು ಪಾರ್ವತಮ್ಮ ನಿರ್ಮಾಣದ ಸಿನಿಮಾಗಳ ಮೂಲಕ ಕನ್ನಡ ಚಿತ್ರರಂಗ ಪ್ರವೇಶಿಸಿದ್ದಾರೆ. ಹತ್ತು ಹಲವು ದಾಖಲೆಗಳು ಪಾರ್ವತಮ್ಮ ರಾಜ್‌ಕುಮಾರ್ ನಿರ್ಮಿಸಿರುವ ಸಿನಿಮಾಗಳಿಂದ ಕನ್ನಡ ಸಿನಿಉದ್ಯಮದಲ್ಲಿ ಮೂಡಿ ಬಂದಿವೆ.

## ಟೀಂ ಇಂಡಿಯಾಗೆ ಮತ್ತೊಂದು ಬಿಗ್ ಶಾಕ್!

**ಅಡಿಲೇಡ್:** ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಬಾರ್ಡರ್–ಗವಾಸ್ಕರ್ ಟೆಸ್ಟ್ ಸರಣಿಯ ಎರಡನೇ ಪಂದ್ಯದಲ್ಲಿ ಟೀಂ ಇಂಡಿಯಾ 10 ವಿಕೆಟ್ ಅಂತರದ ಹೀನಾಯ ಸೋಲು ಅನುಭವಿಸಿದೆ. ಅಡಿಲೇಡ್ ಓವಲ್ ಮೈದಾನದಲ್ಲಿ ನಡೆದ ಪಿಂಕ್ ಬಾಲ್ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾ ಆಘಾತಕಾರಿ ಸೋಲು ಅನುಭವಿಸಿದೆ. ಈ ಸೋಲಿನ ಶಾಕ್‌ನಿಂದ ಹೊರಬರುವ ಮುನ್ನವೇ ಟೀಂ ಇಂಡಿಯಾಗೆ ಮತ್ತೊಂದು ದೊಡ್ಡ ಶಾಕ್ ಎದುರಾಗಿದೆ.



ಹೌದು, ಟೀಂ ಇಂಡಿಯಾ ಹಿರಿಯ ವೇಗಿ ಮೊಹಮದ್ ಶಮಿ ಬಾರ್ಡರ್–ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಪಾಲ್ಗೊಳ್ಳಲು ಆಸ್ಟ್ರೇಲಿಯಾಗೆ ತೆರಳುವುದು ಮತ್ತಷ್ಟು ಅನುಮಾನವೆನಿಸಿದೆ. ಫಿಟ್ನೆಸ್ ಸಾಬೀತಿಗಾಗಿ ಮುಷ್ತಾಕ್ ಅಲಿ ಟಿ20 ಟೂರ್ನಿಯಲ್ಲಿ ಆಡುತ್ತಿರುವ ಶಮಿ ಅವರ ಮಂಡಿ ಗಾಯ ಉಲ್ಬಣಿಸಿದೆ ಎಂದು ನಾಯಕ ರೋಹಿತ್ ಶರ್ಮಾ ತಿಳಿಸಿದ್ದಾರೆ.

ಮುಷ್ತಾಕ್ ಅಲಿ ಟಿ20ಯಲ್ಲಿ ಆಡುತ್ತಿರುವ ಶಮಿ ಅವರ ಮಂಡಿಯಲ್ಲಿ ಊತ ಕಾಣಿಸಿಕೊಂಡಿದ್ದು, ಬಿಸಿಸಿಐ ವೈದ್ಯಕೀಯ ತಂಡ ತೀವ್ರ ನಿಗಾ ವಹಿಸುತ್ತಿದೆ. ಅವರ ವಿಚಾರದಲ್ಲಿ ನಾವು ಎಚ್ಚರಿಕೆಯಿಂದ ನಿರ್ಧಾರ ಕೈಗೊಳ್ಳಲಿದ್ದೇವೆ' ಎಂದರು.

## 'ಗರ್ಲ್ ಫ್ರೆಂಡ್' ಪರಿಚಯಿಸಿದ ವಿಜಯ್ ದೇವರಕೊಂಡ



ಟಾಲಿವುಡ್ ರೌಡಿಭಾಯ್ ವಿಜಯ್ ದೇವರಕೊಂಡ 'ದಿ ಗರ್ಲ್ ಫ್ರೆಂಡ್' ಟೀಸರ್ ಅನ್ನು ಪರಿಚಯಿಸಿದ್ದಾರೆ. ಟೀಸರ್ ಗೆ ಧ್ವನಿಯಾಗಿ, ದಿ ಗರ್ಲ್ ಫ್ರೆಂಡ್ ಹಾಗೂ ರಶ್ಮಿಕಾ ಬಗ್ಗೆ ಮನದ ಮಾತು ಹಂಚಿಕೊಂಡಿದ್ದಾರೆ. 'ದಿ ಗರ್ಲ್ ಫ್ರೆಂಡ್' ಟೀಸರ್ ಲ್ಲಿ ಪ್ರತಿ ದೃಶ್ಯವೂ ಆಕರ್ಷಕವಾಗಿದೆ. ನಾನು ಈ ಸಿನಿಮಾವನ್ನು ವೀಕ್ಷಿಸಲು ಕಾತರರಾಗಿದ್ದೇನೆ. 8 ವರ್ಷಗಳ ಹಿಂದೆ ರಶ್ಮಿಕಾ ಅವರನ್ನು 'ಸೆಟ್'ನಲ್ಲಿ ಭೇಟಿಯಾಗಿದ್ದೆ. ಆ ನಂತರ ಅವರು ಸಾಕಷ್ಟು ಸಕ್ಸಸ್ ನೋಡಿದ್ದಾರೆ. ಆದರೂ ಅವರು ವಿನಮ್ರವಾಗಿದ್ದಾರೆ.

ರಾಹುಲ್, ಸುಂದರ ಪ್ರೇಮ ಕಥೆಯೊಂದಿಗೆ ಪ್ರೇಕ್ಷಕರ ಹೃದಯ ಸ್ಪರ್ಶಿಸಲಿದ್ದಾರೆ ಎಂದು ಭಾವಿಸಿದ್ದೇನೆ. ಇಡೀ ದಿ ಗರ್ಲ್ ಫ್ರೆಂಡ್ ತಂಡಕ್ಕೆ ಒಳ್ಳೆಯದಾಗಲಿ' ಎಂದಿದ್ದಾರೆ. 'ದಿ ಗರ್ಲ್ ಫ್ರೆಂಡ್' ನಿನಿಮಾವನ್ನು ರಾಹುಲ್ ರವೀಂದ್ರನ್ ಅವರು ನಿರ್ದೇಶನ ಮಾಡುತ್ತಿದ್ದಾರೆ. ರಶ್ಮಿಕಾ ಮಂದಣ್ಣ ಹಾಗೂ ದೀಕ್ಷಿತ್ ಶೆಟ್ಟಿ ಮುಖ್ಯಭೂಮಿಕೆಯಲ್ಲಿ ನಟಿಸಿದ್ದಾರೆ. ರಾವ್ ರಮೇಶ್, ರೋಹಿಣಿ ಸೇರಿದಂತೆ ಮತ್ತಿತರ ಕಲಾವಿದರು ಸಿನಿಮಾದಲ್ಲಿದ್ದಾರೆ. ಪ್ರೇಮಕಥೆ ಜೊತೆಗೆ ಭಾವಾನಾತ್ಮಕ ಅಂಶಗಳನ್ನು ಸೇರಿಸಿ ದಿ ಗರ್ಲ್ ಫ್ರೆಂಡ್ ಟೀಸರ್ ಕಟ್ ಮಾಡಲಾಗಿದೆ.

ಖ್ಯಾತ ನಿರ್ಮಾಪಕ ಅಲ್ಲು ಅರವಿಂದ್ ಚಿತ್ರವನ್ನು ಪ್ರಸ್ತುಪಡಿಸುತ್ತಿದ್ದು, ಗೀತಾ ಆರ್ಟ್ಸ್, ಮಾಸ್ ಮೂವಿ ಮೇಕರ್ಸ್ ಮತ್ತು ಧೀರಜ್ ಮೊಗಿಲಿನೇನಿ ಎಂಟರ್‌ಟೈನ್‌ಮೆಂಟ್ ಬ್ಯಾನರ್ ನಡಿಯಲ್ಲಿ ಧೀರಜ್ ಮೊಗಿಲಿನೇನಿ ಮತ್ತು ವಿದ್ಯಾ ಕೊಪ್ಪಿನೀಡಿ ನಿರ್ಮಿಸಿದ್ದಾರೆ. ಹೇಶಾಮ್ ಅಬ್ದುಲ್ ವಹಾಬ್ ಅವರು ಸಿನಿಮಾಕ್ಕೆ ಸಂಗೀತ ಸಂಯೋಜನೆ ಮಾಡಿದ್ದಾರೆ.

ಪುಷ್ಪ–2 ಸಿನಿಮಾ ನೋಡಿದವರೆಲ್ಲಾ ರಶ್ಮಿಕಾ ಪರ್ಫಾರ್ಮೆನ್ಸ್‌ನ ಕೊಂಡಾಡ್ತಾ ಇದ್ದಾರೆ. ಗ್ಲಾಮರ್ ಗಮ್ಮತ್ತಿನ ಜೊತೆಗೆ ಅಭಿನಯದಲ್ಲೂ ಮೋಡಿ ಮಾಡಿರೋ ಶ್ರೀವಲ್ಲಿಗೆ ಶಹಬ್ಬಾಷ್ ಅಂತಿದ್ದಾರೆ. ಈ ನಡುವೆ ರಶ್ಮಿಕಾ ದೇವರಕೊಂಡ ಫ್ಯಾಮಿಲಿಯನ್ನ ಕರೆದುಕೊಂಡು ಹೋಗಿ ಸಿನಿಮಾ ತೋರಿಸಿದ್ದಾರೆ. ಪುಷ್ಪನ ಜೊತೆ ರಶ್ಮಿಕಾ ಹಸಿ ಬಿಸಿ ಸೀನ್ಸ್ ನೋಡಿ ದೇವರಕೊಂಡ ಫ್ಯಾಮಿಲಿ ಏನಂದ್ರು..? ಆ ಕುರಿತ ಮಸ್ತ್ ಮಸಾಲ ಸ್ಟೋರಿ ಇಲ್ಲಿದೆ ನೋಡಿ.

ಹೌದು, ಈಗ ಎಲ್ಲಿ ನೋಡಿದ್ರೂ ಪುಷ್ಪನದ್ದೇ ಜಪ. ಗುರುವಾರ ತೆರೆಗೆ ಬಂದ ಪುಷ್ಪ–2 ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಅಕ್ಷರಶಃ ವೈಲ್ಡ್ ಫೈರ್‌ನಂತೆ ಧಗಧಗಿಸಿದೆ. ಎರಡೇ ದಿನಕ್ಕೆ 400 ಕೋಟಿ ಕ್ಲಬ್ ಸೇರಿ ಸಿನಿಇಂಡಸ್ಟ್ರಿಯ ಹಳೆಯ ದಾಖಲೆಗಳನ್ನೆಲ್ಲಾ ಧೂಳಿಪಟ ಮಾಡಿದೆ. ಇದೀಗ ನಾಲ್ಕನೇ ದಿನಕ್ಕೆ ಬರೋಬ್ಬರಿ 700 ಕೋಟಿಗೂ ಮೀರಿ ಗಳಿಕೆ ದಾಖಲಿಸಿ ಎಲ್ಲರ ನಿರೀಕ್ಷೆ ಮೀರಿ ಮುನ್ನುಗ್ಗುತ್ತಿದೆ.

ಪುಷ್ಪ–2ನಲ್ಲಿ ಪುಷ್ಪರಾಜ್ ಅಲ್ಲು ಅರ್ಜುನ್ ಪರ್ಫಾರ್ಮೆನ್ಸ್ ಬಗ್ಗೆ ಎಷ್ಟು ಮೆಚ್ಚುಗೆ ಕೇಳಿ ಬರ್ತಾ ಇದೆಯೋ ಶ್ರೀವಲ್ಲಿ ರಶ್ಮಿಕಾ ನಟನೆಗೂ ಅಷ್ಟೇ ಮೆಚ್ಚುಗೆ ಸಿಕ್ತಾ ಇದೆ. ಪುಷ್ಪನ ಮುದ್ದು ಮಡದಿಯಾಗಿ ಮಿಂಚಿರೋ ರಶ್ಮಿಕಾ ಒಂದು ದೃಶ್ಯದಲ್ಲಿ ಎಲ್ಲರನ್ನೂ ಸೈಡ್‌ಗೆ ಸರಿಸುವಂತೆ ಪರ್ಫಾರ್ಮ್ ಮಾಡಿದ್ದಾರೆ.

ತನ್ನ ಪಾತ್ರಕ್ಕೆ ಸಿಕ್ತಾ ಇರೋ ಪ್ರಶಂಸೆಯಿಂದ ರಶ್ಮಿಕಾ ಫುಲ್ ಖುಷ್ ಆಗಿದ್ದಾರೆ. ತನ್ನ ಅಕೌಂಟ್‌ಗೆ ಮತ್ತೊಂದು ಹಿಟ್ ಸೇರಿಸಿಕೊಂಡಿರೋ ಈ ಬ್ಯೂಟಿ ಮತ್ತಷ್ಟು ಸಂಭಾವನೆ ಹೆಚ್ಚಿಸೋ ಲೆಕ್ಕಾಚಾರಲ್ಲಿದ್ದಾರೆ.



## ನಟಿ ಶೃತಿ ಹರಿಹರನ್ ಫೋಟೋಗೆ ಮಹಿಳೆಯ ಅಸಭ್ಯ ಕಮೆಂಟ್, ಧ್ವನಿ ಎತ್ತಿದ್ದ ತಕ್ಷಣ ಅಕೌಂಟ್ ಡಿಲೀಟ್!

ನಟಿ ಶೃತಿ ಹರಿಹರನ್ ಅವರ ವರ್ಕೌಟ್ ಫೋಟೋಗೆ ಅಸಭ್ಯ ಕಾಮೆಂಟ್ ಮಾಡಿದ ಮಹಿಳೆ ತನ್ನ ಅಕೌಂಟ್ ಅನ್ನು ಡಿಲೀಟ್ ಮಾಡಿದ್ದಾರೆ. ಈ ಘಟನೆಯ ಬಗ್ಗೆ ಶೃತಿ ಹರಿಹರನ್ ಅವರು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದಾರೆ.

ನಟಿ ಶೃತಿ ಹರಿಹರನ್ ವರ್ಕೌಟ್ ಫೋಟೋ ಹಂಚಿಕೊಂಡು ಪೋಸ್ಟ್ ಮಾಡಿದ್ದರು. ಆದರೆ ಮಹಿಳೆಯೊಬ್ಬರು ಅವರ ಫೋಟೋಗೆ ಕಮೆಂಟ್ ಮಾಡಿದ್ದು, ಇದು ನಟಿಯ ಕೋಪಕ್ಕೆ ಕಾರಣವಾಗಿತ್ತು. ಮಹಿಳೆಯ ಕಮೆಂಟ್ ಅನ್ನು ವಿರೋಧಿಸಿ ನಟಿ ಪೋಸ್ಟ್ ಹಾಕಿದ್ದರು. ನಟಿಯ ಪೋಸ್ಟ್ ಗೆ ಮಹಿಳೆ ಈಗ ತನ್ನ ಅಕೌಂಟ್ ಡಿಲೀಟ್ ಮಾಡಿದ್ದಾರೆ.

ಶೃತಿ ಹರಿಹರನ್ ಅವರು ವರ್ಕೌಟ್ ಫೋಟೋ ಹಾಕಿದ್ದಕ್ಕೆ ಅಪೂರ್ವ ಗೌಡ ಎಂಬ ಹೆಸರಿನ ಅಕೌಂಟ್ ನಿಂದ 'ಮದುವೆ ಆದ ಮೇಲೆ ಮಕ್ಕಳು ಗಂಡ ನೋಡ್ಕೊಂಡು ಇರು ಯಾಕೆ ಈ ತರ ಎಕ್ಸ್‌ಪೋಸ್ ಮಾಡ್ತೀಯಾ' ಎಂದು ಕಮೆಂಟ್ ಹಾಕಲಾಗಿದೆ.

ಇದಕ್ಕೆ ಇನ್ಸ್ಟಾ ಸ್ಟೋರಿಯಲ್ಲಿ'ಈ ರೀತಿಯ ಕಾಮೆಂಟ್‌ಗಳು ಮಹಿಳೆಯಿಂದಲೇ ಬಂದಾಗ! ದೇವರೇ ಸಹಾಯ ಮಾಡು. ಆದ್ದರಿಂದ ಅಪೂರ್ವ ಗೌಡ ನೀವು ಮತ್ತು ನಾನು ನಿಜವಾಗಿಯೂ ಭೇಟಿಯಾಗಬೇಕು ಮತ್ತು ಬಹಳಷ್ಟು ವಿಷಯಗಳ ಬಗ್ಗೆ ವೈಯಕ್ತಿಕ ಸಂಭಾಷಣೆ ನಡೆಸಬೇಕು. ಏನ್ ಹೇಳ್ತೀರಾ? ಅಥವಾ ಇದು ನನ್ನ ಸಮಯ ವ್ಯರ್ಥ ಹಾಂ! ಎಂದು ಮಹಿಳೆಗೆ ಟ್ಯಾಗ್ ಮಾಡಿದ್ದರು.

ಇದಾದ ನಂತರ ಆ ಅಕೌಂಟ್ ಡಿಲೀಟ್ ಮಾಡಲಾಗಿದೆ. ಹೀಗಾಗಿ ಮತ್ತೆ ಇನ್ಸ್ಟಾ ಸ್ಟೋರಿ ಹಾಕಿದ ನಟಿ, ನಿಮ್ಮಲ್ಲಿ ಕೆಲವರು ಈ ನಾಟಕವನ್ನು ನೋಡಿದ್ದೀರಿ ಎಂದು ನಾನು ಭಾವಿಸುತ್ತೇನೆ. ನೀವು ಅವಳಿಗೆ/ ಅವನಿಗೆ ಮೆಸೇಜ್ ಮಾಡಿದ್ದೀರಿ, (ಇದು ಮಾಡೆಲ್‌ನ ಚಿತ್ರ ಮತ್ತು ವೀಡಿಯೊಗಳನ್ನು ಬಳಸಿಕೊಂಡು ಈ ಖಾತೆಯನ್ನು ನಡೆಸುತ್ತಿರುವ ವ್ಯಕ್ತಿಯೇ ಅಥವಾ ಅದು ಸ್ವತಃ ಹುಡುಗಿಯೇ ಎಂದು ನಮಗೆ ಖಚಿತವಿಲ್ಲ) ಮತ್ತು ನೀವು ನನಗೆ ಸಂದೇಶ ಕಳುಹಿಸಿದ್ದೀರಿ.

ಇದರಲ್ಲಿ ಭಾಗವಹಿಸಲು ಸತ್ಯವನ್ನು ಹೊರತೆಗೆಯಲು ಆಯ್ಕೆ ಮಾಡಿದ ನಿಮ್ಮೆಲ್ಲರಿಗೂ ಧನ್ಯವಾದ. ಹೌದು ಇದು ಒಂದು ಪ್ರಮುಖ ಸಂಭಾಷಣೆಯಾಗಿದೆ. ಪುರುಷರು ನಮ್ಮನ್ನು ಕೆಳಗಿಳಿಸುತ್ತಾರೆ. ನಾವು ಅದನ್ನು ಶಾಶ್ವತವಾಗಿ ನೋಡಿದ್ದೇವೆ ಮತ್ತು ನಾವು ಅದನ್ನು ಸಹಿಸಿಕೊಳ್ಳುತ್ತೇವೆ. ದುರದೃಷ್ಟವಶಾತ್, ಆದರೆ ಮಹಿಳೆಯರು ಮಹಿಳೆಯರನ್ನು ಕೆಳಗಿಳಿಸುತ್ತಾರೆ. ಹೆಚ್ಚಿನ ಸಮಯ ಬದಲಾಗಿದೆ!

ಹೇಗಾದರೂ ಅಂತಿಮವಾಗಿ ಕಳೆದ ಕೆಲವು ಗಂಟೆಗಳಲ್ಲಿ ವರ್ಚುವಲ್ ಅಪೂರ್ವ ಗೌಡ ಅವರ / ಅವಳ ಖಾತೆಯನ್ನು ತೆಗೆದುಹಾಕಿದ್ದಾರೆ ಈಗ ನಾವೆಲ್ಲರೂ ನಮ್ಮನ್ನು ತಟ್ಟಿಕೊಳ್ಳಬಹುದು ಮತ್ತು ಮುಂದುವರಿಯಬಹುದು. ನಿಮ್ಮೆಲ್ಲರಿಗೂ ದೊಡ್ಡ ಅಪ್ಪುಗೆ ಎಂದು ಬರೆದಿದ್ದಾರೆ.

## ಅಬ್ಸ್ ಫೋಟೋ ಹಂಚಿಕೊಂಡ ಶಿಲ್ಪಾ ಶೆಟ್ಟಿ, 49ರಲ್ಲೂ ಫಿಟ್ನೆಸ್ ಕಂಡು ಫ್ಯಾನ್ಸ್ ಫಿದಾ!

49 ವರ್ಷದ ಶಿಲ್ಪಾ ಶೆಟ್ಟಿ ಜಿಮ್ ಸೆಷನ್ ಫೋಟೋಗಳನ್ನು ಶೇರ್ ಮಾಡಿ ಫ್ಯಾನ್ಸ್‌ಗೆ ಶಾಕ್ ಕೊಟ್ಟಿದ್ದಾರೆ. ಅವರ ಫಿಟ್ನೆಸ್ ನೋಡಿ ಎಲ್ಲರೂ ದಂಗಾಗಿದ್ದಾರೆ, ಕಾಮೆಂಟ್‌ಗಳಲ್ಲಿ ಹೊಗಳಿಕೆಗಳ ಸುರಿಮಳೆಯೇ ಹರಿಯುತ್ತಿದೆ.

ಶಿಲ್ಪಾ ಶೆಟ್ಟಿ ಸೋಮವಾರ ಸೋಶಿಯಲ್ ಮೀಡಿಯಾದಲ್ಲಿ ಜಿಮ್ ಸೆಷನ್‌ನ ಕೆಲವು ಫೋಟೋಗಳನ್ನು ಶೇರ್ ಮಾಡಿದ್ದಾರೆ, ಇವು ಜನರ ಗಮನ ಸೆಳೆಯುತ್ತಿವೆ.

"ಸ್ವೆಟಿ ಶೆಟ್ಟಿ...ಗೋ" (ಬೆವರಿನಿಂದ ತೊಯ್ದ ಶೆಟ್ಟಿ) ಎಂದು ನಟಿ ಈ ಫೋಟೋಗಳಿಗೆ ಶೀರ್ಷಿಕೆ ಬರೆದಿದ್ದಾರೆ. ಫೋಟೋಗಳಲ್ಲಿ ಶಿಲ್ಪಾ ಕಪ್ಪು ಜಿಮ್ ಉಡುಪಿನಲ್ಲಿ ತಮ್ಮ ಫಿಟ್ ದೇಹ ಮತ್ತು ಟೋನ್ಡ್ ಅಬ್ಸ್ ತೋರಿಸುತ್ತಿರುವುದನ್ನು ಕಾಣಬಹುದು.

ಶಿಲ್ಪಾ ಫೋಟೋಗಳ ಕೊನೆಯಲ್ಲಿ ಒಂದು ಇಂಗ್ಲಿಷ್ ಪೋಸ್ಟ್ ಅನ್ನು ಸಹ ಹಂಚಿಕೊಂಡಿದ್ದಾರೆ, ಅದರ ಕನ್ನಡ ಅನುವಾದ ಹೀಗಿದೆ, "ಇಂದು ಸೋಮವಾರ. ನಾನು ಸಂತೋಷವಾಗಿದ್ದೇನೆ. ನಾನು ಧನ್ಯಳಾಗಿದ್ದೇನೆ ಮತ್ತು ಈ ವಾರ ಅದ್ಭುತವಾಗಿ ಕಳೆಯಲಿದ್ದೇನೆ."

49ನೇ ವಯಸ್ಸಿನಲ್ಲಿ ಶಿಲ್ಪಾ ಶೆಟ್ಟಿ ಅವರ ಫಿಗರ್ ನೋಡಿ ಅವರ ಅಭಿಮಾನಿಗಳು ಬೆರಗಾಗಿದ್ದಾರೆ ಅಥವಾ ಶಿಲ್ಪಾ ಅವರನ್ನು ನೋಡಿ ಬಾಯಿ ತೆರೆದುಕೊಂಡೇ ಇದ್ದಾರೆ ಎಂದು ಹೇಳಬಹುದು.

ಒಬ್ಬ ಇಂಟರ್ನೆಟ್ ಬಳಕೆದಾರ ಶಿಲ್ಪಾ ಶೆಟ್ಟಿ ಅವರ ಫೋಟೋಗಳನ್ನು ನೋಡಿದ ನಂತರ ಬರೆದಿದ್ದಾರೆ, "ವಯಸ್ಸು ಕೇವಲ ಒಂದು ಸಂಖ್ಯೆ." ಒಬ್ಬ ಬಳಕೆದಾರ ಬರೆದಿದ್ದಾರೆ, "ನಾವೂ ಜಿಮ್‌ಗೆ ಹೋಗಬೇಕು...ಸಿಕ್ಸ್ ಪ್ಯಾಕ್ ನೋಡಿ ಹೊಟ್ಟೆ ಉರಿಯುತ್ತಿದೆ." ಒಬ್ಬ ಬಳಕೆದಾರರ ಕಾಮೆಂಟ್, "ಅಬ್ಬಾ ಸಿಕ್ಸ್ ಪ್ಯಾಕ್." ಒಬ್ಬ ಬಳಕೆದಾರ ಬರೆದಿದ್ದಾರೆ, "ಅವಳಿಗೆ ಇನ್ನೂ 24 ವರ್ಷ." ಒಬ್ಬ ಬಳಕೆದಾರ ತಮಾಷೆ ಮಾಡುತ್ತಾ ಬರೆದಿದ್ದಾರೆ, "ಓಹ್! 5 ಗ್ರಾಂ ಕೊಬ್ಬು ಇನ್ನೂ ಇದೆ."

ಶಿಲ್ಪಾ ಶೆಟ್ಟಿ ತಮ್ಮ ಫಿಟ್ನೆಸ್‌ಗೆ ಹೆಸರುವಾಸಿಯಾಗಿದ್ದಾರೆ ಮತ್ತು ಆಗಾಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಇದಕ್ಕೆ ಸಂಬಂಧಿಸಿದ ಫೋಟೋಗಳು ಮತ್ತು ವೀಡಿಯೊಗಳನ್ನು ಹಂಚಿಕೊಳ್ಳುತ್ತಾರೆ ಮತ್ತು ತಮ್ಮ ಅಭಿಮಾನಿಗಳಿಗೆ ಸ್ಫೂರ್ತಿ ನೀಡುತ್ತಾರೆ.





ಪ್ರಕಾಶಕ– ಸಂಪಾದಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ಕಸಬ(ಹೋಬಳಿ), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934. VOLUME-16 / ISSUE-20. Email-mussanje2010@gmail.com, Phone: 9448074878